ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 110 ಸಂಚಿಕೆ- 110 | PAGE-8 ಪುಟ-8 | ಶನಿವಾರ 07.06.2025 | RS.2/- ಬೆಲೆ 2/-

# ಕಾಲ್ತುಳಿತ ಪ್ರಕರಣ: ಉದ್ದೇಶಪೂರ್ವಕ ಲೋಪ ಅಲ್ಲ



ಕಲಬುರಗಿ: ಜೂ.6 ಆರ್.ಸಿ.ಬಿ ತಂಡದ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ 11 ಅಮಾಯಕರು ಸಾವಿಗೀಡಾಗಿದ್ದರ ಬಗ್ಗೆ ಸರ್ಕಾರಕ್ಕೆ ವಿಷಾದವಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಉದ್ದೇಶಪೂರ್ವಕ ಲೋಪ ಆಗಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಐಟಿ-ಬಿಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡರು.

ಇಲ್ಲಿನ ಐವಾನ್-ಎ-ಶಾಹಿ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಘಟನೆಗೆ ಸಂಬಂಧಪಟ್ಟಂತೆ ಈಗಾಗಲೇ ಬೆಂಗಳೂರು ಪೊಲೀಸ್ ಕಮಿಷನರ್ ದಯಾನಂದ ಒಳಗೊಂಡಂತೆ ಕಾರ್ಯವ್ಯಾಪ್ತಿಯ ಎಲ್ಲ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ. ಪೊಲೀಸರು ವಿಜಯೋತ್ಸವಕ್ಕೆ ಅನುಮತಿ ನೀಡಿರಲಿಲ್ಲ. ಮೇಲಾಗಿ, ಇದ್ದಕ್ಕಿದ್ದಂತೆ ಮೂರು ಲಕ್ಷಕ್ಕೂ ಅಧಿಕ ಜನರು ಒಂದೆಡೆ ಜಮಾವಣೆ ಆಗಿದ್ದರಿಂದ ಇಂಥದ್ದೊಂದು ದುರ್ಘಟನೆಗೆ ಹಾದಿ ಮಾಡಿಕೊಟ್ಟಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಹಿಂದೆ ಗೆಲುವು ಸಾಧಿಸಿದ ಬಳಿಕ ಎರಡು ದಿನ ಬಿಟ್ಟು ವಿಜಯೋತ್ಸವ ಏರ್ಪಡಿಸಲಾಗಿತ್ತು. ಆದರೆ, ಈ ಬಾರಿ ಕೇವಲ 24 ತಾಸುಗಳೊಳಗೆ ಸಂಭ್ರಮಾಚರಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಬಂದೋಬಸ್ತ್‌ಗೆ ಸಂಬಂಧಿಸಿದಂತೆ ಪೊಲೀಸರು ಅನುಮತಿ ನಿರಾಕರಣೆ ಮಾಡಿರುವ ಕುರಿತು ಸಹ ದಾಖಲೆಗಳಿವೆ ಎಂದರು.

ಇನ್ನು, ದುರ್ಘಟನೆಗೆ ಸಂಬಂಧಿಸಿದಂತೆ ರಾಜ್ಯದ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಗೃಹ ಸಚಿವರು ಹೊಣೆಗಾರಿಕೆ ಸ್ವೀಕರಿಸಿದ್ದಾರೆ. ಇದರಲ್ಲಿ ಉದ್ದೇಶಪೂರ್ವಕವಾದ ಲೋಪವಾಗಿಲ್ಲ ಎಂದ ಮೇಲೆ ರಾಜೀನಾಮೆಗೆ ಒತ್ತಾಯಿಸುವುದು ಸರಿಯಲ್ಲ ಎಂದು ಸಚಿವ ಪ್ರಿಯಾಂಕ್ ನುಡಿದರು.

ಇದೇವೇಳೆ, ಬಿಜೆಪಿ ಮುಖಂಡರ ವಿರುದ್ಧ ವಾಗ್ದಾಳಿ ನಡೆಸಿದ ಸಚಿವ ಪ್ರಿಯಾಂಕ್, ಬಿಜೆಪಿಯವರು ರಣಹದ್ದುಗಳಿದ್ದಂತೆ. ಅವರಿಗೆ ಸಾವಿನ ಮೇಲೆ ರಾಜಕಾರಣ ಮಾಡುವುದರಿಂದ ಎಲ್ಲಿಲ್ಲದ ಖುಷಿ ಲಭಿಸುತ್ತದೆ. ಇಷ್ಟಕ್ಕೂ ಅವರು ಸಾವಿನ ಮೇಲೆ ರಾಜಕಾರಣ ಮಾಡುವುದು ಇದೇ ಮೊದಲೇನೂ ಅಲ್ಲವಲ್ಲ ಎಂದು ವಿಷಾದಿಸಿದರು.

ಒಂದಂತು ನಿಜ. ವಿಧಾನಸೌಧದ ಎದುರು ಆರ್.ಸಿ.ಬಿ ಆಟಗಾರರಿಗೆ ಸನ್ಮಾನ ಸಮಾರಂಭವನ್ನು ಆಟೋಗ್ರಾಫ್ ಪಡೆಯಲಿಕ್ಕಾಗಲಿ, ಫೋಟೋಗ್ರಾಫ್ ಪಡೆಯಲಿಕ್ಕಾಗಲಿ ಹಮ್ಮಿಕೊಂಡಿರಲಿಲ್ಲ. ಆಟೋಗ್ರಾಫ್, ಫೋಟೋಗ್ರಾಫ್ ಹುಚ್ಚು ಏನಿದ್ದರೂ ಮೋದಿ ಅವರಿಗಿದೆ ಎಂದು ಕಿಚಾಯಿಸಿದರು.

**ರಾಜೀನಾಮೆಗೆ ಒಂದೇ ಮಾನದಂಡ ಇರಲಿ**

ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ 11 ಮಂದಿ ಸಾವನ್ನಪ್ಪಿದ ಘಟನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ರಾಜೀನಾಮೆ ನೀಡಬೇಕು ಎನ್ನುವುದಾದರೆ, ಇಂತಹ ಪ್ರಕರಣಗಳಲ್ಲಿ ರಾಜೀನಾಮೆ ನೀಡಲು ದೇಶಾದ್ಯಂತ ಒಂದೇ ಮಾನದಂಡ ನಿಗದಿಪಡಿಸಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದರು. ಬಿಜೆಪಿಯವರು ಕೇಳುತ್ತಿದ್ದಾರೆ ಎಂಬ ಕಾರಣಕ್ಕೆ ನಾವು ರಾಜೀನಾಮೆ ನೀಡಲು ಸಿದ್ಧವಿದ್ದರೂ, ಅದಕ್ಕೂ ಮುಂಚೆ ಎಲ್ಲದಕ್ಕೂ ಒಂದೇ ಮಾನದಂಡ ನಿಗದಿಪಡಿಸಬೇಕು ತಾನೇ ಎಂದು ಪ್ರಶ್ನಿಸಿದರು.

ಪೆಹಲ್ಗಾಂನಿಂದ ಹಿಡಿದು ಕುಂಭಮೇಳದವರೆಗೂ ಒಂದೇ ಮಾನದಂಡ ಇರಬೇಕು. ಪೆಹಲ್ಗಾಂನಲ್ಲಿ ಭಯೋತ್ಪಾದಕರು 26 ಜನರನ್ನು ಬಲಿ ತೆಗೆದುಕೊಂಡರು. ಇವತ್ತಿಗೂ ಆ ಭಯೋತ್ಪಾದಕರು ಎಲ್ಲಿದ್ದಾರೆ ಎಂಬುದರ ಕುರಿತು ಸುಳಿವಿಲ್ಲ. ಪೆಹಲ್ಗಾಂ ಘಟನೆಗೆ ಸಂಬಂಧಿಸಿದಂತೆ ಯಾರಾದರೂ ಗೃಹ ಸಚಿವ ಅಮಿತ್ ಶಾ ಅವರ ರಾಜೀನಾಮೆ ಕೇಳಿದ್ದಿದೆಯಾ ಎಂದು ಗರಂ ಆಗಿ ಪ್ರಶ್ನಿಸಿದರು.

ಪ್ರಯಾಗರಾಜನಲ್ಲಿ ನಡೆದ ಮಹಾಕುಂಭ ಮೇಳದಲ್ಲಿ ನೂರಾರು ಅಮಾಯಕ ಭಕ್ತರು

ಕಾಲ್ತುಳಿತಕ್ಕೆ ಸಿಲುಕಿ ಸಾವನ್ನಪ್ಪಿದರು. ಆಗ ಯಾರೊಬ್ಬರೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ರಾಜೀನಾಮೆ ಕೇಳಿದರಾ?

ಅಲ್ಲಿ ಸಾವು ಸಂಭವಿಸಿದರೆ ಅದು ಭಕ್ತರ ತಪ್ಪು.

ಇಲ್ಲಿ ಸಾವು ಸಂಭವಿಸಿದರೆ ಅದು ಸರ್ಕಾರದ ತಪ್ಪು ಎಂದು ವ್ಯಾಖ್ಯಾನಿಸುವುದು ಯಾವ ನ್ಯಾಯ ಎಂದು ಸಚಿವ ಪ್ರಿಯಾಂಕ್ ಖರ್ಗೆ ಅಚ್ಚರಿ ವ್ಯಕ್ತಪಡಿಸಿದರು.

ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್, ಡಾ.ಕಿರಣ ದೇಶಮುಖ ಉಪಸ್ಥಿತರಿದ್ದರು.

# 'ಸರಿಗಮಪ ಸೀಸನ್ 21'ರ ವಿನ್ನರ್ ಆದ ಬೀದರ್ ಪ್ರತಿಭೆ ಶಿವಾನಿ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.6: ಕನ್ನಡ ಸರಿಗಮಪ ಸೀಸನ್ 21ಕ್ಕೆ ಅದ್ದೂರಿ ತೆರೆ ಬಿದ್ದಿದೆ. ಈ ಸೀಸನ್‌ನ ವಿನ್ನರ್ ಪಟ್ಟವು ಬೀದರ್‌ನ ಶಿವಾನಿ ಸ್ವಾಮಿಗೆ ಒಲಿದಿದೆ.

ಬೀದರ್‌ನ ಪ್ರತಿಭೆ ಶಿವಾನಿ ಸೀಸನ್ ಕೊನೆವರೆಗೂ ತಮ್ಮ ಅದ್ಭುತ ಪ್ರತಿಭೆ ಪ್ರದರ್ಶನ ಮಾಡಿದ್ದಾರೆ. ಆಕೆ ಹಾಡಿದ್ದ ಶಿವಾ ಶಿವಾ ಗಾಯನಕ್ಕೆ ಇಡೀ ಕರುನಾಡೇ ಮೆಚ್ಚುಗೆ ವ್ಯಕ್ತಪಡಿಸಿತ್ತು. ಶಿವಾನಿ ಈ ಹಿಂದೆ ಹಿಂದಿ ಐಡಿಯಲ್ ಸಂಗೀತ ಕಾರ್ಯಕ್ರಮದಲ್ಲೂ ಭಾಗವಹಿಸಿದ್ದರು. ಅಲ್ಲಿಯೂ ಜನಪ್ರಿಯತೆ ಗಳಿಸಿದ್ದರು. ಸರಿಗಮಪ ಸೀಸನ್ 21ರ 'ಟಿಕೆಟ್ ಟು ಫಿನಾಲೆ' ಮೊದಲ ಪಾಸ್ ಅನ್ನು ಶಿವಾನಿಯೇ ತೆಗೆದುಕೊಂಡಿದ್ದರು. ಆ ಮೂಲಕ ಫಿನಾಲೆಗೆ ಗ್ರ್ಯಾಂಡ್ ಎಂಟ್ರಿ ಕೊಟ್ಟಿದ್ದರು.

ಶಿವಾನಿ, ಬಾಳು ಬೆಳಗುಂದಿ, ರಶ್ಮಿ, ಆರಾಧ್ಯಾ ರಾವ್, ದ್ಯಾಮೇಶ್, ಅಮೋಘ ವರ್ಷ ಫಿನಾಲೆಗೆ ಎಂಟ್ರಿ ಕೊಟ್ಟಿದ್ದರು. ಇದೀಗ ಶಿವಾನಿ ಟ್ರೋಫಿಯನ್ನು ತನ್ನದಾಗಿಸಿಕೊಂಡಿದ್ದಾರೆ.

# ಕೆಎಸ್‌ಸಿಎ ವಿರುದ್ಧ ಬಲವಂತದ ಕ್ರಮ ಬೇಡ: ಹೈಕೋರ್ಟ್ ಮಧ್ಯಂತರ ಆದೇಶ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.6: ಆರ್‌ಸಿಬಿ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತಕ್ಕೆ 11 ಮಂದಿ ಬಲಿಯಾದ ಪ್ರಕರಣದಲ್ಲಿ ಕೆಎಸ್‌ಸಿಎಗೆ ತಾತ್ಕಾಲಿಕ ರಿಲೀಫ್ ಸಿಕ್ಕಿದೆ.

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ವಿರುದ್ಧ ಬಲವಂತದ ಕ್ರಮ ಬೇಡ ಎಂದು ಹೈಕೋರ್ಟ್ ಏಕಸದಸ್ಯ ಪೀಠವು ಶುಕ್ರವಾರ ಮಧ್ಯಂತರ ಆದೇಶ ಹೊರಡಿಸಿದೆ.

ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಕೆಎಸ್‌ಸಿಎ ಆಡಳಿತ ಮಂಡಳಿ ಮತ್ತು ಅದರ ಉನ್ನತ ಅಧಿಕಾರಿಗಳ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ನ್ಯಾಯಾಲಯದ ಮೆಟ್ಟಿಲೇರಿದ್ದ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ (ಕೆಎಸ್‌ಸಿಎ) ಅಧಿಕಾರಿಗಳಿಗೆ ಬಂಧನದಿಂದ ರಕ್ಷಣೆ ನೀಡಲು ಹೈಕೋರ್ಟ್ ಅನುಮತಿ ನೀಡಿದೆ.

ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರು, ಕೆಎಸ್‌ಸಿಎ ಆಡಳಿತ ಮಂಡಳಿಯ ಅಧ್ಯಕ್ಷ ರಘುರಾಮ್ ಭಟ್, ಕಾರ್ಯದರ್ಶಿ ಎ. ಶಂಕರ್ ಮತ್ತು

(2ನೇ ಪುಟ ನೋಡಿ)

# ವಿಶ್ವದ ಅತಿ ಎತ್ತರದ ಚೆನಾಬ್ ರೈಲ್ವೆ ಸೇತುವೆ ಉದ್ಘಾಟಿಸಿದ ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ

ಶ್ರೀನಗರ:ಜೂ.6: ಪಹಲ್ಗಾಮ್ ಭಯೋತ್ಪಾದಕ ದಾಳಿ ಬಳಿಕ ಜಮ್ಮು ಮತ್ತು ಕಾಶ್ಮೀರಕ್ಕೆ ಮೊದಲ ಬಾರಿಗೆ ಭೇಟಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರಿಂದು ವಿಶ್ವದ ಅತಿ ಎತ್ತರದ ಚೆನಾಬ್ ರೈಲ್ವೆ ಸೇತುವೆಯನ್ನು ಉದ್ಘಾಟಿಸಿದರು.

ಜೊತೆಗೆ ಅಂಜಿ ನದಿಯ ಮೇಲೆ ನಿರ್ಮಿಸಲಾದ ಭಾರತದ ಮೊಟ್ಟ ಮೊದಲ ಕೇಬಲ್-ಸ್ಟೇಡ್ ರೈಲು ಸೇತುವೆಯನ್ನೂ ಉದ್ಘಾಟಿಸಿದರು. ಈ ವೇಳೆ ಜಮ್ಮು-ಕಾಶ್ಮೀರ ಸಿಎಂ ಒಮರ್ ಅಬ್ದುಲ್ಲಾ ಹಾಗೂ ರಾಜ್ಯಪಾಲ ಮನೋಜ್ ಸಿನ್ಹಾ ಉಪಸ್ಥಿತರಿದ್ದರು. ಚೆನಾಬ್ ಸೇತುವೆಯನ್ನು ಉದ್ಘಾಟಿಸಿದ ಬಳಿಕ ರಾಷ್ಟ್ರಧ್ವಜ ಹಿಡಿದು ಒಂದು ಸುತ್ತು ಪ್ರದಕ್ಷಿಣೆ ಹಾಕಿದರು.

ಚೆನಾಬ್ ಸೇತುವೆ ಬಳಿಕ ಜಮ್ಮು ಮತ್ತು ಕಾಶ್ಮೀರದ ಕತ್ರಾ-ಶ್ರೀನಗರ ನಡುವಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಹಸಿರು ನಿಶಾನೆ ತೋರಿದರು. ಹಾಗೂ ವಿದ್ಯಾರ್ಥಿಗಳೊಂದಿಗೆ ಕೆಲ ಕಾಲ ಸಂವಾದ ಸಹ ನಡೆಸಿದರು. ವಿವಿಧ ಅಭಿವೃದ್ಧಿ ಕಾಮಗಾರಿ ಯೋಜನೆಗಳಿಗೆ ಚಾಲನೆ ನೀಡುವ ಹಿನ್ನೆಲೆ ಜಮ್ಮು ಕಾಶ್ಮೀರಕ್ಕಿಂದು ಪ್ರಧಾನಿ ಮೋದಿ ಪ್ರವಾಸ ಕೈಗೊಂಡಿದ್ದಾರೆ. ಮಾತಾ ವೈಷ್ಣೋದೇವಿ ದೇವಾಲಯದ ನೆಲೆಯಾದ ಕತ್ರಾದಲ್ಲಿ 46,000 ಕೋಟಿ ರೂ.ಗಳಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಇಂದು ಮೋದಿ ಚಾಲನೆ ನೀಡಲಿದ್ದಾರೆ. ಕತ್ರಾದಲ್ಲಿ 350 ಕೋಟಿ ರೂ. ಗಿಂತಲೂ ಹೆಚ್ಚು ವೆಚ್ಚದ ಶ್ರೀ ಮಾತಾ ವೈಷ್ಣೋದೇವಿ ವೈದ್ಯಕೀಯ ಸಂಸ್ಥೆಯ ಶಂಕುಸ್ಥಾಪನೆಯನ್ನೂ ನೆರವೇರಿಸಲಿದ್ದಾರೆ ಎಂದು ಪ್ರಧಾನ

(2ನೇ ಪುಟ ನೋಡಿ)

# ರಾಜತಾಂತ್ರಿಕತೆ ಠುಸ್: ಕೇಂದ್ರ ಸರ್ಕಾರವನ್ನು ಅಣಕಿಸಿದ ಕಾಂಗ್ರೆಸ್



ಮಲ್ಲಮ್ಮನುಡಿವಾರ್ತೆ ನವದೆಹಲಿ:ಜೂ.6: ಪ್ರಧಾನಿ ನರೇಂದ್ರ ಮೋದಿಯವರ ವಿದೇಶಾಂಗ ನೀತಿ, ರಾಷ್ಟ್ರೀಯ ಭದ್ರತೆ ಮತ್ತು ರಾಜತಾಂತ್ರಿಕತೆ-ಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎತ್ತಿದ ಕಾಂಗ್ರೆಸ್ ರಾಷ್ಟ್ರೀಯ ವಕ್ತಾರೆ ಸುಪ್ರಿಯಾ ಶ್ರೀನೇಟ್, ಅಮೆರಿಕ, ರಷ್ಯಾ, ಚೀನಾ, ಪಾಕಿಸ್ತಾನ ಮತ್ತು ಇತರ ದೇಶಗಳೊಂದಿಗಿನ ಭಾರತದ ಇತ್ತೀಚಿನ ಸಂಬಂಧಗಳನ್ನು ಉಲ್ಲೇಖಿಸಿ, ಮೋದಿ ಸರ್ಕಾರವು ರಾಷ್ಟ್ರೀಯ ಹಿತಾಸಕ್ತಿಗಳೊಂದಿಗೆ ರಾಜಿ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದರು. ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗಳನ್ನು ಉಲ್ಲೇಖಿಸಿ, ಶ್ರೀನೇಟ್ ಅವರು 9 ವೀಡಿಯೊಗಳು ಮತ್ತು 2 ಟ್ವೀಟ್‌ಗಳಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮವು ಅವರ ಮಧ್ಯಸ್ಥಿಕೆಯಿಂದಾಗಿ ಸಂಭವಿಸಿದೆ ಎಂದು ಹೇಳಿಕೊಂಡಿದ್ದಾರೆ ಎಂದು ಹೇಳಿದರು. ಸುಪ್ರಿಯಾ ಶ್ರೀನೇಟ್ ಇದು ನಮ್ಮ ಸಾರ್ವಭೌಮತ್ವದ ಮೇಲಿನ ನೇರ ದಾಳಿ ಎಂದು ಹೇಳಿದರು. ಆದರೆ ಸಿಂಧೂರ್ ವ್ಯಾಪಾರಿ ನರೇಂದ್ರ ಮೋದಿ ಮೌನವಾಗಿದ್ದಾರೆ. ಪ್ರಧಾನಿ ಮೋದಿ ಪ್ರತಿಯೊಂದು ವಿಷಯದ ಬಗ್ಗೆಯೂ ಮಾತನಾಡಲು ಸಿದ್ಧರಾಗಿದ್ದಾರೆ. ಆದರೆ ಟ್ರಂಪ್ ಅವರ ಈ ಹೇಳಿಕೆಗಳ ಬಗ್ಗೆ ಅವರ ಮೌನ ಅನುಮಾನಾಸ್ಪದವಾಗಿದೆ ಎಂದು ಅವರು ಆರೋಪಿಸಿದರು. ಟ್ರಂಪ್ ಮತ್ತು ಪುಟಿನ್ ನಡುವಿನ ಇತ್ತೀಚಿನ

(2ನೇ ಪುಟ ನೋಡಿ)

# ಕಾಲ್ತುಳಿತ: ನಾಲ್ವರಿಗೆ 14 ದಿನ ನ್ಯಾಯಾಂಗ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.6: ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧನಕ್ಕೊಳಗಾಗಿರವ ಆರ್‌ಸಿಬಿ ಮಾರ್ಕೆಟಿಂಗ್ ಮ್ಯಾನೇಜರ್ ನಿಖಿಲ್ ಸೋಸಲೆ ಸೇರಿದಂತೆ ನಾಲ್ವರಿಗೆ ಕೋರ್ಟ್ ಶುಕ್ರವಾರ 14 ದಿನ ನ್ಯಾಯಾಂಗ ಬಂಧನ ವಿಧಿಸಿದೆ.

ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ, ಅಪರಾಧ ವಿಭಾಗ ಮತ್ತು ಬೆಂಗಳೂರು ಪೊಲೀಸರು ಇಂದು ಬೆಳಗ್ಗೆ ಜಂಟಿ ಕಾರ್ಯಾಚರಣೆ ನಡೆಸಿ ಖಅಃಯ ನಿಖಿಲ್ ಸೋಸಲೆ, ಸುಮಂತ್, ಡಿಎನ್‌ಎ ಮ್ಯಾನೇಜರ್ ಕಿರಣ್, ಸಿಬ್ಬಂದಿ ಸುನೀಲ್ ಮ್ಯಾಥ್ಯೂ ಅವರನ್ನು ಬಂಧಿಸಲಾಗಿತ್ತು.

ಇಂದು ಸಂಜೆ ಬಂಧಿತ ನಾಲ್ವರನ್ನು ಬೆಂಗಳೂರಿನ 41ನೇ ಎಸಿಜೆಎಂ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಆರೋಪಿಗಳ ವಿಚಾರಣೆ ನಡೆಸಿದ ಕೋರ್ಟ್, ನಾಲ್ವರನ್ನು ಜೂನ್ 19ರ ವರೆಗೆ ನ್ಯಾಯಾಂಗ ಬಂಧನಕ್ಕೆ ನೀಡಿ ಆದೇಶ ಹೊರಡಿಸಿದೆ.

ಇನ್ನು ದುಬೈಗೆ ತೆರಳುತ್ತಿದ್ದಾಗ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಬಂಧಿಸಲ್ಪಟ್ಟ ನಿಖಿಲ್ ಸೋಸಲೆ, ಕರ್ನಾಟಕ ಹೈಕೋರ್ಟ್‌ನಲ್ಲಿ ತನ್ನ ಬಂಧನವನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್ ಆರ್ ಕೃಷ್ಣ ಕುಮಾರ್ ಅವರು, ಬಂಧನದಿಂದ ಮಧ್ಯಂತರ ಪರಿಹಾರ ನೀಡಲು ನಿರಾಕರಿಸಿದ್ದು, ಪ್ರಕರಣವನ್ನು ಜೂನ್ 9 ಕ್ಕೆ ಮುಂದೂಡಿದ್ದಾರೆ.

ಮೊದಲ ಬಾರಿ ಐಪಿಎಲ್ ಟ್ರೋಫಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಬುಧವಾರ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಸಂಭವಿಸಿ 11 ಜನ ಮೃತಪಟ್ಟಿದ್ದರು.

# ಕಾಲ್ತುಳಿತ: ವಿರಾಟ್ ಕೊಹ್ಲಿ ವಿರುದ್ಧವೂ ದೂರು ದಾಖಲು



ಮಲ್ಲಮ್ಮನುಡಿ ವಾರ್ತೆ

ಬೆಂಗಳೂರು:ಜೂ.6: ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್‌ಸಿಬಿ ಸ್ಟಾರ್ ಆಟಗಾರ ವಿರಾಟ್ ಕೊಹ್ಲಿ ವಿರುದ್ಧವೂ ಪೊಲೀಸರಿಗೆ ಶುಕ್ರವಾರ ದೂರು ನೀಡಲಾಗಿದೆ. ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಆರ್‌ಸಿಬಿ, ಕೆಎಸ್‌ಸಿಎ, ಡಿಎನ್‌ಎ ವಿರುದ್ಧ ಬೆಂಗಳೂರಿನ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ನಾಲ್ವರನ್ನು ಬಂಧಿಸಲಾಗಿದೆ.

ಇದೀಗ ವಿರಾಟ್ ಕೊಹ್ಲಿ ವಿರುದ್ಧವೂ ಎಫ್‌ಐಆರ್ ದಾಖಲಿಸುವಂತೆ ನೈಜ ಹೋರಾಟಗಾರರ ವೇದಿಕೆ ಆಗ್ರಹಿಸಿದೆ. ಅಲ್ಲದೆ ಈ ಸಂಬಂಧ ನೈಜ ಹೋರಾಟಗಾರರ ವೇದಿಕೆಯ ಎಚ್ ಎಂ ವೆಂಕಟೇಶ್ ಅವರು ವಿರಾಟ್ ಕೊಹ್ಲಿ ವಿರುದ್ಧ ದೂರು ನೀಡಿದ್ದಾರೆ.

ಮೊದಲು ದೂರು ಸ್ವೀಕರಿಸಲು ಹಿಂದೇಟು ಹಾಕಿದ ಕಬ್ಬನ್ ಪಾರ್ಕ್ ಪೊಲೀಸರು, ಹಲವು ಗಂಟೆಗಳ ಬಳಿಕ ಕೊನೆಗೂ ವಿರಾಟ್ ಕೊಹ್ಲಿ ವಿರುದ್ಧ ದೂರು ದಾಖಲಿಸಿಕೊಂಡಿದ್ದಾರೆ. ಅಲ್ಲದೆ ಈಗಾಗಲೇ ದಾಖಲಾಗಿರುವ ಎಫ್‌ಐಆರ್ ಜತೆ ಇದನ್ನು ಪರಿಗಣಿಸುವುದಾಗಿ ಹಿಂಬರಹ ನೀಡಿದ್ದಾರೆ.

ಮೊದಲ ಬಾರಿ ಖಕಐ ಟ್ರೋಫಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಬುಧವಾರ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಸಂಭವಿಸಿ 11 ಜನ ಮೃತಪಟ್ಟಿದ್ದಾರೆ.

# ಸಿಎಂ, ಡಿಸಿಎಂ, ಪರಂ ರಾಜೀನಾಮೆ ನೀಡಲಿ: ವಿಜಯೇಂದ್ರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.6: ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆಯಲ್ಲಿ ನಡೆದ ಕಾಲ್ತುಳಿತ, 11 ಸಾವಿನ ಸಂಬಂಧ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಎಫ್‌ಐಆರ್‌ನಲ್ಲಿ ಕೆಎಸ್‌ಸಿಎ , ಆರ್‌ಸಿಬಿ ಮತ್ತು ಡಿಎನ್‌ಎ ಇವೆಂಟ್ ಮ್ಯಾನೇಜ್ಮೆಂಟ್ ಸಂಸ್ಥೆಯನ್ನು ಆರೋಪಿಗಳಾಗಿ ಹೆಸರಿಸಿದ್ದಾರೆ. ಸ್ವತಃ ಮುಖ್ಯಮಂತ್ರಗಳೇ ಆರೋಪಿ ನಂ.1, ಉಪ ಮುಖ್ಯಮಂತ್ರಿಗಳು ಆರೋಪಿ ನಂ.2, ಮಾನ್ಯ ಗೃಹ ಸಚಿವ ಪರಮೇಶ್ವರ್ ಅವರು ಆರೋಪಿ ನಂ.3 ಎಂದು ವಾಗ್ದಾಳಿ ನಡೆಸಿದರು. ಕಾಲ್ತುಳಿತ ಹಾಗೂ 11 ಜನ ಅಮಾಯಕರ ಸಾವಿನ ಸಂಬಂಧ ಕೊನೆಗೂ ಕಬ್ಬನ್ ಪಾರ್ಕ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ. ರಾಜ್ಯ ಹೈಕೋರ್ಟ್ ಸ್ವಯಂಪ್ರೇರಿತ ಕೇಸ್ ತೆಗೆದುಕೊಂಡು ರಾಜ್ಯ ಸರಕಾರಕ್ಕೆ ಛೀಮಾರಿ ಹಾಕಿದ ನಂತರ ಸರಕಾರ ಎಚ್ಚೆತ್ತುಕೊಂಡಿದೆ ಎಂದು ವಿಶ್ಲೇಷಿಸಿದರು.

ಮುಖ್ಯಮಂತ್ರಿಗಳು, ಪೊಲೀಸ್ ಅಧಿಕಾರಿಗಳನ್ನು ಹರಕೆಯ ಕುರಿ ಮಾಡುವ ಬದಲಾಗಿ ತಾವೇ ಜವಾಬ್ದಾರಿ, ನೈತಿಕ ಹೊಣೆ ಹೊತ್ತು ಉಪ ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕಿದೆ ಎಂದು ಮತ್ತೊಮ್ಮೆ ಒತ್ತಾಯಿಸಿದರು. ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ (ಕೆಎಸ್‌ಸಿಎ), ಆರ್‌ಸಿಬಿ ಮತ್ತು ಏಜೆನ್ಸಿಯಾದ ಡಿಎನ್‌ಎಯನ್ನ ಪ್ರಮುಖವಾಗಿ ಆರೋಪಿಗಳೆಂದು ಎಫ್‌ಐಆರ್‌ನಲ್ಲಿ ವಿಜಯೇಂದ್ರ ಉಲ್ಲೇಖಿಸಿದ್ದಾರೆ.

ಎಫ್‌ಐಆರ್ ತರುವಾಯ, ಮುಖ್ಯಮಂತ್ರಿಗಳು ಏಕಾಏಕಿ ಜಾಗೃತರಾಗಿದ್ದಾರೆ. ಮುಖ್ಯಮಂತ್ರಿಗಳು ರಾತ್ರಿ ಪತ್ರಿಕಾಗೋಷ್ಠಿ ನಡೆಸಿ ಬೆಂಗಳೂರು ಕಮೀಷನರ್ ಸೇರಿ 5 ಜನ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿದ್ದಾರೆ. ಅರ್ಥಾತ್,

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ರೈಲ್ವೆ ಸೇತುವೆ ಉದ್ಘಾಟಿಸಿದ ಪ್ರಧಾನಿ ಮೋದಿ

ಮಂತ್ರಿ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಚೆನಾಬ್ ಸೇತುವೆ ವಿಶೇಷತೆ ಏನು?ಜಮ್ಮು ಕಾಶ್ಮೀರದ ಚೇನಾಬ್ ನದಿಗೆ ಅಡ್ಡಲಾಗಿ ಕಟ್ಟಲಾಗಿರುವ ಚೆನಾಬ್ ಸೇತುವೆ ಐಫೆಲ್ ಟವರ್‌ಗಿಂತಲೂ ಎತ್ತರವಾಗಿ ನಿರ್ಮಾಣವಾಗಿರುವ, ವಿಶ್ವದಲ್ಲೇ ಅತಿ ಎತ್ತರದ ರೈಲ್ವೆ ಸೇತುವೆ ಎಂಬ ಹೆಗ್ಗಳಿಕೆ ಪಡೆದುಕೊಂಡಿದೆ. 2021ರಲ್ಲಿ ಸೇತುವೆಯ ಕಮಾನು ಕೆಲಸ ಪೂರ್ಣಗೊಂಡಿತ್ತು. ಈ ಸೇತುವೆಯನ್ನು ಅಂದಾಜು 18 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದೆ. ಇದು ಪ್ಯಾರಿಸ್‌ನ ಐಫೆಲ್ ಟವರ್‌ಗಿಂತಲೂ 35 ಮೀ. ಎತ್ತರದಲ್ಲಿ ನಿರ್ಮಾಣವಾಗಿದೆ. ಚೆನಾಬ್ ಸೇತುವೆ ಚೆನಾಬ್ ನದಿ ಮಟ್ಟದಿಂದ 359 ಮೀ. ಎತ್ತರದಲ್ಲಿ ನಿರ್ಮಾಣವಾಗಿದ್ದು, 1.3 ಕಿ.ಮೀ. ಉದ್ದವಿದೆ. ಇದರ ಉಕ್ಕಿನ ಕಮಾನುಗಳು ಭೂಕಂಪನ, ಬಲವಾದ ಗಾಳಿಯನ್ನೂ ತಡೆಯುವ ಸಾಮರ್ಥ್ಯ ಹೊಂದಿದೆ, ಆ ರೀತಿ ಕಮಾನುಗಳನ್ನು ವಿನ್ಯಾಸಗೊಳಿಸಲಾಗಿದೆ.

ರೈಲ್ವೇ ಸೇತುವೆ ನಿರ್ಮಾಣಕ್ಕೆ ಕಮಾನು ಸ್ಥಾಪನೆ ಎಂಜಿನಿಯರುಗಳಿಗೆ ದೊಡ್ಡ ಸವಾಲಾಗಿತ್ತು. ರೈಲ್ವೇ ಮಾರ್ಗದ 111 ಕಿ.ಮೀ ನಲ್ಲಿ 97 ಕಿ.ಮೀ ನಷ್ಟು ಸುರಂಗ ಮಾರ್ಗವೇ ಇದೆ. ಇಷ್ಟು ದೂರದ ಸುರಂಗ ಮಾರ್ಗ ದೇಶದ ಬೇರೆ ಯಾವ ಭಾಗಗಳಲ್ಲೂ ಮಾಡಲಾಗಿಲ್ಲ.

ಸೇತುವೆ ನಿರ್ಮಾಣಕ್ಕೆ 17 ಕಂಬಗಳನ್ನು ನಿರ್ಮಿಸಲಾಗಿದ್ದು, ಒಟ್ಟು 28,660 ಮೆಟ್ರಿಕ್ ಟನ್‌ನಷ್ಟು ಉಕ್ಕನ್ನು ಬಳಸಲಾಗಿದೆ. ಕಮಾನಿನ ತೂಕ 10,619 ಮೆಟ್ರಿಕ್ ಟನ್ ಇದೆ. ಸೇತುವೆಗೆ ಬಳಸಲಾದ ಉಕ್ಕು 10 ಡಿಗ್ರಿ ಸೆಲ್ಸಿಯಸ್‌ನಿಂದ ಮೈನಸ್ 40 ಡಿಗ್ರಿ ಸೆಲ್ಸಿಯಸ್‌ವರೆಗಿನ ತಾಪಮಾನಕ್ಕೆ ಸೂಕ್ತವಾಗಿದೆ. ಕನಿಷ್ಠ 120 ವರ್ಷಗಳ ಜೀವಿತಾವಧಿ ಈ ರಚನೆಗಿದ್ದು, ಗಂಟೆಗೆ 266 ಕಿ.ಮೀ ವೇಗದ ಗಾಳಿಯನ್ನು ತಡೆದುಕೊಳ್ಳುವ ಸಾಮರ್ಥ್ಯವನ್ನು ಹೊಂದಿದೆ.

ಕಾಶ್ಮೀರಕ್ಕೆ ರೈಲು ಮಾರ್ಗವನ್ನು ಹಾಕುವ ಯೋಜನೆಯನ್ನು 1990ರ ದಶಕದಲ್ಲಿ ಆಗಿನ ಪ್ರಧಾನಿ ಪಿ.ವಿ ನರಸಿಂಹರಾವ್ ಅವರು ಪ್ರಕಟಿಸಿದ್ದರು. 2002ರಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರು ಆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಕರೆದಿದ್ದರು.

# ರಾಜೀನಾಮೆ ನೀಡಲಿ: ವಿಜಯೇಂದ್ರ

ಮುಖ್ಯಮಂತ್ರಿಗಳು ಮೊನ್ನೆ ನಡೆದ ದುರ್ಘಟನೆ, 11 ಜನರ ಸಾವಿಗೆ ರಾಜ್ಯ ಸರಕಾರದಿಂದ ತಪ್ಪಾಗಿದೆ ಎಂದು ಒಪ್ಪಿಕೊಂಡಿದ್ದಾರೆ. ತಮ್ಮ ತಪ್ಪನ್ನು ಮುಚ್ಚಿ ಹಾಕಿಕೊಳ್ಳಲು ಪೊಲೀಸರನ್ನು ಹರಕೆಯ ಕುರಿಯಾಗಿ ರಾಜ್ಯ ಸರ್ಕಾರ ಮಾಡಿದೆ ಎಂದು ಆರೋಪಿಸಿದರು.

ತಪ್ಪಿಸಿಕೊಳ್ಳುವ ಷಡ್ಯಂತ್ರ ಮುಖ್ಯಮಂತ್ರಿಗಳದ್ದು..

ಪೊಲೀಸ್ ಅಧಿಕಾರಿಗಳನ್ನು ಹರಕೆಯ ಕುರಿ ಮಾಡಿ ತಪ್ಪಿಸಿಕೊಳ್ಳುವ ಷಡ್ಯಂತ್ರ ಮುಖ್ಯಮಂತ್ರಿಗಳದು ಎಂದು ಬಿ.ವೈ ವಿಜಯೇಂದ್ರ ಅವರು ಆರೋಪಿಸಿದರು. ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿದ್ದೀರಿ. ವೈಫಲ್ಯಕ್ಕಾಗಿ ಬೇಹುಗಾರಿಕಾ ದಳದ ಅಧಿಕಾರಿಗಳನ್ನು ಯಾಕೆ ಅಮಾನತು ಮಾಡಿಲ್ಲ? ಎಂದು ಕೇಳಿದರು. ಬೇಹುಗಾರಿಕಾ ದಳ ನೇರ ಸಿಎಂ ಕೆಳಗಡೆ ಬರುತ್ತದೆ, ಅವರನ್ನು ಅಮಾನತು ಮಾಡಿದ್ರೆ ಇದು ಮುಖ್ಯಮಂತ್ರಿಗಳ ಬುಡಕ್ಕೇ ಬರಲಿದೆ. ಆದ್ದರಿಂದ ಅವರನ್ನ ಅಮಾನತು ಮಾಡಿಲ್ಲ ಎಂದು ವಿಜಯೇಂದ್ರ ತಿಳಿಸಿದರು.

ನಾವು 30–40 ಸಾವಿರ ಜನರು ಬರುವ ನಿರೀಕ್ಷೆ ಇಟ್ಟುಕೊಂಡಿದ್ದೆವು. 2 ರಿಂದ 3 ಲಕ್ಷ ಜನರು ಬಂದಿದ್ದಾರೆ, ನಾವು ಇದನ್ನು ನಿರೀಕ್ಷೆ ಮಾಡಿರಲಿಲ್ಲ ಎನ್ನುವ ಮೂಲಕ ಬೇಹುಗಾರಿಕಾ ದಳದ ವೈಫಲ್ಯವನ್ನು ಸ್ವತಃ ಮುಖ್ಯಮಂತ್ರಿಗಳು ಒಪ್ಪಿಕೊಂಡಿದ್ದಾರೆ ಎಂದು ಸ್ಪಷ್ಟಪಡಿಸಿದರು.

ನಿನ್ನೆ ನಡೆದ ಐಪಿಎಲ್ ಫೈನಲ್ ಪಂದ್ಯದಲ್ಲಿ ಗೆದ್ದು ಬೀಗಿದ ಹೆಮ್ಮೆಯ ಆರ್‌ಸಿಬಿ ತಂಡಕ್ಕೆ ಅಭಿನಂದನೆಗಳು. ರಾಜ್ಯ ಅತ್ಯಂತ ಹೆಮ್ಮೆ ಹಾಗೂ ಖುಷಿಪಡುವ ಕೆಲಸವನ್ನು ಆರ್‌ಸಿಬಿ ತಂಡ ಮಾಡಿದ್ದು, ಅವರನ್ನು ಇಂದು ಸಂಜೆ 4 ಗಂಟೆಗೆ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಅಭಿನಂದಿಸಲಿದ್ದೇವೆ. ಈ ಐತಿಹಾಸಿಕ ಕ್ಷಣದಲ್ಲಿ ನೀವೂ ಭಾಗಿಯಾಗಿ ಎಂದು ಸ್ವತಃ ಮುಖ್ಯಮಂತ್ರಿಗಳೇ ಸಾಮಾಜಿಕ ಜಾಲತಾಣದ ಮೂಲಕ ಕರೆ ಕೊಟ್ಟಿದ್ದರು. 3 ರಂದು ಮ್ಯಾಚ್ ಆಗುವ ಮೊದಲೇ ಕೆಎಸ್‌ಸಿಎ, ಆರ್‌ಸಿಬಿ ಮತ್ತು ಏಜೆನ್ಸಿಯಾದ ಡಿಎನ್‌ಎ ಕಡೆಯಿಂದ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ಹೋಗಿದ್ದರು. ಸಂಭ್ರಮಾಚರಣೆಗೆ ಅನುಮತಿ ಕೋರಿದ್ದರು. ಲಕ್ಷೋಪಲಕ್ಷ ಆರ್‌ಸಿಬಿ ಅಭಿಮಾನಿಗಳು ಬರುವ ಕಾರಣ ನಾಳೆ ಸಂಭ್ರಮಾಚರಣೆಗೆ ಅನುಮತಿ ಕೊಡಲಾಗದು ಎಂದು ಪೊಲೀಸ್ ಅಧಿಕಾರಿಗಳು ಮುಚ್ಚಳಿಕೆ ಬರೆದುಕೊಟ್ಟಿದ್ದರು ಎಂದು ವಿವರಿಸಿದರು.

ಪೊಲೀಸ್ ಇಲಾಖೆ ಸಂಭ್ರಮಾಚರಣೆಗೆ ಅನುಮತಿ ಕೊಟ್ಟಿರಲಿಲ್ಲ. ಲಕ್ಷ ಲಕ್ಷ ಜನರು ಬರುವುದು ಗೊತ್ತಿದ್ದು ಹೀಗೆ ಹೇಳಿದ್ದಾರೆ. ಹಾಗಿದ್ದರೆ ರಾಜ್ಯ ಸರಕಾರಕ್ಕೆ ಯಾರು ಅನುಮತಿ ಕೊಟ್ಟರು ಎಂದು ಪ್ರಶ್ನಿಸಿದರು. ವಿಧಾನಸೌಧದ ಬಳಿ ಲಕ್ಷ ಲಕ್ಷ ಜನ ಆರ್‌ಸಿಬಿ ಅಭಿಮಾನಿಗಳು ಬಂದಿದ್ದರು. ಅವರಿಗೆ ಯಾರ ಅನುಮತಿ ಇತ್ತು ಎಂದು ಕೇಳಿದರು.

ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಅನುಮತಿ ಕೊಟ್ಟಿರಲಿಲ್ಲ. ಕಾನೂನುಬಾಹಿರವಾಗಿ ಕಾರ್ಯಕ್ರಮ ನಡೆದಿದೆ ಎಂದು ಎಫ್‌ಐಆರ್ ಮಾಡಿದ್ದಾರೆ. ಅಲ್ಲಿ ಅನುಮತಿ ಇಲ್ಲದಿದ್ದರೂ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಚಿನ್ನಸ್ವಾಮಿ ಸ್ಟೇಡಿಯಂಗೆ ಹೋಗಿ, ಅಲ್ಲಿ ಸಂಭ್ರಮಾಚರಣೆಯಲ್ಲಿ ಯಾಕೆ ಭಾಗವಹಿಸಿದ್ದರು? ಅಲ್ಲಿ ಕಪ್ ಹಿಡಿದು ಮುತ್ತಿಕ್ಕುವ ಕೆಲಸವನ್ನು ಯಾಕೆ ಮಾಡಿದರು ಎಂದು ಕೇಳಿದರು.

ಸರ್ಕಾರ ಕಿತ್ತು ಹಾಕಬೇಕೆಂಬ ಆಶಯ ಜನಸಾಮಾನ್ಯರದ್ದು..

ಇವತ್ತು ಬೆಳಿಗ್ಗೆ ಉಪ್ಪಾರಪೇಟೆ ಪೊಲೀಸ್ ಠಾಣೆ ಬಳಿ ವಾಹನದಲ್ಲಿ ಬರುತ್ತಿದ್ದೆ. ಒಬ್ಬ ಆಟೋ ಚಾಲಕನನ್ನು ಮಾತನಾಡಿಸಿದೆ. ಏನ್ರೀ ವಿರೋಧ ಪಕ್ಷದವರು ನೀವಿದ್ದೀರಿ. ಪಾಪ 11 ಜನ ಅಮಾಯಕರು ಪ್ರಾಣ ಕಳಕೊಂಡಿದ್ದಾರೆ. ಈ ದರಿದ್ರ ಕಾಂಗ್ರೆಸ್ ಸರಕಾರವನ್ನ ನೀವು ಕಿತ್ತು ಹಾಕಬೇಕು ಎಂದು ಅವರು ಹೇಳಿದರು. ಇದು ಜನರ ಈಗಿನ ಆಶಯ ಎಂದು ಬಿ.ವೈ ವಿಜಯೇಂದ್ರ ಅವರು ವಿವರಿಸಿದರು.

ಈ ವಿಜಯೋತ್ಸವ ಸರ್ಕಾರಕ್ಕೆ ಯಾಕೆ ಬೇಕಿತ್ತು ಎಂದು ಕಾಂಗ್ರೆಸ್ಸಿನ ಮುಖಂಡ ಬಿ.ಕೆ ಹರಿಪ್ರಸಾದ್ ಅವರು ಪ್ರಶ್ನಿಸಿದ್ದಾರೆ. ಆರ್‌ಸಿಬಿ ಗೆಲುವು ಸಾಧಿಸಿದೆ ಎಂದು ರಾಜ್ಯ ಸರ್ಕಾರ ಯಾಕೆ ಸಂಭ್ರಮಾಚರಣೆ ಮಾಡಿದೆ ಎಂದು ಕೇಳಿದ್ದಾರೆ. 11 ಜನರ ಸಾವಿಗೆ ರಾಜ್ಯ ಸರ್ಕಾರವೇ ಉತ್ತರಿಸಬೇಕಿದೆ ಎಂದಿದ್ದಾಗಿ ಗಮನ ಸೆಳೆದರು.

ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಜೆಡಿಎಸ್ ಸಂಸದ ಎಂ.ಮಲ್ಲೇಶ್ ಬಾಬು, ಮಾಜಿ ಸಂಸದ ಪ್ರತಾಪ್ ಸಿಂಹ, ಶಾಸಕ ಹರೀಶ್ ಪೂಂಜಾ ಮತ್ತು ಜೆಡಿಎಸ್ ಮುಖಂಡರು ಮತ್ತು ವಿಧಾನ ಪರಿಷತ್ ಮಾಜಿ ಸದಸ್ಯರಾದ ಹೆಚ್.ಎಂ.ರಮೇಶ್ ಗೌಡ, ಆರ್. ಚೌಡ ರೆಡ್ಡಿ ಅವರು ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# ಹೈಕೋರ್ಟ್ ಮಧ್ಯಂತರ ಆದೇಶ

ಖಜಾಂಚಿ ಇ.ಎಸ್.ಜೈರಾಮ್ ಅವರಿಗೆ ಮಧ್ಯಂತರ ಪರಿಹಾರ ನೀಡಿ ಆದೇಶ ಹೊರಡಿಸಿದ್ದಾರೆ. ಅಲ್ಲದೇ, ತನಿಖೆಗೆ ಸಹಕರಿಸುವಂತೆ ಸೂಚನೆ ನೀಡಿದ್ದಾರೆ.

ಹಕ್ಕುಗಳು ಮತ್ತು ವಾದಗಳಿಗೆ ಯಾವುದೇ ಪೂರ್ವಾಗ್ರಹವಿಲ್ಲದೆ, ಮುಂದಿನ ವಿಚಾರಣೆಯ ದಿನಾಂಕದವರೆಗೆ ಅರ್ಜಿದಾರರು ನಡೆಯುತ್ತಿರುವ ತನಿಖೆ, ವಿಚಾರಣೆ, ಆಯೋಗ ಇತ್ಯಾದಿಗಳಿಗೆ ಸಹಕರಿಸಬೇಕು ಎಂದು ಕೋರ್ಟ್ ತಿಳಿಸಿದೆ.ಸರ್ಕಾರದ ಪರವಾಗಿ ಹಾಜರಾಗಿದ್ದ ಅಡ್ವೊಕೇಟ್ ಜನರಲ್ ಶಶಿ ಕಿರಣ್, ತನಿಖೆ ಮುಂದುವರಿಸಲು ಅವಕಾಶ ನೀಡಬೇಕು ಎಂದು ಮನವಿ ಮಾಡಿದರು. ಆದರೆ, ಅರ್ಜಿದಾರರ ಪರ ವಕೀಲರು ರಾಯಲ್ ಚಾಲೆಂಜರ್ಸ್ ಬೆಂಗಳೂರಿನ ಮಾರ್ಕೆಟಿಂಗ್ ಮುಖ್ಯಸ್ಥರನ್ನು ಈಗಾಗಲೇ ಬಂಧಿಸಲಾಗಿದೆ ಎಂದು ಕೋರ್ಟ್ ಗಮನ ಸೆಳೆದರು. 'ಒಬ್ಬ ಆರೋಪಿಯನ್ನು ವಿಮಾನ ನಿಲ್ದಾಣದಲ್ಲಿ ಬಂಧಿಸಲಾಯಿತು. ಆತ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದ. ಆತ ದುಬೈಗೆ ಹೋಗುತ್ತಿದ್ದ' ಎಂದು ಎಜಿ ತಿಳಿಸಿದರು.

ವಾದ–ಪ್ರತಿವಾದ ಆಲಿಸಿದ ನ್ಯಾಯಾಲಯ ಕೆಎಸ್‌ಸಿಎ ಪ್ರತಿನಿಧಿಗಳಿಗೆ ಬಂಧನದಿಂದ ರಕ್ಷಣೆ ನೀಡಿದೆ. ಪ್ರಕರಣವನ್ನು ರದ್ದುಗೊಳಿಸುವ ಅರ್ಜಿಯ ಮುಂದಿನ ವಿಚಾರಣೆ ಜೂನ್ 16 ರಂದು ನಡೆಯಲಿದೆ.

# ಸರ್ಕಾರವನ್ನು ಅಣುಕಿಸಿದ ಕಾಂಗ್ರೆಸ್

ಫೋನ್ ಸಂಭಾಷಣೆಯಲ್ಲಿ ಭಾರತ–ಪಾಕ್ ಕದನ ವಿರಾಮದ ಉಲ್ಲೇಖವಿರುವುದರಿಂದ ಈಗ ರಷ್ಯಾ ಕೂಡ ಈ ಹೇಳಿಕೆಯನ್ನು ಒಪ್ಪಿಕೊಳ್ಳುತ್ತಿದೆ ಎಂದು ಅವರು ಹೇಳಿದರು.

ಸುಪ್ರಿಯಾ ಶ್ರೀನೆಟ್ ಕದನ ವಿರಾಮವನ್ನು ತೆಗೆದುಹಾಕುವುದನ್ನು ಭಾರತಕ್ಕೆ ರಾಜತಾಂತ್ರಿಕ ಸೋಲು ಎಂದು ಕರೆದರು. ವಿದೇಶಿ ಒತ್ತಡದಲ್ಲಿ ಪ್ರಧಾನಿ ಮೋದಿ ರಾಷ್ಟ್ರೀಯ ಹಿತಾಸಕ್ತಿಗಳಲ್ಲಿ ರಾಜಿ ಮಾಡಿಕೊಂಡರು ಎಂದು ಹೇಳಿದರು. 2014ಕ್ಕಿಂತ ಮೊದಲು ಭಾರತ ಪಾಕಿಸ್ತಾನವನ್ನು ಭಯೋತ್ಪಾದಕ ರಾಷ್ಟ್ರವಾಗಿ ಪ್ರತ್ಯೇಕಿಸುವಲ್ಲಿ ಯಶಸ್ವಿಯಾಗಿತ್ತು ಎಂದು ಶ್ರೀನೆಟ್ ಹೇಳಿದರು. ನಮ್ಮ ಸೇನೆಯ ಶೌರ್ಯ ಮತ್ತು ಕಾರ್ಯತಂತ್ರವು ಪಾಕಿಸ್ತಾನವನ್ನು ಪದೇ ಪದೇ ಸೋಲಿಸಿತು, ಆದರೆ ಈಗ ಪ್ರಧಾನಿ ಮೋದಿಯವರ ವಿಫಲ ರಾಜತಾಂತ್ರಿಕತೆಯು ಪಾಕಿಸ್ತಾನವನ್ನು ಹೀರೋ ಮಾಡಿದೆ ಎಂದರು.

ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಪಾಕಿಸ್ತಾನವನ್ನು ಮೂಲೆಗುಂಪು ಮಾಡುವಲ್ಲಿ ಮೋದಿ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಸುಪ್ರಿಯಾ ಶ್ರೀನೆಟ್ ಆರೋಪಿಸಿದರು. ಐಎಂಎಫ್ ಪಾಕಿಸ್ತಾನಕ್ಕೆ 3 ಬಿಲಿಯನ್ ಡಾಲರ್ ಪರಿಹಾರ ಪ್ಯಾಕೇಜ್ ನೀಡಿತು. ಭಾರತ ಅದನ್ನು ತಡೆಯಲು ಸಾಧ್ಯವಾಗಲಿಲ್ಲ. ಪ್ರಧಾನಿ ಮೋದಿ ಅವರನ್ನು ಭೇಟಿಯಾದ ಎರಡು ದಿನಗಳ ನಂತರ ಎಡಿಬಿ ಪಾಕಿಸ್ತಾನಕ್ಕೆ 800 ಮಿಲಿಯನ್ ಡಾಲರ್ ನೀಡಿತು. ವಿಶ್ವ ಬ್ಯಾಂಕ್ ಪಾಕಿಸ್ತಾನದಲ್ಲಿ 40 ಬಿಲಿಯನ್ ಡಾಲರ್ ಹೂಡಿಕೆ ಮಾಡುತ್ತಿದೆ. ಪಾಕಿಸ್ತಾನವನ್ನು ಯುಎನ್ ಭಯೋತ್ಪಾದನಾ ನಿಗ್ರಹ ಸಮಿತಿಯ ಉಪಾಧ್ಯಕ್ಷರನ್ನಾಗಿ ಮಾಡಲಾಗಿದೆ. ಅಮೆರಿಕ ಅಧ್ಯಕ್ಷ ಟ್ರಂಪ್ ಪಾಕಿಸ್ತಾನ ನಾಯಕನನ್ನು ಹೊಗಳುತ್ತಿರುವುದರಿಂದ ಭಾರತದ ಅಂತರರಾಷ್ಟ್ರೀಯ ವಿಶ್ವಾಸಾರ್ಹತೆ ಕುಸಿಯುತ್ತಿರುವ ಬಗ್ಗೆ ಸುಪ್ರಿಯಾ ಶ್ರೀನೆಟ್ ಕಳವಳ ವ್ಯಕ್ತಪಡಿಸಿದರು. ಭಾರತದ ಸಾಂಪ್ರದಾಯಿಕ ಮಿತ್ರ ರಾಷ್ಟ್ರವಾಗಿದ್ದ ರಷ್ಯಾ ಈಗ ಪಾಕಿಸ್ತಾನದೊಂದಿಗೆ 2.5 ಬಿಲಿಯನ್ ಡಾಲರ್ ಒಪ್ಪಂದ ಮಾಡಿಕೊಳ್ಳುತ್ತಿದ್ದು, ಭಾರತದ ಬಗ್ಗೆ ಮೌನವಾಗಿದೆ ಎಂದರು.

# ಗಾಂಧಿಗಂಜ್ ಬ್ಯಾಂಕ್‌ನಲ್ಲಿ ಪರಿಸರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 06 : ಇಲ್ಲಿಯಗಾಂಧಿಗಂಜ್‌ಸಹಕಾರ ಬ್ಯಾಂಕ್‌ನಲ್ಲಿಗುರುವಾರ ವಿಶ್ವ ಪರಿಸರದಿನಆಚರಿಸಲಾಯಿತು.

ಬ್ಯಾಂಕ್ ಅಧ್ಯಕ್ಷ ವಿಜಯಕುಮಾರ ಪಾಟೀಲ ಗಾದಗಿ ಸಸಿಗೆ ನೀರೆರೆದು ಕಾರ್ಯಕ್ರಮಉದ್ಘಾಟಿಸಿದರು. ಸಿಬ್ಬಂದಿಗೆಸಸಿವಿತರಿಸಲಾಯಿತು.

ಬ್ಯಾಂಕ್ ಸಿಬ್ಬಂದಿ, ಆರ್ ಆರ್‌ಕೆಸಮಿತಿಪದವಿಕಾಲೇಜಿನ ಆಡಳಿತಾಧಿಕಾರಿಡಾ.ಬಂಡಯ್ಯ ಸ್ವಾಮಿ ಇದ್ದರು.

# ಸರ್ಕಾರಿ ಆಸ್ಪತ್ರೆಯಲ್ಲಿ ನಿರ್ಲಕ್ಷ್ಯ ಸಲ್ಲದು :ಡಾ. ಶೈಲೇಂದ್ರ ಬೆಲ್ದಾಳೆ



ಬೀದರ:ಜೂ.6:ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಯಲ್ಲಿ ನಿರ್ಲಕ್ಷ್ಯಸಲ್ಲದುಉತ್ತಮಚಿಕಿತ್ಸೆ ನೀಡಿ ಮಾತ್ರೆ, ಔಷಧಗಳನ್ನು ವೈದ್ಯರು ರೋಗಿಗಳಿಗೆ ವಿತರಿಸಬೇಕು.ಮಾತ್ರೆ,ಔಷಧಗಳು ದಾಸ್ತಾನಿದ್ದರೂ ಹೊರಗಿನ ಮೆಡಿಕಲ್ ಸ್ಟೋರ್‌ಗಳಿಗೆ ಬರೆದುಕೆಣಟಿಜಜಜಿಟಿಜಜಟ್ಟರೆ, ಅಂತಹ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ.ಬೀದರ್‌ದಕ್ಷಿಣಕ್ಷೇತ್ರದ ಬೇಮಳಖೇಡಾಗ್ರಾಮದಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಗರ್ಭಿಣಿ ಮಹಿಳೆ ಹೆರಿಗೆ ಬಳಿಕ ತೀವ್ರ ರಕ್ತ ಸ್ರಾವದಿಂದ ಮೃತಪಟ್ಟಿದ್ದಾರೆ ಎಂದು ಸುದ್ದಿ ತಿಳಿದು ಸ್ಥಳಕ್ಕೆ ಭೇಟಿ ನೀಡಿ ಆಸ್ಪತ್ರೆ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಿ ಮಾತನಾಡಿದರು. ದಿನಾಂಕ 2ರಂದು ಹೇರಿಗೆಗಾಗಿ ದಾಖಲಾಗಿದ ಮಹಿಳೆ ವೈದ್ಯರ ನಿರ್ಲಕ್ಷ್ಯತನದಿಂದ ಮೃತಪಟ್ಟಿದ್ದಾರೆ ಎಂದು ಆರೋಪದ ಹಿನ್ನೆಲೆಯಲ್ಲಿ ಬೇಮಳಖೇಡಾ ಗ್ರಾಮದ ಸರಕಾರಿ ಆರೋಗ್ಯ ಕೇಂದ್ರ–ಕ್ಕೆ ಬೀದರ ದಕ್ಷಿಣ ಕ್ಷೇತ್ರದ ಶಾಸಕಡಾ.ಶೈಲೇಂದ್ರಬೆಲ್ದಾಳೆ ಅವರು ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಅಸಮಾಧಾನವ್ಯಕ್ತಪಡಿಸಿದರು.

ಬೇಮಳಖೇಡಾಗ್ರಾಮದನಿವಾಸಿ ಮಹಾನಂದಾ ವೀರಪ್ಪ ಡಾಲಿ ಮೃತ ದುರ್ದೈವಿ ಮಹಿಳೆ. ಹೆರಿಗೆಗಾಗಿ ಬೇಮಳಖೇಡಾ ಸರಕಾರಿಆಸ್ಪತ್ರೆಗೆದಾಖಲಾಗಿದ್ದು ಡೆಲಿವರಿ ಸಹ ಆಗಿ ಹೆಣ್ಣು ಮಗುವಿಗೆ ಜನಿಸಿದೆ. ಬಳಿಕ ರಕ್ತ ಸ್ರಾವ ಆಗುತ್ತಿದ್ದ ಕಾರಣ ಇಲ್ಲೆ ಚಿಕಿತ್ಸೆನೀಡಿದ್ದು ಆದರೂ ರಕ್ತಸ್ರಾವ ನಿಲ್ಲದ ಕಾರಣ ಬೀದರಗೆಶಿಫಾರಸ್ಸುಮಾಡಿದ್ದು, ಸಮಯಕ್ಕೆಅಂಬುಲೆನ್ಸ್ ಇಲ್ಲದ ಕಾರಣ ಖಾಸಗಿ ವಾಹನದಲ್ಲಿ ಬೀದರಗೆ ಸಾಗಿಸುತ್ತಿದ ದಾರಿ ಮಧ್ಯೆಮಹಿಳೆ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಇನ್ನು ಡೆಲಿವರಿ ಆದ ಮೇಲೆ ರಕ್ತಸ್ರಾವ ನಿಲ್ಲದ ಸಮಯದ ತಡವಾಗಿ ಮತ್ತು ಸಮಯಕ್ಕೆ ಅಂಬುಲೆನ್ಸ್ ಇಲ್ಲದೆ ತಡವಾಗಿ ಮಹಿಳೆ ಮೃತಪಟ್ಟಿದ್ದಾಳೆಂದು ಮೃತಳ ಸಂಬಂಧಿಕರಆರೋಪವಾಗಿದೆ. ಈ ಹಿನ್ನೆಲೆಯಲ್ಲಿ ಶಾಸಕರಾದ ಡಾ.ಶೈಲೇಂದ್ರಬೆಲ್ದಾಳೆಅವರು ಭೇಟಿ ನೀಡಿ ಆಸ್ಪತ್ರೆಯಲ್ಲಿ ಅವ್ಯವಸ್ಥೆಕುರಿತು ಅಸಮಧಾನ ವ್ಯಕ್ತಪಡಿಸಿದ್ದಾರೆ.

# ಅಕ್ರಮ ಗೋಹತ್ಯೆ ತಡೆಯಿರಿ: ಶಾಸಕ ಪ್ರಭು ಚವ್ಹಾಣ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಜೂ.6:ಬಕ್ರೀದ್ ಹಬ್ಬದ ಹಿನ್ನೆಲೆ ಜಿಲ್ಲೆಯಲ್ಲಿ ಅಕ್ರಮವಾಗಿಗೋಹತ್ಯೆಮತ್ತು ಸಾಗಣೆಯನ್ನುತಡೆಯಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಾರತ ಸಂಸ್ಕೃತಿಯಲ್ಲಿಗೋಮಾತೆಯನ್ನು ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸುತ್ತಾರೆ. ಗೋಮಾತೆ ಅಮೃತ ನೀಡುವ ದೇವತೆ. ಗೋವಿನ ಹಾಲು ಅಮೃತಕ್ಕೆ ಸಮ ಎಂದು ಭಾವಿಸುತ್ತೇವೆ. ಪೂಜೆ,ಹೋಮ–ಹವನಗಳಲ್ಲಿ ಪ್ರಥಮಸ್ಥಾನನೀಡಲಾಗುತ್ತದೆ. ಗೋವು ಮಾತ್ರವಲ್ಲದೆ ಹಸುವಿನ ಹಾಲು ಸಾಗಣೆ ಗೋಮೂತ್ರ ಇವೆಲ್ಲ ಶ್ರೇಷ್ಠ ಹಾಗೂ ಔಷಧಿಯ ರೂಪದಲ್ಲಿ ಬಳಸುವರು ಇದ್ದಾರೆ. ಸನಾತನ ಧರ್ಮದಲ್ಲಿಗೋಮಾತೆಯನ್ನು ದೇವರು ರೂಪದಲ್ಲಿ ಸಮಸ್ತ ಭಾರತೀಯರು ಕಾಣುತ್ತಾರೆ. ಹಾಗಾಗಿಗೋವುಗಳನ್ನುಹತ್ಯೆ ಮಾಡುವುದು ಕೋಟ್ಯಾಂತರ ಹಿಂದುಗಳ ಭಾವನೆಗೆ ಧ–ಕ್ಕೆಯಾಗುತ್ತದೆ ಎಂದಿದ್ದಾರೆ.

ಗೋಮಾತೆಯನ್ನುಅಕ್ರಮವಾಗಿ ಕಸಾಯಿಖಾನೆಗೆ ಸಾಗಿಸುವುದು ಮತ್ತು ವಧೆ ಮಾಡುವುದನ್ನು ತಪ್ಪಿಸಲು ಹಿಂದೆ ನಮ್ಮ ಸರ್ಕಾರ ರಾಜ್ಯದಲ್ಲಿಕರ್ನಾಟಕಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮವನ್ನು ಜಾರಿಗೊಳಿಸಲಾಗಿದೆ. ಆದರೂ ರಾಜಾರೋಷವಾಗಿ ಅಕ್ರಮ ಗೋ ಸಾಗಾಣಿಕೆ ಮತ್ತು ವಧೆ ಎಗ್ಗಿಲ್ಲದೆ ನಡೆಯುತ್ತಿದೆ. ಹೈದ್ರಾಬಾದ, ಮುಂಬೈ, ಪುಣೆಗಳಿಗೆ ಗೋವುಗಳನ್ನು ಸಾಗಿಸಲಾಗುತ್ತಿದೆ.ಗೋವುಗಳನ್ನು ವಧೆ ಮಾಡುವುದರ ಮೇಲೆ ಹೆಚ್ಚಿನ ನಿಗಾ ವಹಿಸಬೇಕು ಎಂದು ಹೇಳಿದ್ದಾರೆ.

ಎಲ್ಲ ಚೆಕ್ ಪೋಸ್ಟ್‌ಗಳಲ್ಲಿ ವಾಹನಗಳತಪಾಸಣೆಅಚ್ಚುಕಟ್ಟಾಗಿ ನಡೆಯಬೇಕು. ಯಾವೊಂದು ಗೋವು ಕೂಡ ಅಕ್ರಮವಾಗಿ ಸಾಗಾಟವಾಗಬಾರದು. ಗೋಮಾತೆಗೆ ಬಲಿ ಕೊಡಲು ಅವಕಾಶಮಾಡಿಕೊಡಬಾರದು . ಇಲ್ಲವಾದಲ್ಲಿ ನಾನು ಸುಮ್ಮನಿರುವುದಿಲ್ಲ ಎಂದು ಶಾಸಕರು ಎಚ್ಚರಿಸಿದ್ದಾರೆ.

# ಬಸವ ಸಂಸ್ಕೃತಿ ಅಭಿಯಾನ ಅರ್ಥಪೂರ್ಣವಾಗಿ ಆಚರಿಸಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.6:ರಾಜ್ಯದಾದ್ಯಂತ ಬರುವ ಸೆಪ್ಟೆಂಬರ್ ತಿಂಗಳಲ್ಲಿ ನಡೆಸಲು ಉದ್ದೇಶಿಸಿರುವ ಬಸವ ಸಂಸ್ಕೃತಿ ಅಭಿಯಾನ ಅರ್ಥಪೂರ್ಣವಾಗಿಆಚರಿಸಬೇಕು ಎಂದು ವಿವಿಧ ಬಸವಪರ ಸಂಘಸಂಸ್ಥೆಗಳಮುಖಂಡರು, ಬಸವಾಭಿಮಾನಿಗಳು ಮನವಿ ಮಾಡಿದ್ದಾರೆ.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಬುಧವಾರ ಲಿಂಗಾಯತಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷನಾಡೋಜ ಡಾ.ಬಸವಲಿಂಗಪಟ್ಟದ್ದೇವರಿಗೆ ಪ್ರಮುಖರು ಮನವಿ ಪತ್ರ ಸಲ್ಲಿಸಿದರು.

ಬಸವಸಂಸ್ಕೃತಿ ಅಭಿಯಾನ ಅರ್ಥಪೂರ್ಣವಾಗಿಜರುಗಬೇಕು. ಬಸವಾದಿ ಶರಣರ ತತ್ವಗಳು ಗ್ರಾಮ ಮಟ್ಟಕ್ಕೆ ತಲುಪಿಸಲು ವ್ಯಾಪಕ ಪ್ರಚಾರವಾಗಬೇಕು. ಎಲ್ಲ ಬಸವಪರ ಸಂಘಟನೆ ಒಗ್ಗೂಡಿಸಿಜಿಲ್ಲಾ,ತಾಲೂಕುಮತ್ತು ಗ್ರಾಮಮಟ್ಟದಲ್ಲಿಸಮಿತಿಗಳನ್ನು ರಚಿಸಿ ಜನಸಾಮಾನ್ಯರು ಈ ಅಭಿಯಾನದಲ್ಲಿಪಾಲ್ಗೊಳ್ಳುವಂತೆ ಮಾಡಬೇಕುಎಂದುಓಂಪ್ರಕಾಶ ರೊಟ್ಟೆ ಅವರು ಶ್ರೀಗಳಲ್ಲಿ ಮನವಿ ಮಾಡಿದರು.

ಮನವಿ ಸ್ವೀಕರಿಸಿದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಬಸವ ಸಂಸ್ಕೃತಿ ಅಭಿಯಾನ ನಿಗದಿತ ವೇಳಾ ಪಟ್ಟಿಯಂತೆ ಜರುಗಲಿದೆ. ಈ ಅಭಿಯಾನವೂ ಬಸವನ ಬಾಗೇವಾಡಿಯಿಂದ ಆರಂಭಗೊಂಡುಬೆಂಗಳೂರಿನಲ್ಲಿ ಸಮಾವೇಶಗೊಳ್ಳಲಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಜಿಲ್ಲಾಶರಣಸಾಹಿತ್ಯಪರಿಷತ್ತು ಅಧ್ಯಕ್ಷಶಂಭುಲಿಂಗ ಕಾಮಣ್ಣ, ತಾಲೂಕು ಕಸಾಪ ಅಧ್ಯಕ್ಷ ನಾಗಭೂಷಣಮಾಮಡಿ,ಶರಣ ಸಾಹಿತ್ಯಪರಿಷತ್ತುತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಮಲ್ಲಮ್ಮ ಆರ್ ಪಾಟೀಲ್, ಪ್ರಮುಖರಾದ ಗುಂಡಪ್ಪ ಸಂಗಮಕರ್, ರಮೇಶ ಮಠಪತಿ,ಸಿ.ಎಸ್.ಗಣಾಚಾರಿ, ಜಯರಾಜ ಕೊಳ್ಳಾ,ಜಗದೀಶ ಬಿರಾದಾರ್,ವೀರಣ್ಣಕುಂಬಾರ, ಸಂತೋಷಹಡಪದ ಸೇರಿದಂತೆ ಹಲವರು ಇದ್ದರು.

# ಶಾರದಾ ಪಬ್ಲಿಕ್ ಸ್ಕೂಲ್‌ನಲ್ಲಿ: ವಿಶ್ವ ಪರಿಸರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.6:ಪಟ್ಟಣದ ಶಾರದಾ ಪಬ್ಲಿಕ್ ಸ್ಕೂಲ್‌ನಲ್ಲಿ ಆಯೋಜಿಸಿದ ವಿಶ್ವಪರಿಸರ ದಿನಾಚರಣೆಗೆ ಸಂಸ್ಥೆ ಅಧ್ಯಕ್ಷ ವಸಂತರಾವ ಪಾಟೀಲ್ ಸಸಿ ನೆಡುವ ಮೂಲಕ ಚಾಲನೆ ನೀಡಿದರು.ಬಳಿಕ ಮಾತನಾಡಿದಅವರು,ಜಾಗತಿಕ ತಾಪಮಾನ ನಿಯಂತ್ರಿಸಲು ಪ್ರತಿಯೊಬ್ಬರೂ ಸಸಿ ನೆಟ್ಟು ಅದರ ಪಾಲನೆ ಪೋಷಣೆ ಮಾಡುವುದುಅಗತ್ಯ.ದೈನಂದಿನ ಜೀವನದಲ್ಲಿಪ್ರತಿಕ್ಷಣವೂಪರಿಸರ ಜಾಗೃತಿಯ ಬಗ್ಗೆ ಕಾಳಜಿ ಮಾಡಬೇಕು. ಇದು ಕೇವಲ ವಿಶ್ವ ಪರಿಸರ ದಿನಾಚರಣೆಗೆ ಮಾತ್ರಸೀಮಿತವಾಗಬಾರದು. ಗಿಡ ಮರ ಬೆಳೆಸುವದು, ಅರಣ್ಯವನ್ನು ಹೆಚ್ಚಿಸುವುದು ಹಾಗೂ ಉದ್ಯಾನಗಳನ್ನು ಸಂರಕ್ಷಿಸುವುದು ದಿನ ನಿತ್ಯದ ಕಾರ್ಯಕ್ರಮವಾಗಬೇಕು.ಪ್ರತಿವರ್ಷ ವಿವಾಹ ವಾರ್ಷಿಕೋತ್ಸವ, ಹುಟ್ಟು ಹಬ್ಬ, ವಿಶೇಷ ಕಾರ್ಯಕ್ರಮಗಳಸಂದರ್ಭದಲ್ಲಿ ತಲಾ ಎರಡೆರಡು ಸಸಿಗಳನ್ನು ನೆಟ್ಟು ಅವುಗಳ ಪಾಲನೆ ಪೋಷಣೆ ಮಾಡಿದರೆ,ಮನೆಯ ಆವರಣವೆಲ್ಲಹಸಿರುಮಯವಾಗಿ ಮಾರ್ಪಡುತ್ತದೆ ಎಂದರು.

ಈ ಸಂದರ್ಭದಲ್ಲಿ ಸಂಸ್ಥೆ ಆಡಳಿತಾಧಿಕಾರಿ ಮಹಾದೇವ ಪಟ್ನೆ,ಮುಖ್ಯಗುರುಗಳಾದ ಶಹನಾಜ ಬೇಗಂ, ಅಶ್ವಿನಿ ರಾಜೋಳೆ,ಸಿಬ್ಬಂದಿಗಳಾದ ಹೇಮಂತ ಕುಲಕರ್ಣಿ,ನಾಗ ರಾಜ,ಬಿಬಿನ,ಪ್ರವೀಣ,ಮಲ್ಲಿಕ ಾರ್ಜುನ,ವಿಜಯಲಕ್ಷ್ಮಿ ??ೀ,ಬ ಾಗ್ಯಶ್ರೀ,ಪ್ರಜ್ಞಾ,ರೂಹಿನಾ,ಮೀ ನಾಕ್ಷಿ,ವಿಕ್ಟೋರಿಯಾ ದೀಪಾ ,ಉಮಾಶ್ರೀ,ವಿದ್ಯಾ,ಅಂಜಲಿ, ಅರ್ಥಾ,ಮೀನಾಕ್ಷಿ,ಮೀನಾಕ್ಷಿ ಪಾಟೀಲ್ ಸೇರಿದಂತೆ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಭೂಮಿಯ ತೇವಾಂಶ ಅರಿತು ಬಿತ್ತನೆ ಕೈಗೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.6: ತಾಲೂಕಿನ ಕೋನಮೇಳಕುಂದಾಗ್ರಾಮದ ಪ್ರಾಥಮಿಕಕೃಷಿಪತ್ತಿನಸಹಕಾರ ಸಂಘದ ಗೋದಾಮಿನಲ್ಲಿ ಶುಕ್ರವಾರ ಮುಂಗಾರು ಹಂಗಾಮಿನ ಬಿತ್ತನೆಗಾಗಿ ಸೋಯಾ ಅವರೆ ಬೀಜ ವಿತರಣೆಗೆಗ್ರಾಮ ಪಂಚಾಯತಿ ಅಧ್ಯಕ್ಷಸಂತೋಷಮಾನಕಾರ ಚಾಲನೆ ನೀಡಿದರು.

ನಂತರಮಾತನಾಡಿದಅವರು, ಈ ಬಾರಿಯ ಮುಂಗಾರು ಆಶಯದಾಯಕವಾಗಿದೆ. ಉತ್ತಮ ಮಳೆಯಾಗುವ ನಿರೀಕ್ಷೆಯಿದ್ದು ಈಗಾಗಲೇ ರೈತರು ಬೀಜ, ರಸಗೊಬ್ಬರ ಸಂಗ್ರಹಿಸಿ ಬಿತ್ತನೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಗ್ರಾಮದರೈತರಅನುಕೂಲಕ್ಕಾಗಿ ಬೀಜ ವಿತರಣೆ ಕೇಂದ್ರ ತೆರೆಯಲಾಗಿದೆ. ಹಾಗಾಗಿ ಕೃಷಿ ಇಲಾಖೆ ವತಿಯಿಂದ ಗುಣಮಟ್ಟದಸೋಯಾ ಅವರೆ ಬೀಜ ವಿತರಿಸಲಾಗುತ್ತಿದ್ದು ಎಲ್ಲ ರೈತರು ರಿಯಾಯಿತಿ ದರದಲ್ಲಿಸಿಗುವ ಬೀಜ ಪಡೆದು ಕೊಳ್ಳಬೇಕು. ಬಿತ್ತನೆಗೆ ಆತುರದ ನಿರ್ಧಾರಕೈಗೊಳ್ಳದೆಭೂಮಿಯ ತೇವಾಂಶ ಗಮನಿಸಿ ಬಿತ್ತನೆ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಈಸಂದರ್ಭದಲ್ಲಿಪಿಕೆಪಿಎಸ್ ಕಾರ್ಯದರ್ಶಿ ಸಂಗ್ರಾಮ, ಕೃಷಿ ಇಲಾಖೆ ಅಧಿಕಾರಿಗಳು, ರೈತರು ಹಾಜರಿದ್ದರು.

# ವಿಶ್ವ ಹಿಂದೂ ಪರಿಷತ್ ಅಧ್ಯಕ್ಷರಾಗಿ ಖ್ಯಾಮಾ: ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 06 : ವಿಶ್ವ ಹಿಂದೂ ಪರಿಷತ್ತಿನ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ನೇಮಕಗೊಂಡ ವೀರಶೆಟ್ಟಿ ಖ್ಯಾಮಾ ಅವರನ್ನು ನಾಟ್ಯಶ್ರೀ ನೃತ್ಯಾಲಯವತಿಯಿಂದ ನಗರದಲ್ಲಿ ಶುಕ್ರವಾರ ಸನ್ಮಾನಿಸಲಾಯಿತು.

ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ಹಾಗೂ ನಿರ್ದೇಶಕ ಕೆ. ಸತ್ಯಮೂರ್ತಿ ಖ್ಯಾಮಾ ದಂಪತಿಯನ್ನು ಶಾಲು ಹೊದಿಸಿ ಸತ್ಕರಿಸಿದರು. ಪತ್ರಿಕಾ ರಂಗ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಹಿರಿಯ ಪತ್ರಕರ್ತ ಸದಾನಂದ ಜೋಶಿ ಅವರನ್ನು ಶಾಲು ಹೊದಿಸಿ ಗೌರವಿಸಲಾಯಿತು.

ಖ್ಯಾಮಾ ಅವರ ಹಿಂದು ಸಮಾಜದ ಹಿತಕ್ಕಾಗಿ ಶ್ರಮಿಸುತ್ತಾ ಬಂದಿದ್ದಾರೆ. ಸಭೆ, ಸಮಾರಂಭಗಳ ಮೂಲಕ ಸಮಾಜವನ್ನು ಜಾಗೃತಗೊಳಿಸಿದ್ದಾರೆ. ಅವರನ್ನು ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನಕ್ಕೆ ನೇಮಕ ಮಾಡಿರುವುದು ಅತ್ಯಂತ ಸೂಕ್ತವಾಗಿದೆ ಎಂದು ಸತ್ಯಮೂರ್ತಿ ಹೇಳಿದರು.

ಖ್ಯಾಮಾ ಅವರ ಹಿಂದೆ ಯುವಕರ ಪಡೆ ಇದೆ. ಅವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಹಿಂದು ಪರ ಚಟುವಟಿಕೆಗಳು ಹೆಚ್ಚು ನಡೆಯಲಿವೆ. ಸಮಾಜದ ಸಂಘಟನೆ ಬಲಗೊಳ್ಳಲಿದೆ. ಯುವಕರಲ್ಲಿ ದೇಶಾಭಿಮಾನ ಮೂಡಿಸುವ ಕೆಲಸ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಎಲ್ಲರ ಸಹಕಾರದೊಂದಿಗೆ ಜಿಲ್ಲೆಯಲ್ಲಿ ಸಮಾಜದ ಹಿತದ ಕಾರ್ಯಗಳನ್ನು ಕೈಗೊಳ್ಳೋಣ ಎಂದು ವೀರಶೆಟ್ಟಿ ಖ್ಯಾಮಾ ಹೇಳಿದರು. ಪ್ರಮುಖರಾದ ರವಿಚಂದ್ರಮೂರ್ತಿ, ಬಸವರಾಜ ಮೂಲಗೆ, ದೇವಿದಾಸ ಜೋಶಿ ಮತ್ತಿತರರು ಇದ್ದರು.

# ಮರ ಬೆಳೆಸಿ ನಿಸರ್ಗದ ಋಣ ತೀರಿಸಿ:ಬಸವರಾಜ ಧನ್ನೂರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 06 : ಪ್ರತಿಯೊಬ್ಬರೂ ತಲಾ ಒಂದು ಸಸಿ ನೆಟ್ಟು, ಬೆಳೆಸಿ ನಿಸರ್ಗದ ಋಣ ತೀರಿಸಬೇಕು ಎಂದು ಅಂತರರಾಷ್ಟ್ರೀಯ ರೋಟರಿ ಜಿಲ್ಲೆ 3160 ಡಿಸಿಗ್ನೆಟೆಡ್ ಮಂಥ್ಸ್ ಚೇರ್‌ಮೆನ್ ಬಸವರಾಜ ಧನ್ನೂರ ಹೇಳಿದರು.

ರೋಟರಿ ಕ್ಲಬ್ ಆಫ್ ಬೀದರ್ ಫೋರ್ಟ್ ವತಿಯಿಂದ ಇಲ್ಲಿಯ ಐಎಂಎ ಹಾಲ್‌ನಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮನುಷ್ಯನ ಬದುಕು ಪ್ರಕೃತಿಯ ಕೊಡುಗೆ-ಯಾಗಿದೆ. ನಿಸರ್ಗ ಉಳಿದರೆ ಮಾತ್ರ ಮನುಷ್ಯನಿಗೆ ಉಳಿಗಾಲ ಇದೆ ಎಂದು ತಿಳಿಸಿದರು. ಮನುಷ್ಯನನ್ನು ಹೊರತುಪಡಿಸಿ ಉಳಿದ ಎಲ್ಲ ಜೀವ ರಾಶಿಗಳು ಪರಿಸರಕ್ಕೆ ಹಾನಿ ಉಂಟಾಗದಂತೆ ಬದುಕು ಸಾಗಿಸುತ್ತಿವೆ. ಮನುಷ್ಯ ಕೂಡ ಪರಿಸರ ಸ್ನೇಹಿ ಜೀವನ ನಡೆಸಬೇಕಿದೆ ಎಂದು ಹೇಳಿದರು.

ಎಲ್ಲರೂ ಪರಿಸರ ಪ್ರೀತಿ ಬೆಳೆಸಿಕೊಳ್ಳಬೇಕು. ಪರಿಸರ ಸಂರಕ್ಷಣೆ ಕಾರ್ಯಕ್ಕೆ ಕೈಜೋಡಿಸಬೇಕು. ನಿತ್ಯದ ಬದುಕಿನಲ್ಲಿ ಪ್ಲಾಸ್ಟಿಕ್ ಬಳಕೆ ತ್ಯಜಿಸಬೇಕು ಎಂದು ಸಲಹೆ ಮಾಡಿದರು. ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಸೂರ್ಯಕಾಂತ ರಾಮಶೆಟ್ಟಿ, ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ಅಧ್ಯಕ್ಷ ಶಿವಕುಮಾರ ಪಾಖಾಲ್, ಹಿರಿಯ ರೋಟೇರಿಯನ್‌ಗಳಾದ ಜಹೀರ್ ಅನ್ವರ್ ಹಾಗೂ ಶಿವಕುಮಾರ ಪಾಖಾಲ್ ಮಾತನಾಡಿದರು. ಕ್ಲಬ್ ಸದಸ್ಯರಿಗೆ ಸಸಿ ವಿತರಿಸಲಾಯಿತು. ಕ್ಲಬ್ ಅಧ್ಯಕ್ಷ ಗುಂಡಪ್ಪ ಘೋದೆ ಅಧ್ಯಕ್ಷತೆ ವಹಿಸಿದ್ದರು. ಡಾ. ಸುಭಾಷ್ ಬಶೆಟ್ಟಿ, ಡಾ. ಎಸ್. ಎಂ. ಪಾಟೀಲ, ಸಚ್ಚಿದಾನಂದ ಚಿದ್ರೆ, ಆನಂದ ಪೊಬ್ಬಾ ಮತ್ತಿತರರು ಇದ್ದರು. ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ಕಾರ್ಯದರ್ಶಿ ಪ್ರಭು ತಟಪಟ್ಟಿ ಸ್ವಾಗತಿಸಿದರು. ಕ್ಲಬ್ ನಿಕಟಪೂರ್ವ ಅಧ್ಯಕ್ಷ ಸಂಗಮೇಶ ಆಣದೂರೆ ನಿರೂಪಿಸಿದರು. ರೋಟರಿ ಕ್ಲಬ್ ಆಫ್ ಬೀದರ್ ಫೋ?ರ್ಟ್ ಕಾರ್ಯದರ್ಶಿ ಡಾ. ಉಲ್ಲಾಸ್ ಕಟ್ಟಿಮನಿ ವಂದಿಸಿದರು.

# ಹೆಚ್ಚಿನ ಇಳುವರಿ ಪಡೆಯಲು ತಾಂತ್ರಿಕ ಸಲಹೆಗಳನ್ನು ಪಾಲಿಸಲು ರೈತಬಾಂಧವರಲ್ಲಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂ.6:ರೈತರು ತಮ್ಮ ಹೊಲಗಳಲ್ಲಿ ಉದ್ದು, ಹೆಸರು, ತೊಗರಿ, ಸೋಯಾ ಅವರೆ, ಮಿಶ್ರ ಬೆಳೆ ಬೆಳೆಸಿದಲ್ಲಿ ಭೂಮಿಯ ಫಲವತತ್ತೆ ಹಾಗೂ ರೈತರ ಆದಾಯವನ್ನು ಹೆಚ್ಚಿಗೆ ಪಡೆಯಬಹುದಾಗಿದೆ. ಹಾಗೆಯೇ ಕೇವಲ ಡಿ.ಎ.ಪಿ ರಸಗೊಬ್ಬರ ಬದಲಿಗೆ ಸಂಯುಕ್ತ ರಸಗೊಬ್ಬರಗಳಾದ 12:32:16, 10:26:26, 20:20:0:13, ಇತರೆ ಬಳಸಿದಲ್ಲಿ ಬೆಳೆಗಳಿಗೆ ಸಮತೋಲನೆಯ ಪೋಶಕಾಂಶ ದೊರೆತು ಹೆಚ್ಚಿನ ಇಳುವರಿ ಪಡೆಯಬಹುದಾಗಿದೆ ಎಂದು ಬೀದರ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬೀದರ ತಾಲ್ಲೂಕಿನ ಮುಂಗಾರು ಹಂಗಾಮಿನ ಬೆಳೆ ವಿಸ್ತೀರ್ಣ 54000 ಹೆಕ್ಟರ್ ಪ್ರದೇಶವಿದ್ದು, ಪ್ರಮುಖ ಬೆಳೆಗಳಾದ ಸೂಯಾ ಅವರೆ (25900 ಹೇಕ್ಟರ್), ತೋಗರಿ (17350 ಹೇಕ್ಟರ್), ಹೆಸರು (5461 ಹೇಕ್ಟರ್), ಉದ್ದು (2650



ಹೇಕ್ಟರ್), ಹೈಬ್ರೀಡ್ ಜೋಳ (980 ಹೇಕ್ಟರ್), ಇತರೆ ಕಬ್ಬು ಮತ್ತು ಹತ್ತಿ ಬೆಳೆಯಲಾಗುತ್ತಿದ್ದು, ಮೇ ತಿಂಗಳಿನಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಿದ್ದು ತೆ-ೂಗರಿ, ಉದ್ದು, ಮತ್ತು ಹೆಸರು ಬೆಳೆಗಳಿಗೆ ಬಿತ್ತನೆ ಮಾಡಲು ಸೂಕ್ತವಾಗಿರುತ್ತದೆ, ಮುಂದುವರೆದು ಭೂಮಿ ಉಳುಮೆ ಮಾಡಿ ಬಿತ್ತನೆ ಮಾಡಲು ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, ಬಿತ್ತನೆ ಮಾಡುವ ಮುಂಚೆ ತೋಗರಿ, ಉದ್ದು, ಮತ್ತು ಹೆಸರು ಬೆಳೆಗಳಿಗೆ ಪ್ರತಿ ಎಕರೆಗೆ ರೈಜೋಬಿಯಂ-200 ಗ್ರಾಂ, ಟೈಕೋಡರ್ಮ-20 ಗ್ರಾಂ ಮತ್ತು ಸೋಯಾ ಅವರೆಗೆ ಇಮ್ಮಿಡಾಕ್ಲೋಪ್ರಿಡ್ 600- ಎಸ್ ಎಲ್ (ಗೌಚ್) 10 ಎಮ್ ಎಮ್ ಪ್ರತಿ ಕೆ.ಜಿ ಬೀಜಕ್ಕೆ ಲೇಪನೆ ಮಾಡಿ, ಬಿತ್ತನೆ ಮಾಡಿದಲ್ಲಿ ರೋಗ ನಿರೋಧಕ ಶಕ್ತಿಯಿಂದ ರೋಗಗಳನ್ನು ಬರದಂತೆ ತಡೆಗಟ್ಟಬಹುದಾಗಿದೆ. ಸೊಯಾ ಅವರೆ ಬಿತ್ತನೆಯನ್ನು 80-100 ಮೀ.ಮೀ ಮಳೆ ಬಂದಲ್ಲಿ ಭೂಮಿಯ ತೇವಾಂಶವನ್ನು ನೋಡಿ ಬಿತ್ತನೆ ಮಾಡುವುದು ಸೂಕ್ತವಾಗಿರುತ್ತದೆಂದು ಅವರು ತಿಳಿಸಿದ್ದಾರೆ.

# ಬುದ್ಧಿ ಮಾಂದ್ಯ ಮಕ್ಕಳಿಗೆ ಬಟ್ಟೆ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 06 : ನವೀನ್ ಪಬ್ಲಿಕ್ ಶಾಲೆಯ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಅವರ 52ನೇ ಜನ್ಮದಿನದ ಪ್ರಯುಕ್ತ ತಾಲ್ಲೂಕಿನ ಅಮಲಾಪುರ ಗ್ರಾಮದ ಮಹಾ ಪ್ರಜಾಪತಿ ಬುದ್ಧಿ ಮಾಂದ್ಯ ಮಕ್ಕಳ ಶಾಲೆಯ ಮಕ್ಕಳಿಗೆ ಶುಕ್ರವಾರ ಉಚಿತ ಬಟ್ಟೆ, ಸಿಹಿ ಹಾಗೂ ಹಣ್ಣು ವಿತರಿಸಲಾಯಿತು.

ಕೇಕ್ ಕತ್ತರಿಸಿ ಮಕ್ಕಳೊಂದಿಗೆ ಜನ್ಮದಿನ ಆಚರಿಸಿಕೊಂಡ ಚಿಕ್ಕಬಸೆ ಅವರು, ಬಳಿಕ ಮಕ್ಕಳಿಗೆ ಸಿಹಿ ತಿನ್ನಿಸಿ, ಬಟ್ಟೆ ವಿತರಿಸಿದರು.

ಬುದ್ಧಿ ಮಾಂದ್ಯ ಮಕ್ಕಳು ದೇವರ ಸ್ವರೂಪ. ಅವರ ಸೇವೆಯಿಂದ ಪುಣ್ಯ ಲಭಿಸುತ್ತದೆ ಎಂದು ಚಿಕ್ಕಬಸೆ ಹೇಳಿದರು.

ಈಚಿನ ದಿನಗಳಲ್ಲಿ ಜನ್ಮದಿನ, ವಿವಾಹ ವಾರ್ಷಿಕೋತ್ಸವ ಮತ್ತಿತರ ಸಮಾರಂಭಗಳು ಪ್ರತಿಷ್ಠೆಯ ವಿಷಯವಾಗುತ್ತಿವೆ. ಅನೇಕರು ಲಕ್ಷಾಂತರ ರೂಪಾಯಿ ಖರ್ಚು ಮಾಡುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು. ಸ್ಥಿತಿವಂತರು ಸಾಮಾಜಿಕ ಚಟುವಟಿಕೆ, ನಿರ್ಗತಿಕರು, ಅಸಹಾಯಕರು ಹಾಗೂ ಬಡವರಿಗೆ ನೆರವಾಗುವ ಮೂಲಕ ವೈಯಕ್ತಿಕ ಕಾರ್ಯಕ್ರಮಗಳನ್ನು ಆಚರಿಸುವ ಪರಿಪಾಠ ಬೆಳೆಯಬೇಕು.

ಇದರಿಂದ ಕಾರ್ಯಕ್ರಮಗಳ ಹಿರಿಮೆ ಹೆಚ್ಚುತ್ತದೆ ಎಂದು ತಿಳಿಸಿದರು.

ಪ್ರಾಚಾರ್ಯ ಉಮಾಕಾಂತ ಲಾವಲೆ, ಶಾಲೆಯ ಸದಸ್ಯ ಬಸವರಾಜ ಕಾಶಿನಾಥ, ಸುಜಾತಾ ರೆಡ್ಡಿ, ಬಂಡು, ಜಲೀಲ್, ಬಾಲಾಜಿ, ರಾಜಮ್ಮ, ಗೋವಿಂದ, ಗಣೇಶ ಕಪಲಾಪುರ ಮತ್ತಿತರರು ಇದ್ದರು.

# ಅತಿಥಿ ಉಪನ್ಯಾಸಕರ ನೇಮಕಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.6 : ಬೀದರ ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಷಯವಾರು ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ 2025-26ನೇ ಸಾಲಿಗೆ ಅತಿಥಿ ಉಪನ್ಯಾಕರುಗಳನ್ನು ನೇಮಕ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಹೆಸರು, ಪೂರ್ಣ ವಿಳಾಸ (ದೂರವಾಣಿ / ಮೋಬೈಲ್ ಸಂಖ್ಯೆಯೊಂದಿಗೆ), ಜನ್ಮ ದಿನಾಂಕ, ವಿದ್ಯಾರ್ಹತೆ ಮತ್ತು ವಾಸಸ್ಥಳದ ಬಗ್ಗೆ ಮಾಹಿತಿಯುಳ್ಳ ಅರ್ಜಿಯ ಜೊತೆಗೆ ಸ್ನಾತ-ಕೋತ್ತರ ಪದವಿಯ ದೃಢಕೃತ ಅಂಕಪಟ್ಟಿಗಳು., ಬಿ.ಎಡ್. ಪದವಿ ಪಡೆದ ದೃಢೀಕೃತ ಅಂಕಪಟ್ಟಿಗಳು, ಜನ್ಮ ದಿನಾಂಕಕ್ಕೆ ಸಂಬಂಧಿಸಿದ ದಾಖಲೆಯ (ಎಸ್.ಎಸ್.ಎಲ್.ಸಿ ಅಂಕಪಟ್ಟಿ) ದೃಢೀಕೃತ ಪ್ರತಿಗಳೊಂದಿಗೆ ದಿನಾಂಕ: 13-06-2025 ರೊಳಗಾಗಿ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಸಲ್ಲಿಸಬಹುದಾಗಿದೆ. ಅತಿಥಿ ಉಪನ್ಯಾಸಕರನ್ನು ಹುದ್ದೆಗೆ ನಿಗಧಿ ಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ನೇಮಕಾತಿ ಮಾಡಲಾಗುವುದು. ಸದರಿ ನೇಮಕಾತಿಗಳು ತಾತ್ಕಾಲಿಕವಾಗಿರುತ್ತವೆ.

ಬೀದರ ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಷಯವಾರು ಖಾಲಿ ಇರುವ ಹುದ್ದೆಗಳ ವಿವರ: ಕನ್ನಡ: ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಹುಮನಾಬಾದ ಜಿ:ಬೀದರ, ಸರ್ಕಾರಿ ನೀಲಾಂಬಿಕಾ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರಮ ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ, ಸರ್ಕಾರಿ ಪದವಿ ಪೂರ್ವ ಕಾಲೇಜು, ಮನ್ನಳ್ಳಿ ತಾ.ಜಿ:ಬೀದರ. ಸರ್ಕಾರಿ ಪದವಿ ಪೂರ್ವಕಾಲೇಜು, ತಾಳಮಡಗಿ.ತಾ:ಹುಮನಾಬಾದ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಮಂಠಾಳ ತಾ.ಬಸವಕಲ್ಯಾಣ ಜಿ:ಬೀದರ.

ಇತಿಹಾಸ:ಸರ್ಕಾರಿ ನೀಲಾಂಬಿಕಾ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ (02), ಸರ್ಕಾರಿ ಪದವಿ ಪೂರ್ವಕಾಲೇಜು, ಹಾಲಹಳ್ಳಿ(ಕೆ) ಭಾಲ್ಕಿ. ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ದುಬಲಗುಂಡಿ,ತಾ.ಹುಮನಾಬಾದ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಬೇಮಳಖೆಡಾ. ತಾ:ಚಿಟಗುಪ್ಪಾ ಜಿ:ಬೀದರ, ಸರಕಾರಿ ಪದವಿ ಪೂರ್ವಕಾಲೇಜು, ಕಮಠಾಣಾ ತಾ.ಜಿ.ಬೀದರ, ಸರಕಾರಿ ಬಾಲಕೀಯರ ಪದವಿ ಪೂರ್ವಕಾಲೇಜು, ಚಿಟಗುಪ್ಪಾ. ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಹಲಬರ್ಗಾ ತಾ:ಭಾಲ್ಕಿ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ತಾಳಮಡಗಿ. ತಾ:ಹುಮನಾಬಾದ ಜಿ:ಬೀದರ.

ಅರ್ಥಶಾಸ್ತ್ರ:ಸರ್ಕಾರಿ ನೀಲಾಂಬಿಕಾ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ(02). ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಚಿಟಗುಪ್ಪಾ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಮುಡಬಿ, ತಾ:ಬಸವಕಲ್ಯಾಣ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಭಾಲ್ಕಿ. ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ನಿರ್ಣಾ ತಾ.ಹುಮನಾಬಾದ, ಸರ್ಕಾರಿ ಬಾಲಕೀಯರ ಪದವಿ ಪೂರ್ವಕಾಲೇಜು, ಹುಮನಾಬಾದ, ಜಿ:ಬೀದರ. ಸರ್ಕಾರಿ ಪದವಿ ಪೂರ್ವಕಾಲೇಜು, ದುಬಲಗುಂಡಿ,ತಾ.ಹುಮನಾಬಾದ ಜಿ:ಬೀದರ. ಸರ್ಕಾರಿ ಪದವಿ ಪೂರ್ವಕಾಲೇಜು, ಹಳ್ಳಿಖೇಡ್(ಕೆ) ಹುಮನಾಬಾದ. ಸರಕಾರಿ ಪದವಿ ಪೂರ್ವಕಾಲೇಜು, ಕಮಠಾಣಾ ತಾ.ಜಿ.ಬೀದರ.

ಸಮಾಜಶಾಸ್ತ್ರ: ಸರ್ಕಾರಿ ಬಾಲಕೀಯರ ಪದವಿ ಪೂರ್ವಕಾಲೇಜು, ಚಿಟಗುಪ್ಪಾ ಜಿ:ಬೀದರ. ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಹಳ್ಳಿಖೇಡ್(ಕೆ) ಹುಮನಾಬಾದ. :ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಹಾಲಹಳ್ಳಿ(ಕೆ) ಭಾಲ್ಕಿ. ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಮಂಠಾಳ ತಾ.ಬಸವಕಲ್ಯಾಣ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ನಿರ್ಣಾ ತಾ.ಹುಮನಾಬಾದ.

ರಾಜ್ಯಶಾಸ್ತ್ರ: ಸರಕಾರಿ ಪದವಿ ಪೂರ್ವಕಾಲೇಜು, ಔರಾದ(ಬಿ) ಜಿ.ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಹಳ್ಳಿಖೇಡ್(ಕೆ) ಹುಮನಾಬಾದ. ಸರ್ಕಾರಿ ಪದವಿ ಪೂರ್ವಕಾಲೇಜು, ಮನ್ನಳ್ಳಿ ತಾ.ಜಿ:ಬೀದರ.

ಜೀವಶಾಸ್ತ್ರ:ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ. ಸರ್ಕಾರಿ ನೀಲಾಂಬಿಕಾ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ. ಸರಕಾರಿ ಪದವಿ ಪೂರ್ವಕಾಲೇಜು, ಠಾಣಾಕುಶನೂರು, ಔರಾದ(ಬಿ) ಜಿ.ಬೀದರ, ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು ಹುಮನಾಬಾದ, ಸರಕಾರಿ ಬಾಲಕೀಯರ ಪದವಿ ಪೂರ್ವಕಾಲೇಜು, ಚಿಟಗುಪ್ಪಾ. ಜಿ:ಬೀದರ, ಸರಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ.ಬೀದರ.

ವಾಣಿಜ್ಯಶಾಸ್ತ್ರ: ಸರ್ಕಾರಿ ಬಾಲಕೀಯರ ಪದವಿ ಪೂರ್ವಕಾಲೇಜು, ಚಿತ್ತೆಖಾನಾ ಜಿ:ಬೀದರ. ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಚೌಬಾರಾ ರೋಡ್, ಜಿ:ಬೀದರ. ಸರ್ಕಾರಿ ಪದವಿ ಪೂರ್ವಕಾಲೇಜು, ತಾ:ಭಾಲ್ಕಿ, ಜಿ:ಬೀದರ. ಸರ್ಕಾರಿ ಪದವಿ ಪೂರ್ವಕಾಲೇಜು, ಹಾಲಹಳ್ಳಿ (ಕೆ) ತಾ:ಭಾಲ್ಕಿ, ಜಿ:ಬೀದರ. ಸರಕಾರಿ ಬಾಲಕೀಯರ ಪದವಿ ಪೂರ್ವಕಾಲೇಜು, ಚಿಟಗುಪ್ಪಾ. ಜಿ:ಬೀದರ. ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು ಹುಮನಾಬಾದ. ಸರ್ಕಾರಿ ಪದವಿ ಪೂರ್ವಕಾಲೇಜು, ನಿರ್ಣಾ.ತಾ:ಚಿಟಗುಪ್ಪಾ, ಜಿ:ಬೀದರ.

ಗಣಿತಶಾಸ್ತ್ರ: ಸರ್ಕಾರಿ ಪದವಿ ಪೂರ್ವಕಾಲೇಜು ಠಾಣಾಕುಶನೂರ. ಬೀದರ ಜಿಲ್ಲೆ. ಸರಕಾರಿ ಪದವಿ ಪೂರ್ವಕಾಲೇಜು, ಔರಾದ(ಬಿ) ಜಿ.ಬೀದರ, ಸರಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ.ಬೀದರ.

ರಸಾಯನಶಾಸ್ತ್ರ: ಸರಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ.ಬೀದರ.

ಭೌತಶಾಸ್ತ್ರ: ಸರಕಾರಿ ಪದವಿ ಪೂರ್ವಕಾಲೇಜು, ಔರಾದ(ಬಿ) ಜಿ.ಬೀದರ.

ಇಂಗ್ಲೀಷ್: ಸರ್ಕಾರಿ ಪದವಿ ಪೂರ್ವಕಾಲೇಜು, ದುಬಲಗುಂಡಿ, ತಾ.ಹುಮನಾಬಾದ ಜಿ:ಬೀದರ, ಸರ್ಕಾರಿ ನೀಲಾಂಬಿಕಾ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ (02), ಸರ್ಕಾರಿ ಪದವಿ ಪೂರ್ವಕಾಲೇಜು, ತಾಳಮಡಗಿ.ತಾ:ಹುಮನಾಬಾದ ಜಿ:ಬೀದರ.

ಹಿಂದಿ: ಸರ್ಕಾರಿ ಪದವಿ ಪೂರ್ವಕಾಲೇಜು, ಮುಡಬಿ, ತಾ:ಬಸವಕಲ್ಯಾಣ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಹಲಬರ್ಗಾ ತಾ:ಭಾಲ್ಕಿ ಜಿ:ಬೀದರ. ಸರ್ಕಾರಿ ಬಾಲಕರ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ.

ಉರ್ದು: ಸರಕಾರಿ ಪದವಿ ಪೂರ್ವಕಾಲೇಜು, ಮನ್ನಳ್ಳಿ ತಾ:ಜಿ:ಬೀದರ, ಸರ್ಕಾರಿ ನೀಲಾಂಬಿಕಾ ಪದವಿ ಪೂರ್ವಕಾಲೇಜು, ಬಸವಕಲ್ಯಾಣ ಜಿ:ಬೀದರ, ಸರ್ಕಾರಿ ಪದವಿ ಪೂರ್ವಕಾಲೇಜು, ಮಂದಕನಳ್ಳಿ. ತಾ:ಜಿ:ಬೀದರ, ಸರಕಾರಿ ಪದವಿ ಪೂರ್ವಕಾಲೇಜು, ಔರಾದ(ಬಿ) ಜಿ.ಬೀದರ.

# ಧನರಾಜ ತಾಳಂಪಳ್ಳಿಗೆ ಸಹಕಾರ ವಿಭಾಗದ ಹೊಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 06 : ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ಜಿಲ್ಲೆಯ ಮುಖಂಡ ಧನರಾಜ ತಾಳಂಪಳ್ಳಿ ಅವರಿಗೆ ಸಹಕಾರ ವಿಭಾಗದ ಹೊಣೆ ವಹಿಸಿದೆ. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಡಿ.ಕೆ. ಶಿವಕುಮಾರ ಅವರು ತಾಳಂಪಳ್ಳಿ ಅವರನ್ನು ಕೆಪಿಸಿಸಿ ಸಹಕಾರ ವಿಭಾಗದ ರಾಜ್ಯ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ರಾಜ್ಯದ ನಾಯಕರ ಸಹಕಾರದೊಂದಿಗೆ ಸಹಕಾರ ವಿಭಾಗ ಹಾಗೂ ಪಕ್ಷದ ಬಲವರ್ಧನೆ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವಂತೆ ಸೂಚಿಸಿದ್ದಾರೆ. ಹುಮನಾಬಾದ್ ತಾಲ್ಲೂಕಿನ ಹಳ್ಳಿಖೇಡ(ಬಿ) ಗ್ರಾಮದ ಧನರಾಜ ತಾಳಂಪಳ್ಳಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಲ್ಲಿ ಒಬ್ಬರಾಗಿದ್ದಾರೆ. ಸಾಮಾಜಿಕ, ಧಾರ್ಮಿಕ,

ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಎರಡು ದಶಕಗಳಿಂದ ಕಾಂಗ್ರೆಸ್‌ನಲ್ಲಿ



ಇರುವ ಅವರು ರಾಜಕೀಯದಲ್ಲಿ ಸಕ್ರಿಯರಾಗಿದ್ದಾರೆ. ಕೆಪಿಸಿಸಿ ಸದಸ್ಯ ಸೇರಿ ಪಕ್ಷದ ವಿವಿಧ ಹುದ್ದೆಗಳಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದ್ದಾರೆ. ತಾಲ್ಲೂಕು, ಜಿಲ್ಲಾ ಪಂಚಾಯಿತಿ, ವಿಧಾನಸಭೆ, ವಿಧಾನ ಪರಿಷತ್ ಹಾಗೂ ಲೋಕಸಭೆ ಚುನಾವಣೆಗಳಲ್ಲಿ ಪಕ್ಷದ ಗೆಲುವಿಗೆ ಶ್ರಮಿಸಿದ್ದಾರೆ. ಕೇರಳದ ವಯನಾಡ್ ಸೇರಿ ವಿವಿಧೆಡೆಯ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಕೊಡುಗೆ ನೀಡಿದ್ದಾರೆ. ತಮ್ಮ ಸೇವೆಯನ್ನು ಗುರುತಿಸಿ ಸಹಕಾರ ವಿಭಾಗದ ರಾಜ್ಯ ಅಧ್ಯಕ್ಷರನ್ನಾಗಿ ನೇಮಕ ಮಾಡಿದ್ದಕ್ಕೆ ಧನರಾಜ ತಾಳಂಪಳ್ಳಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖಂಡರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ರಾಜ್ಯದ ಸಚಿವರು, ರಾಷ್ಟ್ರ ಹಾಗೂ ರಾಜ್ಯದ ಪಕ್ಷದ ಮುಖಂಡರಿಗೆ ಕೃತಜ್ಞತೆ ತಿಳಿಸಿದ್ದಾರೆ.

# ಪ್ರವೇಶಾತಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.6: ಬೀದರ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲಾ ಸಂಯೋಜಿತ ಸ್ನಾತಕ ಮಹಾವಿದ್ಯಾಲಗಳಲ್ಲಿ 2025-26ನೇ ಶೈಕ್ಷಣಿಕ ಸಾಲಿನ ಬಿ.ಎ/ಬಿ.ಎಸ್ಸಿ/ಬಿ.ಕಾಂ ಬಿ.ಬಿ.ಎ/ಬಿ.ಸಿ.ಎ ಮತ್ತು ಬಿ.ಯೋಕ್ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ಅವಧಿಯನ್ನು ಜೂನ್.25 ರವರೆಗೆ ದಂಡ ರಹಿತ ಹಾಗೂ ಜೂನ್.30 ರವರೆಗೆ ದಂಡ ಸಹಿತ ವಿಸ್ತರಿಸಲಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈಗಾಗಲೇ ದಿನಾಂಕ. 06-06-2025ರ ವರೆಗೆ ದಂಡ ರಹಿತ ಹಾಗೂ 21-06-2025ರ ವರೆಗೆ ದಂಡ ಸಹಿತ ಪ್ರವೇಶಾತಿಗೆ ಅಧಿಸೂಚನೆ ಹೊರಡಿಸಲಾಗಿತ್ತು. ಕುಲಪತಿಗಳ ಅನುಮೋದನೆ ಮೇರೆಗೆ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜೂ.9 ರಂದು ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.6: ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಬೀದರನಿಂದ ಜೂನ್.9 ರಂದು ಬೆಳಿಗ್ಗೆ 10:30 ರಿಂದ 3 ಗಂಟೆಯವರೆಗೆ ಬ್ರೈಟ್ ಲೈಫ್ ತರಬೇತಿ ಸಂಸ್ಥೆ, ಮೈಲೂರು ಕ್ರಾಸ್ ರಾಣಿ ಕಿತ್ತೂರು ಚನ್ನಮ್ಮ ಶಾಲೆ ಹತ್ತಿರ, ಗುನ್ನಳ್ಳಿ ಕಾಂಪ್ಲೆಕ್ಸ್ ಪಕ್ಕದಲ್ಲಿ, 1ನೇ ಕ್ರಾಸ್, ವಿದ್ಯಾ ನಗರ, ಬೀದರದಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಉದ್ಯೋಗ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದ್ಯೋಗಮೇಳದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸುತ್ತಿದ್ದು, ಗ್ರಾಮೀಣ ಅಭ್ಯರ್ಥಿಗಳಿಗೆ ವಿಶೇಷ ಆದ್ಯತೆ ನೀಡಲಾಗುವುದು. ಭಾಗವಹಿಸುವ ಅಭ್ಯರ್ಥಿಗಳು 9353607634, 7996424948, 8050893508 ನಂಬರಗೆ ಕರೆ ಮಾಡಿ ಪೂರ್ವ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಬೀದರ ದೂರವಾಣಿ ಸಂ-ಖ್ಯೆ: 08482-234682 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ 'ವಿಶ್ವ ಪರಿಸರ ದಿನಾಚರಣೆ'

## ಪರಿಸರ ಸಂರಕ್ಷಣೆಗೆ ಶ್ರಮಿಸೋಣ: ಪ್ರೊ.ಎಂ.ಮುನಿರಾಜು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಮಾನವನ ದುರಾಸೆಗೆಪರಿಸರವನ್ನುನಿರಂತರವಾಗಿ ನಾಶ ಮಾಡುತ್ತಿದ್ದಾನೆ ಎಂದು ವಿಜಯನಗರಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಂ.ಮುನಿರಾಜು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯವಿಶ್ವವಿದ್ಯಾಲಯದ ಜೀವ ವಿಜ್ಞಾನ ಸಭಾಂಗಣದಲ್ಲಿ ಗುರುವಾರವಿಶ್ವಪರಿಸರದಿನಾಚರಣೆ ಅಂಗವಾಗಿ ಆಯೋಜಿಸಿದ್ದ "ಪ್ಲಾಸ್ಟಿಕ್ ಮಾಲಿನ್ಯದಿಂದ ಮುಕ್ತವಾಗುವುದು" ಪ್ರಸಕ್ತ ವರ್ಷದ ಧ್ಯೇಯವ್ಯಾಖ್ಯವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭೂಮಿಯಮೇಲಿನಪ್ರತಿಯೊಂದು ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರ ವಹಿಸುತ್ತದೆ. ಪರಿಸರದ ದಿನಾಚರಣೆಯನ್ನು ಪರಿಸರದ ಜಾಗೃತಿ ಮತ್ತು ಪರಿಸರ ಸಂಕ್ಷಣೆಗಾಗಿ ಆಚರಿಸಲಾಗುತ್ತದೆ. ಹೀಗಾಗಿ ಪ್ರತಿಯೊಬ್ಬರಲ್ಲೂ ಪರಿಸರದ ಬಗ್ಗೆ ಕಾಳಜಿ ಮೂಡಿಸಿ ಪರಿಸರ ಹಾಳಾಗದಂತೆ ಜಾಗೃತಿ ವಹಿಸುವುದು ಮುಖ್ಯವಾಗಿದ್ದು, ಪರಿಸರ ಸಂರಕ್ಷಣೆಗಾಗಿ ವಿವಿಯ ಆವರಣದಲ್ಲಿ 50 ಸಾವಿರ ಮರಗಳನ್ನು ನೆಡಲಾಗುವುದು ಎಂದು ಹೇಳಿದರು.

ವಿವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್. ಎಮ್. ಸಾಲಿ ಮಾತನಾಡಿ, ಪರಿಸರವು ನಮ್ಮ ಗುರುವಾಗಿದೆ. ಪರಿಸರವನ್ನು ನಿರ್ಮಾಣ ಮಾಡುವ ಜವಾಬ್ದಾರಿ ನಮ್ಮಲ್ಲಿದೆ. ಪರಿಸರ ಸಂರಕ್ಷಣೆ ನಮ್ಮಿಂದಲೇ ಪ್ರಾರಂಭವಾಗಬೇಕು. ಪ್ಲಾಸ್ಟಿಕ್ ನಿಭಾಯಿಸುವ ಪರ್ಯಾಯ ಯೋಜನೆಯನ್ನುರೂಪಿಸಿಕೊಂಡು ಪ್ಲಾಸ್ಟಿಕ್ ಮಾಲಿನ್ಯವನ್ನು ಕಡಿಮೆ ಮಾಡಿ ಆರೋಗ್ಯಕರ ಭವಿಷ್ಯವನ್ನು ರೂಪಿಸಬಹುದಾಗಿದೆ ಎಂದರು.

ಶುದ್ಧ ವಿಜ್ಞಾನ ನಿಕಾಯದ ಡೀನರಾದ ಡಾ.ಶಶಿಕಾಂತ ಮಜಗಿ ಮಾತನಾಡಿ, ನಮ್ಮ ದೇಹದ ಕಣ ಕಣದಲ್ಲೂ ಪ್ಲಾಸ್ಟಿಕ್ ಅಂಶಗಳಿವೆ. ಮೈಕ್ರೋಪ್ಲಾಸ್ಟಿಕ್‌ಗಳ ನಿರ್ವಹಣೆಯು ಇಂದು ಸವಾಲಾಗಿದೆ. ಪರಿಸರ ಸಂರಕ್ಷಣೆಯಲ್ಲಿ ಜ್ಞಾನದ ಜೊತೆ-ಗೆ ಪರಿಸರದ ಕಾಳಜಿಯನ್ನು ವಹಿಸಿಸುವ ಅನಿವಾರ್ಯತೆ ಇಂದು ಎದುರಾಗಿದೆ ಎಂದು ತಿಳಿಸಿದರು.

ಪ್ರಾಣಿಶಾಸ್ತ್ರ ಪ್ರಾಧ್ಯಾಪಕರಾದ ಡಾ.ನಾಗಭೂಷಣ್ ಮಾತನಾಡಿ, ಪ್ಲಾಸ್ಟಿಕ್ ಬಳಕೆ ಹಾಗೂ ನಿರ್ವಹಣೆ ಕುರಿತು ಜಾಗೃತಿ ಹೊಂದುವು ಇಂದು ಅನಿವಾರ್ಯವಾಗಿದೆ. ಯಾವುದೆ ಪ್ಲಾಸ್ಟಿಕ್ ಬಳಸಬೇಕಾದರೆ ಹಲವು ಭಾರಿ ಯೋಚಿಸಿ ಬಳಸಿ ಎಂದರು.

ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಜೀವ ವಿಜ್ಞಾನ ಕಟ್ಟಡ ಮುಂಭಾಗದಲ್ಲಿ ಸಸಿ ನೆಡಲಾಯಿತು. ಪರಿಸರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆ ಕುರಿತು ಪ್ರಬಂಧ ವಾಚನ ಮಾಡಿದರು.

ಈ ಸಂದರ್ಭದಲ್ಲಿ ವಿವಿಯ ಸಿಂಡಿಕೇಟ್ ಸದಸ್ಯರಾದ ರಮೇಶ ಸವದಿ, ಪ್ರಾಣಿಶಾಸ್ತ್ರ ವಿಭಾಗದ ಸಿಬ್ಬಂದಿ ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ: ವಿವಿಧ ಯೋಜನೆಗಳಡಿ ಸಹಾಯಧನ/ಸಾಲ-ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ,06-ಕರ್ನಾಟಕಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ 2025-26 ನೇ ಸಾಲಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಗಳಡಿ ಸಹಾಯಧನ ಮತ್ತು ಸಾಲ-ಸೌಲಭ್ಯ ಪಡೆಯಲು ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 03 ಕೊನೆಯ ದಿನ ಆಗಿರುತ್ತದೆ (ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ).

*ಅರ್ಹತೆ:*

ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಉಪ್ಪಾರ ಹಾಗೂ ಅದರ ಉಪಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ/ ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು.

ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ ಅಭ್ಯರ್ಥಿಯ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನದ ಮಿತಿ ರೂ.3.50 ಲಕ್ಷ. ಸ್ವಾವಲಂಬಿ ಸಾರಥಿ ಯೋಜನೆಯಡಿ ವಯೋಮಿತಿ 21 ವರ್ಷಗಳಿಂದ 45 ವರ್ಷಗಳ ಮಿತಿಯಲ್ಲಿರಬೇಕು.

ವಿದೇಶಿ ವ್ಯಾಸಂಗ ಸಾಲ ಯೋಜನೆಯಡಿ ವಾರ್ಷಿಕ ವರಮಾನವು ರೂ.15 ಲಕ್ಷ ಮಿತಿಯಲ್ಲಿ ಇರಬೇಕು. ವಯೋಮಿತಿ: ವಿದ್ಯಾರ್ಥಿಯ ವಯಸ್ಸು 25 (ಸ್ನಾತಕೋತ್ತರ ಪದವೀಧರರಿಗೆ) ಮತ್ತು ಪಿ.ಎಚ್.ಡಿ. ಪದವೀಧವಿದರರಿಗೆ 27 ವರ್ಷಗಳ ವಯೋಮಿತಿ ನಿಗಧಿಪಡಿಸಲಾಗಿದೆ.) ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಗೆ ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಆಯ್ಕೆಮಾಡುವಾಗ ಮಹಿಳೆಯರಿಗೆ ಶೇ.33 ರಷ್ಟು, ವಿಕಲಚೇತನರಿಗೆ ಶೇ.5 ರಷ್ಟು, ತೃತೀಯ ಲಿಂಗಿಗಳಿಗೆ ಶೇ.1 ರಷ್ಟು ಮೀಸಲಾತಿ ಇದೆ.

*ನಿಗಮದ ಯೋಜನೆಗಳು:*

ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಸ್ವಯಂ ಉದ್ಯೋಗ ನೇರಸಾಲ (ಬ್ಯಾಂಕ್ ಗಳ ಸಹಯೋಗದೊಂದಿಗೆ), ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ) ಮತ್ತು (ನವೀಕರಣ), ವಿದೇಶಿ ವ್ಯಾಸಂಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ (ಕನಿಷ್ಠ 2 ಎಕರೆ ಜಮೀನು ಹೊಂದಿರಬೇಕು), ಸ್ವಾವಲಂಬಿ ಸಾರಥಿ ಯೋಜನೆ. ಸ್ವಾತಂತ್ರ ಅಮೃತ ಮುನ್ನಡೆ ಯೋಜನೆ(ಈ ಯೋಜನೆಯಡಿ ಅರ್ಜಿಯನ್ನು www.kaushalkar.com ನಲ್ಲಿ ಸಲ್ಲಿಸಬೇಕು).

ಅರ್ಜಿ ಸಲ್ಲಿಸುವಾಗ ಆಧಾರ್ ಕಾರ್ಡ್ನಲ್ಲಿರುವಂತೆ ಅರ್ಜಿದಾರರ ಹೆಸರು, ವಿಳಾಸ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳಲ್ಲಿನ ಹೆಸರು, ವಿಳಾಸ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿನ ಹೆಸರು ಕಡ್ಡಾಯವಾಗಿ ತಾಳೆಯಾಗಬೇಕು.

ಅರ್ಜಿಗಳನ್ನು ಬೆಂಗಳೂರು -ಒನ್/ ಕರ್ನಾಟಕ-ಒನ್/ ಅಟಲ್-ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರಿಕ ಸೇವಾ ಕೇಂದ್ರಗಳಲ್ಲಿ ಆನ್ ಲೈನ್ ಮೂಲಕ ಸೇವಾ ಸಿಂಧು ಪೋರ್ಟಲ್ ನಲ್ಲಿ ಸಲ್ಲಿಸಬಹುದು.

ವಿಶೇಷ ಸೂಚನೆ: 2023-24 ಮತ್ತು 2024-25ನೇ ಸಾಲುಗಳಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆ-ಯದೇ ಇರುವ ಅರ್ಜಿದಾರರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಅಂತಹ ಅರ್ಜಿದಾರರನ್ನು ಪ್ರಸ್ತುತ ಸಾಲಿಗೂ ಸಹ ಪರಿಗಣಿಸಲಾಗುವುದು. 2023-24 ಮತ್ತು 2024-25ನೇ ಸಾಲುಗಳಲ್ಲಿ ಅರ್ಜಿ ಸಲ್ಲಿಸಿರುವ ಯೋಜನೆಯನ್ನು ಹೊರತುಪಡಿಸಿ ಉಳಿದ ಯೋಜನೆಗಳಿಗೆ ಪ್ರಸ್ತುತ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್ ನ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ಅಥವಾ ಸಹಾಯವಾಣಿ ಸಂಖ್ಯೆ: 08392-267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋಹಿನೂರ ಗ್ರಾಮ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ತಾಲ್ಲೂಕಿನ ಕೋಹಿನೂರ ಗ್ರಾಮ ಪಂಚಾಯತ್ ನಲ್ಲಿ ಶುಕ್ರವಾರ ಗ್ರಾಮ ಪಂಚಾಯತ್ 15 ನೇ ಹಣಕಾಸಿನ ಮತ್ತು ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ರಾಜ್ಯ ಹಣಕಾಸು ಅನುದಾನ ಆಯೋಗದ ಸಾಮಾಜಿಕ ಸಾಮಾಜಿಕ ಪರಿಶೋಧನೆ ಕುರಿತು ಗ್ರಾಮ ಸಭೆ ನಡೆಯಿತು.

ಸಭೆಯಲ್ಲಿ ಸಾಮಾಜಿಕ ಪರಿಶೋಧನೆ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರಾದ ದೇವಿದಾಸ್ ಅವರು ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ



ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ನಾವು ಪರಿಶೀಲನೆ ಮಾಡುತ್ತೇವೆ. ಅವು ಪೂರ್ಣಗೊಂಡಿವೆ ಅಥವಾ ಇಲ್ಲ ಎಂಬುವುದರ ಗ್ರಾಮಸ್ಥರು ಮಾಹಿತಿ ನೀಡಬೇಕು ಮತ್ತು ಏನಾದರೂ ಸಮಸ್ಯೆಗಳು ಇದ್ದಲ್ಲಿ ನಮ್ಮ ಗಮನಕ್ಕೆ ತರಬೇಕು ಎಂದು ತಿಳಿಸಿದರು. ಸಾಮಾಜಿಕ ಪರಿಶೋಧನೆ ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಸಂಜುಕುಮಾರ ನಂದಿ ಅವರು ಮಾತನಾಡಿ, ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಹಾಗೂ ಖರ್ಚು ವೆಚ್ಚಿನ ಬಗ್ಗೆ ಮತ್ತು ದುಡಿಯುವ ಕೈ ಕೈಗಳಿಗೆ ಕೆಲಸ ನೀಡುವುದೇ ಯೋಜನೆ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಾ.ಪಂ.ಅಧ್ಯಕ್ಷೆ ಲಕ್ಷ್ಮೀ ಪರಶುರಾಮ್, ಗ್ರಾಮ ಪಂಚಾಯತ್ ಉಪಾಧ್ಯಕ್ಷೆ ಜೈಶ್ರೀ ಯಶ್ವಂತ, ಪಿಡಿಒ ಯೋಗೇಶ ಹಿರೇಮಠ, ಐಇಸಿ ಸಂಯೋಜ-ಕ ವೀರಾರೆಡ್ಡಿ, ಸಾಮಾಜಿಕ ಪರಿಶೋಧನಾ ಸಿಬ್ಬಂದಿ ಹಾಗೂ ನರೇಗಾ ಸಿಬ್ಬಂದಿ ಇದ್ದರು.

## ಜೂ.16 ರಂದು ಅಕ್ಕಿ, ಗೋಧಿ ಬಹಿರಂಗ ಹರಾಜು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಆಹಾರ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಗಳೊಂದಿಗೆ ಜಂಟಿ-ಯಾಗಿ ಕಾರ್ಯಾಚರಣೆ ನಡೆಸಿ ಜಪ್ತಿ ಮಾಡಲಾದ 4550.74 ಕ್ವಿಂಟಾಲ್ ಅಕ್ಕಿ ಮತ್ತು 63.20 ಕ್ವಿಂಟಾಲ್ ಗೋಧಿಯನ್ನು ಜೂ.16 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಸಗಟು ಗೋದಾಮು ಇಲ್ಲಿ ಬಹಿರಂಗ ಹರಾಜು ಮಾಡಲಾಗುತ್ತದೆ. ಆಸಕ್ತಿಯುಳ್ಳ ಬಿಡ್ಡುದಾರರು ಷರತ್ತುಗಳೊಂದಿಗೆ ಪಾಲ್ಗೊಳ್ಳಬಹುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಅನೌಪಚಾರಿಕ ಪಡಿತರ ಪ್ರದೇಶ, ಬಳ್ಳಾರಿ ಇವರನ್ನು ಸಂಪರ್ಕಿಸಬಹುದು ಪ್ರಕಟಣೆಯಲ್ಲಿ ತಿಳಿಸಿದೆ.

## ವಿಶ್ವ ಪರಿಸರ ದಿನಾಚರಣೆ: ಸಂಡೂರು ಪಟ್ಟಣದ ಮರು ಬಳಕೆಯಾಗದ ಪ್ಲಾಸ್ಟಿಕ್ ಕಲಬುರ್ಗಿಗೆ ರವಾನೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ವಿಶ್ವಪರಿಸರ ದಿನಾಚರಣೆ ಅಂಗವಾಗಿ "ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು" ಎಂಬ ಶೀರ್ಷಿಕೆಯಡಿ ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ, ಸಂಡೂರು ಪುರಸಭೆ ಹಾಗೂ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಸಹಯೋಗದೊಂದಿಗೆ ಸಂಡೂರು ಪಟ್ಟಣದ ಘನ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಶೇಖರಣೆಯಾಗಿರುವ ಮರು ಬಳಕೆಯಾಗದ ಪ್ಲಾಸ್ಟಿಕ್‌ನ್ನು ಕಲಬುರ್ಗಿ ಜಿಲ್ಲೆಯ ವಾಡಿಯಲ್ಲಿರುವ ಎಸಿಸಿ ಸಿಮೆಂಟ್ ಕಾರ್ಖಾನೆಗೆ ರವಾನಿಸುವ ವಾಹನಕ್ಕೆ ಗುರುವಾರ ಚಾಲನೆ ದೊರೆಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕೊಂಡೊಯ್ಯುವ ವಾಹನಕ್ಕೆ ಸಂಡೂರು ಪುರಸಭೆಯ ಅಧ್ಯಕ್ಷ ಸಿರಾಜ್ ಹುಸೇನ್ ಅವರು ಹಸಿರು ನಿಶಾನೆ ತೋರಿಸಿದರು.

ಇದೇ ವೇಳೆ ಸ್ವಚ್ಛ ಭಾರತ ಹಸಿರು ಭಾರತ-ಹಸಿರು ಪ್ರತಿಜ್ಞೆ ಭೋಧಿಸಲಾಯಿತು. ಬಳಿಕ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಸಸಿ ನೆಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಾಘವೇಂದ್ರ, ಕಾರ್ಯಪಾಲಕ ಅಭಿಯಂತರ ಅರುಣ್ ಪಾಟೀಲ್, ಪರಿಸರ ಅಭಿಯಂತರ ಅನ್ನಪೂರ್ಣ, ಸಂಡೂರು ಪುರಸಭೆ ಮುಖ್ಯಾಧಿಕಾರಿ ಜಯಣ್ಣ ಸೇರಿದಂತೆ ಸಿಬ್ಬಂದಿ ವರ್ಗ ಹಾಜರಿದ್ದರು.

## ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ: ಸಾಲ-ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ವತಿಯಿಂದ 2025-26ನೇ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ-ಸೌಲಭ್ಯ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸೌಲಭ್ಯ ಪಡೆಯಲು ಇಚ್ಛಿಸುವವರು ಆನ್‌ಲೈನ್ ಮೂಲಕ ಜುಲೈ 04 ರೊಳಗಾಗಿ ಅರ್ಜಿ ಸಲ್ಲಿಸಬೇಕು (ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ).

**ಅರ್ಹತೆ:**

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ವಿವಿಧ ಎಲ್ಲಾ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಪ್ರವರ್ಗ-3-ಬಿ ಅಡಿಯಲ್ಲಿ 2(ಎ) ಯಿಂದ 2(ಎಫ್) ವರೆಗೆ ಬರುವ ಸಮುದಾಯಕ್ಕೆ ಸೇರಿರಬೇಕು.

ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ-3ಬಿ ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು). ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂ-ಖ್ಯೆ ಜೋಡಣೆ ಮಾಡಿರಬೇಕು. ಸರ್ಕಾರಿ ಸೌಲಭ್ಯವನ್ನು (ಸಾಲ-ಸಹಾಯಧನ) ಪಡೆಯುವ ಸಂಬಂಧ ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆ ಸೀಡ್ ಮಾಡಿಸಿರಬೇಕು.

ಆಯ್ಕೆಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1 ರಷ್ಟು ಮೀಸಲಾತಿ ಇದೆ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರು (ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಅವಕಾಶವಿರುತ್ತದೆ).

**ಯೋಜನೆಗಳು:**

ಶಹಜೀರಾಜೇ ಸಮೃದ್ಧಿ ಯೋಜನೆ (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ) ಯೋಜನೆ, ಜೀಜಾವು ಜಲಭಾಗ್ಯ ಯೋಜನೆ (ಗಂಗಾ ಕಲ್ಯಾಣ ನೀರಾವರಿ ಯೋಜನೆ), ಅರಿವು ಶೈಕ್ಷಣಿಕ ಸಾಲ ಯೋಜನೆ(ಹೊಸದು) ಮತ್ತು (ನವೀಕರಣ), ರಾಜಶ್ರೀ ಶಾಹುಮಹಾರಾಜ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ (ಹೊಸದು) ಮತ್ತು (ನವೀಕರಣ), ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ), ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ ಅಮೃತ್ ಮಹೋತ್ಸವ ಮುನ್ನಡೆ ಯೋಜನೆಗೆ (https://www.kaushalkar.com) ಮೂಲಕ ಅರ್ಜಿ ಸಲ್ಲಿಸಬಹುದು.

**ವಿಶೇಷ ಸೂಚನೆ:**

ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂ ಸಹ ಆನ್‌ಲೈನ್ ನಲ್ಲಿ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬಹುದು. ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರು.

2023-24, 2024-25 ನೇ ಸಾಲಿನ ನಿಗದಿತ ಯೋಜನೆಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಈ ವರ್ಷ ಅರ್ಜಿ ಹಾಕಬಾರದು. ಸರ್ಕಾರ ಮತ್ತು ನಿಗಮ ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ ಮತ್ತು ನಿಬಂಧನೆಗಳನ್ನು ಹೊಂದಿದವರಾಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆ, ಜಿಲ್ಲಾಢಳಿತ ಭವನ, ಬಿ ಬ್ಲಾಕ್ 2ನೇ ಮಹಡಿ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಅಥವಾ ದೂ.08392-267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ. ಹೊನ್ನೂರ ಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನೀಡೋಣ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಮಣ್ಣಿನಲ್ಲಿ ಕರಗದೇ ಇರುವ ಹಾಗೂ ಪರಿಸರ ಮಾಲಿನ್ಯಕ್ಕೆ ಪ್ರಮುಖ ಕಾರಣವಾಗುತ್ತಿರುವ ಪ್ಲಾಸ್ಟಿಕ್‌ನ ಸಂಪೂರ್ಣ ಬಳಕೆ ನಿಲ್ಲಿಸುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನೀಡೋಣ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹವಾಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ವಿಭಾಗ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಶುಕ್ರವಾರ ಸಸಿ ನೆಟ್ಟು ನೀರುಣಿಸಿ ಬಳಿಕ ಅವರು ಮಾತನಾಡಿದರು.

ದಿನದಿಂದ ದಿನಕ್ಕೆ ಪರಿಸರದ ಮೇಲೆ ಗಂಭೀರ ಪರಿಣಾಮ ಉಂಟುಮಾಡುತ್ತಿರುವ ಪ್ಲಾಸ್ಟಿಕ್ ಬಳಕೆಯನ್ನು ಪ್ರತಿಯೊಬ್ಬರೂ ಸ್ವಯಂಪ್ರೇರಣೆಯಿಂದ ತಡೆಗಟ್ಟುವ ಮೂಲಕ ಮಣ್ಣು, ಗಾಳಿ, ನೀರು, ಪ್ರಾಣಿಸಂಕುಲ ಮುಂತಾದವುಗಳನ್ನು ಕಾಪಾಡಿಕೊಂಡು ಭೂಮಿಯ ಮೇಲೆ ಆರೋಗ್ಯ ಜೀವನ ಸಾಗಿಸುವ ಮಹತ್ವದ ಕಾರ್ಯ-ಕ್ಕೆ ಎಲ್ಲರೂ ಪಣತೊಡಬೇಕಿದೆ ಎಂದು ತಿಳಿಸಿದರು.

ಪ್ಲಾಸ್ಟಿಕ್ ಒಂದು ಅಜೈವಿಕ ವಸ್ತು. ಇದನ್ನು ಸುಟ್ಟರೆ ಟಾಕ್ಸಿಕ್ ಮೂಲಕ ಪರಿಸರವನ್ನು ಹಾಳು ಮಾಡುತ್ತದೆ ಹಾಗೂ ಹಸಿ ಮಣ್ಣಿನ ಜೊತೆ ಬೆರೆತರೆ ಅಮೋನಿಯ ಬಿಡುಗಡೆ ಮಾಡಿ ಹಸಿರು ಮನೆಯ ಪರಿಣಾಮದ ವೇಳೆ ಮಿಥೆನ್ ಜೊತೆ ಸೇರಿಕೊಂಡು ಕೆಟ್ಟವಾಸನೆ ಹರಡುತ್ತದೆ ಎಂದು ಅವರು ತಿಳಿಸಿದರು.

ಪ್ಲಾಸ್ಟಿಕ್‌ನಲ್ಲಿ ಹಾನಿಕಾರಕ ಅಂಶಗಳು ಮನುಷ್ಯನ ದೇಹಕ್ಕೆ ನಾನಾ ಹಂತಗಳಲ್ಲಿ ಸೇರಿ-ಕೊಂಡು ಹೃದಯ ಸಂಬಂಧಿ ಕಾಯಿಲೆಗಳು, ಥೈರಾಡ್, ಅಸ್ತಮಾ, ಕೂದಲು ಮತ್ತು ಚರ್ಮದ ಸಮಸ್ಯೆ, ನರ ಸಂಬಂಧಿ ಕಾಯಿಲೆಗಳು ಸೇರಿದಂತೆ ಮಾರಕ ರೋಗಗಳಿಗೆ ತುತ್ತಾಗುವುದು ಕಾಣಬಹುದು. ಹಾಗಾಗಿ ಪ್ಲಾಸ್ಟಿಕ್ ಬಳಕೆಯನ್ನು ಸ್ವಯಂ ಪ್ರೇರಣೆಯಿಂದ ನಿಯಂತ್ರಿಸೋಣ ಎಂದರು.

ಪ್ರತಿಜ್ಞೆ ಸ್ವೀಕಾರ: ಇದೇ ಸಂದರ್ಭದಲ್ಲಿ ಪರಿಸರಕ್ಕೆ ಮಾರಕವಾದ ಪ್ಲಾಸ್ಟಿಕ್ ಬ್ಯಾಗ್, ಪ್ಲಾಸ್ಟಿಕ್ ಬಾಟೆಲ್ ಮುಂತಾದ ವಸ್ತುಗಳನ್ನು ಬಳಸದೇ ಇರುವ ಕುರಿತು ಪ್ರತಿಜ್ಞೆ ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಾ.ಸುರೇಶ್ ಕುಮಾರ್, ಡಾ.ಪ್ರಿಯಾಂಕ ಸೇರಿದಂತೆ ಮಲೇರಿಯಾ, ಕುಷ್ಠರೋಗ, ಕುಟುಂಬ ಕಲ್ಯಾಣ ಕಾರ್ಯಕ್ರಮ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ಇದ್ದರು.

## ಜೂ.10 ರಂದು ವಿಶೇಷ ಚೇತನರಿಗೆ ಸಾಧನ ಸಲಕರಣೆಗಳ ವಿತರಣಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಕೇಂದ್ರ ಸರ್ಕಾರದ ವಿಶೇಷ ಆಡಿಪ್ ಯೋಜನೆಯಡಿ ಜೂ.10 ರಂದು ಬೆಳಿಗ್ಗೆ 11ಕ್ಕೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವಿಕಲಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ಸಮರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಘನ ಉಪಸ್ಥಿತಿ ಇರುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಉಪನಿರ್ದೇಶಕ ವಿಜಯಕುಮಾರ್ ಕೆ.ಹೆಚ್., ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಸೇರಿಂದತೆ ಜಿಲ್ಲಾ ವಿಕಲಚೇತನರ ಪುರ್ನವಸತಿ ಕೇಂದ್ರ ಹಾಗೂ ವಿಕಲಚೇತನರು ಮತ್ತು ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ-ಸಂಸ್ಥೆಗಳು ಮತ್ತು ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.




ನೋಂದಣಿಸಂಖ್ಯೆ:ಉನಿಬಿ/ವಿ4/ನೋಂದಣಿ/3905/2018-19/827
ದಿನಾಂಕ18-09-2018

**ಶ್ರೀ ಮಾಣಿಕಪ್ರಭು ಪತ್ತಿನ ಸೌಹಾರ್ದ ಸಹಕಾರಿ (ನಿ) ಹುಮನಾಬಾದ**

ಗಾದಾ ಕಾಂಪ್ಲೇಕ್ಸ್ ಐಬಿ ಎದುರಗಡೆ ಹುಮನಾಬಾದ.ಜಿಲ್ಲೆ:ಬೀದರ-585330.-08483-450005

**ಸಹಕಾರಿಯ 8ನೇ ವಾರ್ಷಿಕ ಸಾಮಾನ್ಯ ಸಭೆಯ ನೋಟಿಸ್ 06-06-2025**

ಇವರಿಗೆ,
ಸದಸ್ಯರ ಹೆಸರು ______________________

ಆತ್ಮೀಯ ಸಹಕಾರಿಯ ಸದಸ್ಯರಿಗೆ ವಿನಂತಿಸಿಕೊಳ್ಳುವದೇನೆಂದರೆ, ಶ್ರೀ ಮಾಣಿಕಪ್ರಭು ಪತ್ತಿನ ಸೌಹಾರ್ದ ಸಹಕಾರಿ (ನಿ) ಹುಮನಾಬಾದ ಇದರ 8ನೇ ವಾರ್ಷಿಕ ಸಾಮಾನ್ಯ ಸಭೆಯನ್ನು ದಿನಾಂಕ: 19-06-2025 ಗುರುವಾರ ರಂದು ಸಮಯ 11.00 ಗಂಟೆಗೆ ಸಹಕಾರಿಯ ಅಧ್ಯಕ್ಷರಾದ ಶ್ರೀ ರಮೇಶ ರಡ್ಡಿ ಅವರ ಅಧ್ಯಕ್ಷತೆಯಲ್ಲಿ ಎಂಟನೇ ವಾರ್ಷಿಕ ಸಭೆಯನ್ನು ಸಹಕಾರಿಯ ಕಛೇರಿಯಲ್ಲಿ ಕರೆಯಲಾಗಿದೆ. ತಾವು ಈ ಸಭೆಯಲ್ಲಿ ಭಾಗವಹಿಸಿ,ಈ ಕೆಳಗಿನ ವಿಷಯಗಳ ಕುರಿತು ಚರ್ಚಿಸಿ ಅನುಮೋದಿಸಲು ವಿನಂತಿಸಿದೆ.

ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಬೇಕಾದ ವಿಷಯಗಳು:-

1) 8ನೇ ಸಭೆಯ ನೋಟಿಸ್‌ನ್ನು ಓದಿ ದಾಖಲಿಸುವುದು.
2) 7ನೇ ವಾರ್ಷಿಕ ಸಾಮಾನ್ಯ ಸಭೆಯ ಸಭೆಯ ನಡವಳಿ ಮತ್ತು ನಿರ್ಣಯಗಳನ್ನು ಓದಿ ಅಂಗಿಕರಿಸಿಸುವುದು.
3) 2024-2025ನೇ ಸಾಲಿನ ಲೆಕ್ಕ ಪರಿಶೋಧನೆ ವರದಿ ಮತ್ತು ಆರ್ಥಿಕ ತಖ್ತೆಗಳನ್ನು ಓದಿ ದಾಖಲಿಸುವುದು.
4) 2024-25ನೇ ಸಾಲಿನ ಸಹಕಾರಿಯ ಕಾರ್ಯಚಟುವಟಿಕೆಯ ವಾರ್ಷಿಕ ವರದಿಯನ್ನು ಅನುಮೋದನೆ ಪಡೆಯುವುದು.
5) 2025-2026-27-28-29, ಮೂರು ವರ್ಷಗಳ ವಾರ್ಷಿಕ ಕ್ರೀಯಾಯೋಜನೆಯ ಅನುಮೋದನೆ ಪಡೆಯುವುದು.
6) ಸಹಕಾರಿ 2024-2025ನೇ ಸಾಲಿಗೆ ಹೊಸದಾಗಿ ಸೇರ್ಪಡೆಯಾಗಿರುವ ಸದಸ್ಯರುಗಳನ್ನು ಅನುಮೋದಿಸುವ ಕುರಿತು.
7) 2025-26ನೇ ಸಾಲಿನ ಸಹಕಾರಿಯ ಅಂದಾಜು ಅಯ್ಯ-ವ್ಯಯ ಮಂಜುರು ಮಾಡುವುದು.
8) 2025-26ನೇ ಸಾಲಿಗೆ ಲೆಕ್ಕ ಪರಿಶೋಧಕರ ನೇಮಕಾತಿಯ ಕುರಿತು.
9) ಸಹಕಾರಿಯಲ್ಲಿ ಕಾರ್ಯನಿರ್ವಹಿಸಲು ಸಿಬ್ಬಂದಿಗಳ ನೇಮಕಾತಿಯ ಕುರಿತು.
10) ಸಹಕಾರಿಯ ಸಾಲದ ನಿಯಮ ಮತ್ತು ಠೇವಣಿಯ ನಿಯಮಗಳ ಅಂಗೀಕಾರ ಕುರಿತು.
11) ಸಹಕಾರಿಯಲ್ಲಿ ಸಾಲ ಪಡೆದು ಸುಸ್ತಿದಾರರಾಗಿರುವದರಿಂದ ಸಾಲ ವಸೂಲಾತಿ ಮಾಡುವ ಕುರಿತು.
12)ಅಧ್ಯಕ್ಷರ ಅಪ್ಪಣೆಯ ಮೇರೆಗೆ ಇತರ ವಿಷಯಗಳು.

ವಂದನೆಗಳೊಂದಿಗೆ,

ಅಧ್ಯಕ್ಷರಆದೇಶದ
ಮೇರೆಗೆ

ಸಹಿ/
ಮಲ್ಲಿಕಾರ್ಜುನರಡ್ಡಿ
ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು

ದಿನಾಂಕ:-06-06-2025
ಸ್ಥಳ:ಹುಮನಾಬಾದ

ಸದಸ್ಯರಿಗೆ ವಿಶೇಷ ಸೂಚನೆಗಳು:- 1) ಸಾಮಾನ್ಯ ಸಭೆಗೆ ಆಗಮಿಸಿರುವ ಸದಸ್ಯರು ಗುರುತಿನ ಚೀಟಿ ಕಡ್ಡಾಯವಾಗಿ ತರಬೇಕು. 2) ಈ ಮೇಲಿನ ವಿಷಯಗಳ ಕುರಿತು ಮಾಹಿತಿ ಆಪೇಕ್ಷಿಸಿದಲ್ಲಿ ದಿನಾಂಕ:-19-06-2025 ಒಳಗಾಗಿ ಸಹಕಾರಿಗೆ ಲಿಖಿತ ಮನವಿಸಲ್ಲಿಸಬೇಕು.

# ಮನುಷ್ಯನಿಗೂ ಪರಿಸರಕ್ಕೂ ಅನ್ಯೋನ್ಯ ಸಂಬಂಧವಿದೆ: ಹುಸಾಮುದ್ದಿನ ಬಾಬಾ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಮನುಷ್ಯನಿಗೂ ಪರಿಸರಕ್ಕೂಅನ್ಯೋನ್ಯಸಂಬಂಧವಿದೆ. ಪ್ರತಿಯೊಬ್ಬರು ಒಂದೊಂದು ಸಸಿ ನೆಟ್ಟು, ಅದನ್ನು ಪೋಷಿಸಿ ಬೆಳೆಸಬೇಕೆಂದು ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ ಪಟ್ಟಣದ ಪಾನಿಬೇಸ್ ಬಾವಿ ಸುತ್ತಮುತ್ತಲಿನಲ್ಲಿ ಬಿದ್ದಿರುವ ಪ್ಲಾಸ್ಟಿಕ್ ಸ್ವಚ್ಛತೆಗೊಳಿಸಿದ ಸ್ಥಳದಲಿಯೇ ಸಸಿಗಳು ನೆಟ್ಟು ಮಾತನಾಡುತ್ತ ತಿಳಿಸಿದರು. ಮನುಷ್ಯ ಭೌತಿಕ ಸುಖದತ್ತ ಹೋರಳುತ್ತಿದಂತೆ, ಪರಿಸರದ ಮೇಲಿನ ಕಾಳಜಿ ಕಡಿಮೆ ಆಗುತ್ತಿದೆ. ಅರಣ್ಯ ನಾಶ, ಹಸಿರು ಪ್ರದೇಶ ಕುಸಿತ, ಮಾಲಿನ್ಯ, ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ಅತಿವೃಷ್ಟಿ, ಅನಾವೃಷ್ಟಿ, ಜಾಗತಿಕ ತಾಪಮಾನ ವೃದ್ಧಿಗೆ ಪರಿಸರ ನಾಶವೇ ಕಾರಣವಾಗುತ್ತಿದೆ ಎಂದರು. ಇಂದಿನ ದಿನಗಳಲ್ಲಿ ಮರಗಿಡಗಳನ್ನು ಕಡಿಯುತ್ತಿರುವುದರಿಂದ ಪರಿಸರದ ಅಸಮತೋಲನ ಉಂಟಾಗುತ್ತಿದೆ. ಇದರಿಂದ ಉಸಿರಾಡಲು ಪರಿಶುದ್ಧವಾದ ಗಾಳಿ ಸಿಗದಂತಹ ಸ್ಥಿತಿ ನಿರ್ಮಾಣವಾಗಿದೆ. ಪರಿಸರ ಸಮತೋಲನವನ್ನು ಕಾಪಾಡಲು ಹಾಗೂ ಮುಂದಿನ ಪೀಳಿಗೆಗೆ ಉತ್ತಮವಾದ ಪರಿಸರವನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ. ಪ್ರತಿಯೊಬ್ಬರು ಗಿಡಮರಗಳನ್ನು ನೆಟ್ಟು ಪೋಷಿಸಬೇಕು ಎಂಬ ಧೃಢ ಸಂಕಲ್ಪ ಮಾಡಿದರೆ ಉತ್ತಮವಾದ ಪರಿಸರವನ್ನು ಸೃಷ್ಟಿಸಲು ಸಾಧ್ಯ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ನಸೀರ್ ಹಕ್ಕಿಮ್, ವಿಶಾಲ್ ಬೋರಳೆ, ಸಿಬ್ಬಂದಿಗಳಾದ ಪೂಜಾ ಪಾನಶೆಟ್ಟಿ, ರವಿಕುಮಾರ್ ಸ್ವಾಮಿ, ಚಿದಾನಂದ ಪತ್ರಿ, ಸಂತೋಷ ಬಿರಾದಾರ್, ಆನಂದ, ಅಶ್ವಿನಿ ಚವ್ಹಾಣ, ಮಂಜುಳಾ, ಪ್ರಮುಖರಾದ ಭಾಸ್ಕರ್, ಮಹಮ್ಮದ್ ಶರೀಫ್ ಸೇರಿದಂತೆ ಪೌರ ಕಾರ್ಮಿಕರು, ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಯಲ್ಲಿ ನಿರ್ಲಕ್ಷ್ಯ ಸಲ್ಲದು ಉತ್ತಮ ಚಿಕಿತ್ಸೆ ನೀಡಿ ಮಾತ್ರೆ, ಔಷಧಗಳನ್ನು ವೈದ್ಯರು ರೋಗಿಗಳಿಗೆ ವಿತರಿಸಬೇಕು. ಮಾತ್ರೆ, ಔಷಧಗಳು ದಾಸ್ತಾನಿದ್ದರೂ ಹೊರಗಿನ ಮೆಡಿಕಲ್ ಸ್ಟೋರ್‌ಗಳಿಗೆ ಬರೆದು ಕೊಟ್ಟರೆ, ಅಂತಹ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ತಾಲೂಕಿನ ಬೇಮಳಖೇಡಾ ಗ್ರಾಮದಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಗರ್ಭಿಣಿ ಮಹಿಳೆ ಹೆರಿಗೆ ಬಳಿಕ ತೀವ್ರ ರಕ್ತ ಸ್ರಾವದಿಂದ ಮೃತಪಟ್ಟಿದ್ದಾರೆ ಎಂದು ಸುದ್ದಿ ತಿಳಿದು ಸ್ಥಳಕ್ಕೆ ಭೇಟಿ ನೀಡಿ ಆಸ್ಪತ್ರೆ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಿ ಮಾತನಾಡಿದರು. ದಿನಾಂಕ 2ರಂದು ಹೆರಿಗೆಗಾಗಿ ದಾಖಲಾಗಿದ ಮಹಿಳೆ ವೈದ್ಯರ ನಿರ್ಲಕ್ಷ್ಯತನದಿಂದ ಮೃತಪಟ್ಟಿದ್ದಾರೆ ಎಂದು ಆರೋಪದ ಹಿನ್ನೆಲೆಯಲ್ಲಿ ಬೇಮಳಖೇಡಾ ಗ್ರಾಮದ ಸರಕಾರಿ ಆರೋಗ್ಯ ಕೇಂದ್ರಕ್ಕೆ ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಅಸಮಾಧಾನ ವ್ಯಕ್ತಪಡಿಸಿದರು. ಬೇಮಳಖೇಡಾ ಗ್ರಾಮದ ನಿವಾಸಿ ಮಹಾನಂದಾ ವೀರಪ್ಪಡಾಲಿ ಮೃತ ದುರ್ದೈವಿ ಮಹಿಳೆ. ಹೆರಿಗೆಗಾಗಿ ಬೇಮಳಖೇಡಾ ಸರಕಾರಿ ಆಸ್ಪತ್ರೆಗೆ ದಾಖಲಾಗಿದ್ದು ಡೆಲಿವರಿ ಸಹ ಆಗಿ ಹೆಣ್ಣು ಮಗುವಿಗೆ ಜನಿಸಿದೆ. ಬಳಿಕ ರಕ್ತ ಸ್ರಾವ ಆಗುತ್ತಿದ್ದ ಕಾರಣ ಇಲ್ಲೆ ಚಿಕಿತ್ಸೆ ನೀಡಿದ್ದು ಆದರೂ ರಕ್ತಸ್ರಾವ ನಿಲ್ಲದ ಕಾರಣ ಬೀದರಗೆ ಶಿಫಾರಸ್ಸು ಮಾಡಿದ್ದು, ಸಮಯಕ್ಕೆ ಅಂಬುಲೆನ್ಸ್ ಇಲ್ಲದ ಕಾರಣ ಖಾಸಗಿ ವಾಹನದಲ್ಲಿ ಬೀದರಗೆ ಸಾಗಿಸುತ್ತಿದ ದಾರಿ ಮಧ್ಯೆ ಮಹಿಳೆ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಇನ್ನು ಡೆಲಿವರಿ ಆದ ಮೇಲೆ ರಕ್ತಸ್ರಾವ ನಿಲ್ಲದ ಸಮಯದ ತಡವಾಗಿ ಮತ್ತು ಸಮಯಕ್ಕೆ ಅಂಬುಲೆನ್ಸ್ ಇಲ್ಲದೆ ತಡವಾಗಿ ಮಹಿಳೆ ಮೃತಪಟ್ಟಿದ್ದಾಳೆಂದು ಮೃತಳ ಸಂಬಂಧಿಕರ ಆರೋಪವಾಗಿದೆ. ಈ ಹಿನ್ನೆಲೆಯಲ್ಲಿ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಭೇಟಿ ನೀಡಿ ಆಸ್ಪತ್ರೆಯಲ್ಲಿ ಅವ್ಯವಸ್ಥೆ ಕುರಿತು ಅಸಮಧಾನ ವ್ಯಕ್ತಪಡಿಸಿದ್ದಾರೆ. ಈ ಸಮಯದಲ್ಲಿ ಖುದ್ದು ಶಾಸಕ ಬೆಲ್ದಾಳೆ ಅವರು ಬಿಪಿ, ಶುಗರ, ರಕ್ತ ಪರೀಕ್ಷೆ ಮಾಡಿಕೊಳ್ಳಲು ಮುಂದಾದಾಗ ಅಲ್ಲಿನ ತಪಾಸಣೆಯ ಡಯಾಬಿಟಿಕ, ಬಿಪಿ ಆಪರೇಟರ ಸರಿಯಾಗಿ ಇಲ್ಲದ ಕಂಡು ಬಂತು. ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲು ಅವಶ್ಯವಿರುವ ವಸ್ತುಗಳು ಸುಸ್ಥಿತಿಯಲ್ಲಿ ಇಲ್ಲ ಹೇಗೆ ವೈದ್ಯರು ಮತ್ತು ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿರಿ ಎಂದು ಹಾಜರಿದ್ದ ವೈದ್ಯರಿಗೆ ಆಸ್ಪತ್ರೆಯಲ್ಲಿನ ಅವ್ಯವಸ್ಥೆ ಸರಿಪಡಿಸಿ ಬರುವ ಜನರಿಗೆ ಉತ್ತಮ ಚಿಕಿತ್ಸೆ ನೀಡುವಂತೆ ತಾಕಿತು ಮಾಡಿದರು. ಬೇಮಳಖೇಡಾ ಆಸ್ಪತ್ರೆಗೆ ಒಂದು ಅಂಬುಲೆನ್ಸ್ ನೀಡಿ ಮತ್ತು ವಾಹನ ಚಾಲಕರನ್ನು ನೇಮಿಸಬೇಕು. ಅಗತ್ಯ ನೇರವನ್ನು ನೀಡಲಾಗುವುದು ಎಂದು ಭರವಸೆ ನೀಡಿದರು. ಬಳಿಕ ವೈದ್ಯರ ಸಭೆ ನಡೆಸಿ ಆಸ್ಪತ್ರೆಯಲ್ಲಿರುವ ಸಮಸ್ಯೆಗಳ ಅಹವಾಲು ಜನರಿಂದ ಸ್ವೀಕರಿಸಿ ಆಸ್ಪತ್ರೆಯಲ್ಲಿ ಯಾವುದೇ ಸಮಸ್ಯೆಗಳು ಕಂಡುಬರದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದೆ. ಪ್ರತಿನಿತ್ಯ ರೋಗಿಗಳ ಉಪಚಾರಕ್ಕಾಗಿ ಸರಕಾರವು ಒದಗಿಸುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ಪಡೆದು ಹೆಚ್ಚಿನ ಮೂಲ ಸೌಕರ್ಯಗಳನ್ನು ಒದಗಿಸಲು ಆರೋಗ್ಯ ಸಚಿವರನ್ನು ಭೇಟಿಯಾಗುತ್ತೆನೆ. ಸರ್ಕಾರಿ ಉಪ ವಿಭಾಗ ಆಸ್ಪತ್ರೆಗೆ ಚಿಕಿತ್ಸೆಗೆ ಬರುವ ಹೊರ ಮತ್ತು ಒಳ ರೋಗಿಗಳಿಗೆ ಉಂಟಾಗುತ್ತಿರುವ ಸಮಸ್ಯೆ ಬಗ್ಗೆ ವಿವರಿಸಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ವೈದ್ಯಕೀಯ ಕಾರ್ಯಕ್ರಮ ಅಧಿಕಾರಿ ಶಿವಶಂಕರ, ಟಿಎಚ್‌ಓ ಶಿವಕುಮಾರ ಸಿದ್ಧೇಶ್ವರ, ಪಿಡಿಓ ಸುಶಾಮುಖಂಡರಾದ ನಾಗಭೂಷಣ ಕಮಠಾಣಾ, ಗ್ರಾಪಂ ಅಧ್ಯಕ್ಷ ಮಂಜುನಾಥ ಸುಣಗಾರ, ಬಸವರಾಜ ಚಟ್ಟನಳ್ಳಿ, ವೈಜಿನಾಥ, ಬಸವರಾಜ, ಅನೀಲ, ಭೀಮಶಾ, ನಾಗರಾಜ ಗುಮ್ಮದ, ಸಿದ್ದು ಮುದ್ದಾ ಮತ್ತಿತರರು ಉಪಸ್ಥಿತರಿದ್ದರು.

# ಘೋಟಾಳದ ಮಾದರಿ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: –ತಾಲೂಕಿನ ಘೋಟಾಳ ಗ್ರಾಮದ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ಹಿಂದೂಜಾ ಲೇಲ್ಯಾಂಡ್ ಫೈನಾನ್ಸ್ ಕಂಪನಿ ಲಿಮಿಟೆಡ್ ಇವರ ನೇತೃತ್ವದಲ್ಲಿ ಶಾಲೆಯ ಆವರಣದಲ್ಲಿ ವಿಶ್ವ ಪರಿಸರ ದಿನಚರಣೆ ಅಂಗವಾಗಿ 150 ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ಶಾಲೆಯ ಮುಖ್ಯಗುರುಗಳಾದ ಮಲ್ಲಿಕಾರ್ಜುನ ಮೇತ್ರೆ ಮಾತನಾಡಿ, ನಮ್ಮ ಭೂಮಿ – ನಮ್ಮ ಪರಿಸರ ಇಂದು ವಿಶ್ವ ಪರಿಸರ ದಿನ. ಪ್ರತಿ ವರ್ಷವೂ ಜೂನ್ 5 ರಂದು ವಿಶ್ವ ಪರಿಸರ ದಿನವನ್ನಾಗಿ ಆಚರಿಸಲಾಗುವುದು ಎಂದರು. ನಮಗಿರುವುದು ಒಂದೇ ಭೂಮಿ – ಒಂದೇ ಪರಿಸರ. ಇದರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಪರಿಸರ ಸಂರಕ್ಷಣೆಯಿಂದ ನಮ್ಮ ಭವಿಷ್ಯದ ನಿರ್ಮಾಣ ಸಾಧ್ಯ ವಿಶ್ವ ಪರಿಸರ ದಿನದ ಮೂಲ ಆಶಯ ನಮ್ಮ ಪ್ರಕೃತಿ ಹಾಗೂ ಪರಿಸರವನ್ನು ಉಳಿಸುವುದು. ಪ್ರತಿ ವರ್ಷವೂ ವಿವಿಧ ರಾಷ್ಟ್ರಗಳ ಆತಿಥೇಯ ನಿರ್ವಹಣೆಯ ಜೊತೆಗೆ ವಿಭಿನ್ನ ಧ್ಯೆಯದೊಂದಿಗೆ ಆಚರಿಸಲಾಗುವುದು ಎಂದು ಹೇಳಿದರು. ಆಗ್ನೇಯ ಉತ್ತರ ಕರ್ನಾಟಕದ ಪ್ರದೇಶ ವ್ಯವಹಾರ ವ್ಯವಸ್ಥಾಪಕರಾದ ಭೀಮರಾವ ಪ್ರಕಾಶ ಮಾತನಾಡಿ ವಿಶ್ವ ಪರಿಸರ ದಿನ "ಕಾಡಿನ ಹಸಿರು, ನಮ್ಮೆಲ್ಲರ ಉಸಿರು" ಪರಿಸರದ ಸ್ವಚ್ಛತೆ ಕಾಪಾಡಿ, ಮುಂದಿನ ಯುವಪೀಳಿಗೆಗೆ ಉಳಿಸುವುದು ನಮ್ಮ ಮೇಲಿರುವ ಗುರುತರವಾದ ಜವಾಬ್ದಾರಿ ಪ್ಲಾಸ್ಟಿಕ್ ಬಳಕೆಯನ್ನು ತಡೆಗಟ್ಟಿ, ಪರಿಸರಸ್ನೇಹಿ ವಸ್ತುಗಳನ್ನು ಬಳಸಿ, ಮಾಲಿನ್ಯವನ್ನು ತಡೆಗಟ್ಟೋಣ ಎಂದು ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕಿ ರೇಖಾ ಬುರುಳೆ. ಸಪ್ನಾ ದಾಂಡಗೆ. ಗೋದಾವರಿ ನಾಗದೇ. ಶಾವುಬಾಯಿ ಸೂರ್ಯವಂಶಿ. ಶಿಕ್ಷಕರಾದ ರಘುನಾಥ್ ವಾಗಮಾರೆ . ಅಶೋಕ ಗರುಡ. ಕಲೀಮ್ ಪಾಷಾ. ಪ್ರಿಯಾ ಮಾನಕಾರಿ ಶಾಲೆಯ ಮಕ್ಕಳು ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಆರೋಗ್ಯವಂತ ಸಮಾಜಕ್ಕಾಗಿ ಪರಿಸರ ರಕ್ಷಣೆಗೆ ಮುಂದಾಗಿ–ಪ್ರಿಯದರ್ಶಿನಿ ಮುಂಡರಗಿಮಠ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಶ್ರೀಶೈಲ ನಗರದ ಸರಕಾರಿ ಶಾಲಾ ಆವರಣದಲ್ಲಿ ಮಹಿಳಾ ಧ್ವನಿ ಸಂಸ್ಥೆ, ಯುವ ಧ್ವನಿ ಸಂಸ್ಥೆ, ನೆಹರು ಯುವ ಕೇಂದ್ರ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಸಸಿ ನೆಡುವ ಮೂಲಕ ಸಾಮಾಜಿಕ ಕಾರ್ಯಕರ್ತೆ ಪ್ರಿಯದರ್ಶಿನಿ ಮುಂಡರಗಿಮಠ ಉದ್ಘಾಟಿಸಿದರು. ಇದೇ ವೇಳೆ ಮಾತನಾಡಿ ನಾವೆಲ್ಲರೂ ಪರಿಸರ ಸಂರಕ್ಷಣೆಯ ಬಗ್ಗೆ ಹೆಚ್ಚು ಅರಿವು ಮೂಡಿಸುವ ಅಗತ್ಯವಿದೆ. ಪ್ರತಿನಿತ್ಯ ಕಲುಷಿತ ಗಾಳಿ ಆಹಾರ ಸೇವನೆಯಿಂದ ಅನಾರೋಗ್ಯ ಹೆಚ್ಚಾಗಿ ಆಯುಷ್ಯ ಕಡಿಮೆಯಾಗುತ್ತಿದೆ. ಸುತ್ತಮುತ್ತಲಿನ ವಾತಾವರಣ ಶುಚಿಗೊಳಿಸುವುದರ ಜೊತೆಗೆ ಸಸಿ ನೆಟ್ಟು ಪರಿಸರ ಕಾಳಜಿವಹಿಸಬೇಕು. ಆರೋಗ್ಯವಂತ ಸಮಾಜಕ್ಕಾಗಿ ಪರಿಸರ ರಕ್ಷಣೆಗೆ ಮುಂದಾಗಬೇಕಿದೆ ಎಂದರು.

ಇದೇ ವೇಳೆ ಶಾಲಾ ಆವರಣದಲ್ಲಿ ಸಸಿ ನೆಡಲಾಯಿತು, ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ನೋಟಬುಕ್ ಪೆನ್ ವಿತರಿಸಿ ಪರಿಸರ ಕಾಳಜಿ ವಹಿಸಲು ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ಬಿ.ಎನ್ ಹೊರಪೇಟಿ, ಶಿಕ್ಷಣ ಪ್ರೇಮಿ ಹಜರತ್ ಅಲಿ, ಮುಖ್ಯೋಪಾಧ್ಯಾಯರಾದ ಬಾಲನಾಗಮ್ಮ ಗೊಂಡಬಾಳ, ಕಲ್ಪನಾ ದೇಸಾಯಿ, ಸುಧಾಕೆ, ಸುರೇಖಾ ಎಚ್, ಮುಸ್ತಿಸಾಬ ವಾಲಿಕಾರ, ಬಿಬೀಜಾನ ಚಿತ್ತಾಪುರ ಮುತ್ತು ಮುದ್ದು ಮಕ್ಕಳು ಯುವಕರು ಉಪಸ್ಥಿತಿ ಇದ್ದರು.

# ಆದರ್ಶ ದಾಂಪತ್ಯ ಸಮಾಜದ ಆಸ್ತಿ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಗ್ರಹಸ್ಥಾಶ್ರಮ ಭಾರತೀಯ ಪರಂಪರೆ ಜಗತ್ತಿಗೆ ಕೊಟ್ಟ ಶ್ರೇಷ್ಠ ಪರಿಕಲ್ಪನೆಯಾಗಿದ್ದು ಆದರ್ಶ ದಾಂಪತ್ಯ ಸಮಾಜದ ಆಸ್ತಿ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಶ್ರೀಮತಿ ಸೋಮಲಿಂಗಮ್ಮ ಶ್ರೀ ಶಿವಕುಮಾರರೆಡ್ಡಿ ದೇಶಮುಖ ಹಾಬಾಳ ಟಿ. ಇವರ ಮಕ್ಕಳು ಆಯೋಜಿಸಿದ ಭಕ್ತಿಯ ತುಲಾಭಾರ ಹಾಗೂ ದೇಶಮುಖ ದಂಪತಿಗಳ ವಿವಾಹ ಸುವರ್ಣ ಮಹೋತ್ಸವದ ಪಾವನ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು, ಭಾರತೀಯ ಕುಟುಂಬ ವ್ಯವಸ್ಥೆ ಜಗತ್ತಿನಲ್ಲಿಯೇ ಮಾದರಿಯಾಗಿದ್ದು, ಯಾರು ಗೃಹಸ್ಥ ಜೀವನ ದೈವಿಚ್ಛೆಯಂತೆ ಯೋಗ್ಯ ರೀತಿಯಲ್ಲಿ ಪೂರೈಸುತ್ತಾರೊ ಅಂತಹವರು ಪೂರ್ಣತೆಯಡೆಗೆ ಸಾಗಲು ಸಾಧ್ಯವಾಗಬಹುದಾಗಿದೆ.

ಜೀವನದ ವಿವಿಧ ಸ್ಥರಗಳಾದ ಶೈಶವ, ಬಾಲ್ಯ, ತಾರುಣ್ಯ, ಗ್ರಹಸ್ಥ, ವಾನಪ್ರಸ್ಥ, ಸನ್ಯಾಸಗಳನ್ನು ಆಧ್ಯಾತ್ಮದ ಚೌಕಟ್ಟಿನಲ್ಲಿ ದಾಟಿ ಬಂದವ ಜೀವನ್ಮುಕ್ತಿಗೆ ಅರ್ಹನಾಗಿರುತ್ತಾನೆ.

ಗುರು ತೋರಿದ ಮಾರ್ಗದಲ್ಲಿ ಜೀವನ ಧರ್ಮಮುಖಿ, ಸಮಾಜಮುಖಿಯಾದಾಗ ಬಾಳಿಗೊಂದು ನಿಜಾರ್ಥ ದೊರೆಯುತ್ತದೆ.

ಸೋಮಲಿಂಗಮ್ಮ ಶಿವಕುಮಾರರೆಡ್ಡಿ ದೇಶಮುಖ ಹಾಬಾಳ ಟಿ. ರವರು ಗುರುವಿಗೆ, ಧರ್ಮಕ್ಕೆ ಬದ್ಧರಾಗಿ 50 ವರ್ಷದ ದಾಂಪತ್ಯ ಜೀವನ ಸಾರ್ಥಕವಾಗಿ ನಿಭಾಯಿಸಿರುವುದು ಅವರ ಪರಿವಾರಕ್ಕೆ ಹಾಗೂ ಸಮಾಜಕ್ಕೂ ಮಾದರಿಯಾಗಿದೆ.

ಹಾರಕೂಡ ಚೆನ್ನಬಸವ ಶಿವಯೋಗಿಗಳ ಶ್ರೀರಕ್ಷೆಯಲ್ಲಿ ನೂರುಕಾಲ ಬಾಳಿ ಬದುಕಲಿ, ಅವರ ಪರಿವಾರಕ್ಕೂ ಹಾಗೂ ಎಲ್ಲರಿಗೂ ಶುಭವಾಗಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ

ಮುಖಂಡರಾದ ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಪಂಚಾಕ್ಷರಿ ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಶಿವಕುಮಾರರೆಡ್ಡಿ ದೇಶಮುಖ, ಸೋಮಲಿಂಗಮ್ಮ ದೇಶಮುಖ, ಅಭಿಷೇಕ ದೇಶಮುಖ, ಆನಂದರಾವ ಝಳಕೆ, ವಿಜಯಕುಮಾರ ಸಂಗೋಳಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಶಿವಕುಮಾರ ಭಕ್ತ ಕುಂಬಾರ ನಿರೂಪಿಸಿದರು.

ಅಭಿಷೇಕ ರೆಡ್ಡಿ ದೇಶಮುಖ ವಂದಿಸಿದರು. ಸಮಾರಂಭದಲ್ಲಿ ವಿವಾಹ ಸುವರ್ಣ ಮಹೋತ್ಸವ ನಿಮಿತ್ಯ ಶ್ರೀಮತಿ ಸೋಮಲಿಂಗಮ್ಮ ಶ್ರೀ ಶಿವಕುಮಾರರೆಡ್ಡಿ ದೇಶಮುಖ ಹಾಬಾಳ ಟಿ. ದಂಪತಿಗಳಿಗೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಆಶೀರ್ವದಿಸಿದರು.

ಕಾರ್ಯಕ್ರಮದಲ್ಲಿ ಮೇನಕಾ ಚಂದ್ರಶೇಖರ ಪಾಟೀಲ ಹರವಾಳ, ರಶ್ಮಿ ಬಾಬುಗೌಡ ಬಾದರ್ಲಿ ಸಿಂಧನೂರ ಹಾಗೂ ತೇಜಸ್ವಿನಿ ನವೀನಗೌಡ ಬಾಸೂರ ದಂಪತಿಗಳು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಗುರುವಂದನೇ ಸಲ್ಲಿಸಿ, ಭಕ್ತಿಯ ತುಲಾಭಾರ ಮಾಡಿ ಆಶೀರ್ವಾದ ಪಡೆದರು.

# ಸಿದ್ರಾಮ ಇಂಡಿ ಶಿಕ್ಷಕರ ಬೀಳ್ಕೊಡುಗೆ ಸಮಾರಂಭದಲ್ಲಿ ರಕ್ತದಾನ ಶಿಬಿರ ಹಾಗೂ ಸಸಿ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್–ತಾಲೂಕಿನ ಲಾಲಧರಿ ತಾಂಡದ ಮುಖ್ಯ ಗುರುಗಳಾದ ಸಿದ್ರಾಮ ಇಂಡಿ ಯವರು ಅತ್ಯುತ್ತಮವಾಗಿ ಸೇವೆ ಸಲ್ಲಿಸಿ ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಪ್ರೀತಿಗೆ ಪಾತ್ರರಾಗಿದ್ದ ಇವರು ಸೇವಾ ನಿವೃತ್ತಿ ಹೊಂದಿದ್ದಕ್ಕೆ ಅವರ ಅಭಿಮಾನಿ ಬಳಗ ಹಾಗೂ ಅವರ ಶಿಷ್ಯರು ತಾಲೂಕಿನ ಹಳ್ಳಿಖೇಡ (ಕೆ) ಗ್ರಾಮದ ಕಿನ್ನರಿ ಬ್ರಹ್ಮೇಶ್ವರ ದೇವಾಲಯದಲ್ಲಿ ಸಮಾರಂಭ ಏರ್ಪಡಿಸಿ ರಕ್ತದಾನ ಶಿಬಿರ ಕಲ್ಬುರ್ಗಿಯ ನವಜೀವನ ರಕ್ತನಿಧಿ ಕೇಂದ್ರದಿಂದ ಶಿಬಿರ ಜರುಗಿತು. ಈ ರಕ್ತದಾನ ಶಿಬಿರದಲ್ಲಿ ಅವರ ಅಭಿಮಾನಿಗಳು ಶಿಷ್ಯರು, ರಕ್ತದಾನ ಮಾಡಿದರು. ಈ ಶಿಬಿರದಲ್ಲಿ ಸುಮಾರು 20 ಯೂನಿಟ್ ರಕ್ತ ಸಂಗ್ರಹಿಸಲಾಯಿತು. ಗುರುವಿನ ಹೆಸರು ಸದಾ ಹಸಿರಾಗಿರಲು ಸೇವಾ ನಿವೃತ್ತಿಯ ಸವಿ ನೆನಪಿಗಾಗಿ ಕಾರ್ಯಕ್ರಮಕ್ಕೆ ಬಂದ ಪ್ರತಿಯೊಬ್ಬರಿಗೆ ಹೂವಿನ ಗಿಡಗಳು ಹಾಗೂ ಹಣ್ಣಿನ ಗಿಡಗಳು ವಿತರಿಸಲಾಯಿತು. ಕಲ್ಲೂರಿ ಹಿರೇಮಠದ ಮೃತ್ಯುಂಜಯ ಶಿವಾಚಾರ್ಯರು ಈ ಕಾರ್ಯಕ್ರಮಕ್ಕೆ ಆಗಮಿಸಿ ಆಶೀರ್ವದಿಸಿ ಮಾತನಾಡಿದ ಅವರು, ಸಿದ್ರಾಮ ಇಂಡಿ ಅವರು ಸೇವೆ ಸಲ್ಲಿಸಿದ ಗ್ರಾಮಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರೀತಿಯ ಪಾತ್ರರಾಗಿ ಸೇವೆ ಸಲ್ಲಿಸಿದ್ದಾರೆ ಎಂದರು. ನಾನು ಹಲವಾರು ಬೀಳ್ಕೊಡುಗೆ ಸಮಾರಂಭಗಳಲ್ಲಿ ಭಾಗವಹಿಸಿದೇನೆ ಇದು ಒಂದು ಅತ್ಯುತ್ತಮ ಮಾದರಿಯ ಬೀಳ್ಕೊಡುಗೆ ಎಂದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಇಂದಿನ ಋತುಮಾನಗಳ ವ್ಯತ್ಯಾಸ, ತಾಪಮಾನದ ಹೆಚ್ಚಳದಲ್ಲಿ ಪರಿಸರ ಪಾತ್ರ ಮುಖ್ಯವಾಗಿದೆ. ಸ್ವಚ್ಛ, ಸುದರ ಪರಿಸರ ಕಾಪಾಡಲು ಪ್ರತಿಯೊಬ್ಬರೂ ಕೈಜೋಡಿಸಬೇಕು, ಹಸಿರು ಪರಿಸರ ಪ್ರೀತಿ ಹೆಚ್ಚಿಸಲು, ಪರಿಸರದೊಂದಿಗೆ ಬಾಂಧವ್ಯ ಬೆಳೆಯಲು ಮನೆಯ ಸುತ್ತಮುತ್ತ ಮರ–ಗಿಡಗಳನ್ನು ಬೆಳೆಸಬೇಕೆಂದು ಕರೆ ನೀಡಿದರು.


ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಾದ ಮಹಾವೀರ್ ಜಮಖಂಡಿ, ಉದಯರಾಜ, ಯೋಗೇಂದ್ರ ಶಿವಾಚಾರ್ಯರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕ ಅಧ್ಯಕ್ಷ ರವೀಂದ್ರ ರೆಡ್ಡಿ, ಮುರುಗೇಂದ್ರ ಸಜ್ಜನ್, ಗುಂಡಣ್ಣ ಡಿಗ್ಗಿ, ರಾಜಕುಮಾರ್ ಪಾಟೀಲ್, ಹುಮನಾಬಾದ್ ಪುರಸಭೆ ಮುಖ್ಯಾಧಿಕಾರಿ ಮೀನಾಕುಮಾರಿ, ಶಿವಪ್ರಸಾದ್ ಇಂಡಿ, ಪ್ರಕೃತಿ ಎಸ್ ಇಂಡಿ, ಪಂಕಜ ಆರ್ ಪಾಟೀಲ್, ಸುಭಾಷ್ ವಾರದ್, ಭಕ್ತರಾಜ್ ಪಾಟೀಲ್, ಉಪಸ್ಥಿತರಿದ್ದರು. ಸೇವಾ ನಿವೃತ್ತಿ ಹೊಂದಿರುವ ಸಿದ್ರಾಮ ಇಂಡಿ ಸಂಗಮ ಎಸ್ ಇಂಡಿ ದಂಪತಿಗಳಿಗೆ ಅವರ ಶಿಷ್ಯರು ಬಂಧು ಬಳಗ ಸನ್ಮಾನಿಸಿ ಬೀಳ್ಕೊಟರು. ಮುಖ್ಯ ಶಿಕ್ಷಕಿ ಭವನೇಶ್ವರಿ ಕಾರ್ಯಕ್ರಮವನ್ನು ನಿರೋಪಿಸಿ ವಂದಿಸಿದರು.

# ಕೆಂಪು ಮಣ್ಣಿನ ಕಂಪು ಹೆಚ್ಚಿಸಿದ ಶಿವಾನಿ : ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಹುಮಬಾಬಾದ್ : ಕಲ್ಯಾಣ ಕರ್ನಾಟಕ ಭಾಗದ ಯುವ ಪ್ರತಿಭೆ ಶಿವಾನಿ ಸ್ವಾಮಿ ತನ್ನ ಅದ್ಭುತ ಸುಮಧುರ ಕಂಠದಿಂದ ಸುಂದರ ಹಾಡುಗಳನ್ನು ಹಾಡುತ್ತಾ ಜೀ ಕನ್ನಡ ವಾಹಿನಿಯ ಜನಪ್ರಿಯ ಸಿಂಗಿಂಗ್ ರಿಯಾಲಿಟಿ ಶೋ ಸರಿಗಮಪ ಸೀಜನ್–21 ವಿನ್ನರ್ ಆಗುವ ಮೂಲಕ ಗಡಿ ಜಿಲ್ಲೆ ಬೀದರನ ಕೆಂಪು ಮಣ್ಣಿನ ಕಂಪು ಹೆಚ್ಚಿಸಿದ್ದಾರೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ತಿಳಿಸಿದ್ದಾರೆ.



ಸುದ್ದಿಗಾರರೊಂದಿ ಮಾತನಾಡಿದ ಅವರು, ಶಿವಾನಿ ಸ್ವಾಮಿ ಬಹಳ ಕಷ್ಟದ ಮಧ್ಯೆಯೂ ಕಠಿಣ ಪರಿಶ್ರಮದೊಂದಿಗೆ ಉನ್ನತ ಸ್ಥಾನಕ್ಕೆ ಬಂದವರು. ಅವರ ಪ್ರತಿಭೆಯನ್ನು ಗುರುತಿಸಿ ಜೀ ಕನ್ನಡ ಸರಿಗಮಪ ಸಿಂಗಿಂಗ್ ಶೋಗೆ ಅವಕಾಶ ನೀಡಿತು.

ಶಿವಾನಿ ಅವರು ಸಿಕ್ಕ ಅವಕಾಶದ ಸದುಪಯೋಗ ಮಾಡಿಕೊಂಡು ಸಿಂಗಿಂಗ್ ಶೋನ ವಿನ್ನರ್ ಪಟ್ಟ ಅಲಂಕಾರ ಮಾಡುವ ಮೂಲಕ ಬೀದರ್ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಶಿವಾನಿ ಅವರಿಗೆ ಮುಂದಿನ ದಿನಗಳಲ್ಲಿ ಹೆಚ್ಚಿನ ಅವಕಾಶಗಳು ದೊರಕಲಿ, ಇನ್ನೂ ಹೆಚ್ಚಿನ ಸಾಧನೆ ಮಾಡುವ ಮೂಲಕ ಗಡಿ ನಾಡಿಗೆ ಉತ್ತಮ ಸೇವೆ ನೀಡುವಂತೆ ಭಗವಂತ ಶಕ್ತಿ ನೀಡಲಿ. ಶಿವಾನಿ ಭವಿಷ್ಯ ಅವರ ಸುಮಧುರ ಕಂಠದಂತೆ ಮಧುರವಾಗಿರಲಿ ಎಂದು ಹಾರೈಸಿದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 6– ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧೀನದಲ್ಲಿರುವ ಜಿಲ್ಲಾ ಕುಷ್ಠರೋಗ ನಿವಾರಣಾ ಅಧಿಕಾರಿಗಳ ಕಾರ್ಯಲಯ ವಿಭಾಗಕ್ಕೆ 2025–26ನೇ ಸಾಲಿಗಾಗಿ 4 ಚಕ್ರದ 1 ಬಾಡಿಗೆ ವಾಹನ ಒದಗಿಸಲು ಮತ್ತು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳ ವಿಭಾಗಕ್ಕೆ 2025–26ನೇ ಸಾಲಿಗಾಗಿ 4 ಚಕ್ರದ 1 ಬಾಡಿಗೆ ವಾಹನವನ್ನು ಒದಗಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಜೂನ್–17ರ ಸಂಜೆ 5ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

# ಡಾ, ಶರಣಪ್ರಕಾಶ ಪಾಟೀಲ ಅವರಿಂದ ವಿಶೇಷಚೇತನರಿಗೆ ತ್ರಿಚಕ್ರ ವಾಹನ ವಿತರಣೆ.



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು.06. ಪಟ್ಟಣದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ 27 ಮಂದಿ ವಿಕಲಚೇತನರಿಗೆ ತ್ರಿಚಕ್ರ ವಾಹನಗಳನ್ನು ಡಾ. ಶರಣಪ್ರಕಾಶ ಪಾಟೀಲ ವೈದ್ಯಕೀಯ ಶಿಕ್ಷಣ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ವಿತರಿಸಿ ಮಾತನಾಡಿ, 2022–23ನೇ ಸಾಲಿನ ರಾಜ್ಯ ಹಣಕಾಸು ಆಯೋಗ ಅಭಿವೃದ್ಧಿ ಯೋಜನೆಯಡಿ ವಿಕಲಚೇತನರಿಗೆ ಕಾಯ್ದಿರಿಸಿದ ಒಟ್ಟು 13 ಲಕ್ಷ ರೂಪಾಯಿ ಅನುದಾನದಲ್ಲಿ 13 ವಾಹನಗಳು, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ವತಿಯಿಂದ 14 ತ್ರಿಚಕ್ರ ವಾಹನಗಳನ್ನು ಖರೀದಿಸಲಾಗಿದ್ದು, 27 ಮಂದಿ ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಲಾಯಿತು.

ಸುಸ್ಥಿರ ಸಮಾಜ ನಿರ್ಮಾಣಕ್ಕೆ ಎಲ್ಲಾ ಸ್ಥರಗಳ ಜನರ ಅಭಿವೃದ್ಧಿ ಮುಖ್ಯ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರವು ಬಡವರ, ಹಿಂದುಳಿದವರ ಪರವಾಗಿ ಯೋಜನೆಗಳನ್ನು ರೂಪಿಸುತ್ತಾ ಬಂದಿದೆ. ಇದೇ ರೀತಿ ನನ್ನ ವಿಧಾನಸಭಾ ಕ್ಷೇತ್ರದಲ್ಲಿರುವ ವಿಕಲಚೇತನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಫಲಾನುಭವಿಗಳಿಗೆ ತ್ರಿಚಕ್ರ ವಾಹನ ವಿತರಿಸಲಾಗಿದೆ ಎಂದರು

ಈ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ತಾಲೂಕು ಪಂಚಾಯತ್ ಅಧಿಕಾರಿಗಳು, ಪಕ್ಷದ ಹಿರಿಯ ಮುಖಂಡರು ಯುವ ಕಾರ್ಯಕರ್ತರು ಹಾಗೂ ಫಲಾನುಭವಿಗಳು ಇನ್ನಿತರರು ಉಪಸ್ಥಿತರಿದ್ದರು.

# ತ್ಯಾಗ ಬಲಿದಾನ ಪರಸ್ಪರ ಪ್ರೀತಿಯ ಸಮ್ಮಿಲನವೇ ಬಕ್ರೀದ್ ಹಬ್ಬ

ಜಗತ್ತಿನಾದ್ಯಂತ ಮುಸ್ಲಿಂ ಆಚರಿಸುವ ಅತಿ ಬಹುಮುಖ್ಯ ಎರಡು ಹಬ್ಬಗಳೆಂದರೆ ಬಕ್ರೀದ್ ಮತ್ತು ರಂಜಾನ್ ಅತ್ಯಂತ ಪವಿತ್ರ ಹಬ್ಬ ಎಂದು ಪರಿಗಣಿಸುವ ಮುಸ್ಲಿಂರು ಒಂದು ತಿಂಗಳ ಕಾಲ ಉಪವಾಸ ವೃತ ಮಾಡುತ್ತಾ ರಂಜಾನ್ ಹಬ್ಬವನ್ನು ಆಚರಿಸಿ ಅಲ್ಲಾನಿಗೆ ತಮ್ಮ ಭಕ್ತಿಯ ಪರಾಕಾಷ್ಠೆ ಮೆರೆಯುತ್ತಾರೆ.

ರಂಜಾನ್ ಹಬ್ಬಕ್ಕೂ ಮತ್ತು ಬಕ್ರೀದ್ ಹಬ್ಬಕೂ ಒಂದಕ್ಕೊಂದು ತಾಳೆಗಳಿವೆ, ರಂಜಾನ್ ಹಬ್ಬದ ಮುಸ್ಲಿಮರ ಅತ್ಯಂತ ಪವಿತ್ರ ಹಬ್ಬವಾಗಿದ್ದು ಒಂದು ತಿಂಗಳವರೆಗೆ ಉಪವಾಸದ ಪ್ರತೀಕವಾಗಿ ನಡೆಯುತ್ತದೆ.ಬಕ್ರೀದ್ ಹಬ್ಬಕ್ಕೆ ಸುಮಾರು 5000 ವರ್ಷಗಳ ಇತಿಹಾಸವಿದ್ದು ಜಗತ್ತಿನಾದ್ಯಂತ ಮುಸ್ಲಿಂರ ಪವಿತ್ರ ಹಬ್ಬ ಎಂದು ನಂಬಿದ್ದಾರೆ. ಬಕ್ರೀದ್ ಹಬ್ಬದ ವಿಶೇಷವೆಂದರೆ ತ್ಯಾಗ ಬಲಿದಾನ ಆಹಾರ ದಾನದ ಸಮ್ಮಿಲನವೇ ಮತ್ತು ತ್ಯಾಗ ಬಲಿದಾನದ ಅಸ್ಮರಣೀಯ ಅತ್ಯಂತ ರೋಮಾಂಚನಕಾರಿಯಾದ ಘಟನೆ ನೆನಪಿಸುವಂತಹ ಹಬ್ಬವೇ ಬಕ್ರೀದ್ ಎಂಬ ನಂಬಿಕೆ ಮುಸ್ಲಿಂರಲ್ಲಿ ಬೇರೂರಿದೆ.

ಜಾಗತಿಕ ಮಟ್ಟದಲ್ಲಿ ಮುಸ್ಲಿಂರು ಈ ಹಬ್ಬವನ್ನು ಆಚರಣೆ ಮಾಡುತ್ತಾರೆ 5000 ವರ್ಷಗಳ ಹಿಂದೆ ಪ್ರವಾದಿ ಮಮ್ಮದರಲ್ಲಿ ಓರ್ವರಾದ ಪ್ರವಾದಿ ಇಬ್ರಾಹಿಂ ರವರ ತ್ಯಾಗ ಮತ್ತು ಬಲಿದಾನ ನೆನಪಿಸುವಂತಹ ಒಂದು ಪವಿತ್ರವಾದ ಸಾಕ್ಷಿಯೇ ಬಕ್ರೀದ್ ಇಸ್ಲಾಮಿನ ಪ್ರಕಾರ ಏಕದೇವೋಭವ ವೃತವನ್ನು ಕಡ್ಡಾಯವಾಗಿ ಆಚರಣೆ ಮಾಡಿ ಪ್ರವಾದಿ ಇಬ್ರಾಹಿಂ ರವರು ತಮ್ಮ ಶತ್ರುವಿನ ಅಗ್ನಿಕುಂಡದಲ್ಲಿ ಏಳು ದಿನಗಳ ಕಳೆದರೂ. ಇಬ್ರಾಹಿಂ ರವರು ಮಕ್ಕಳಿಲ್ಲದ ಕೊರಗನ್ನು ಅನುಭವಿಸುತ್ತಾ ಸಾಕಷ್ಟು ನೋವು ನಲಿವುಗಳು ಬಂದವು ಅವೆಲ್ಲವುಗಳನ್ನು ಮೆಟ್ಟಿನಿಲ್ಲತ್ತಾನೆ. ಸುಮಾರು ನೂರು ವರ್ಷದ ಆಸು ಪಾಸಿನಲ್ಲಿ ಇರುವಾಗ ಅಲ್ಲಾನು ಪ್ರತ್ಯಕ್ಷನಾಗಿ ಒಂದು ಗಂಡು ಮಗುವನ್ನು ಕರುಣಿಸುತ್ತಾನೆ ಆ ಮಗನಿಗೆ ಇಸ್ಮಾಯಿಲ್ ಎಂದು ನಾಮಕರಣ ಮಾಡಿದರು.ಮುಸ್ಲಿಮರ ಪವಿತ್ರ ಧಾರ್ಮಿಕ ಕ್ಷೇತ್ರ ಹಜ್ ಗೆ ಹೋದಾಗ ಧಾರ್ಮಿಕ ಕ್ಷೇತ್ರದಲ್ಲಿ ಅಲ್ಲಾನು ನಿನ್ನ ಮಗುವನ್ನು ಇಲ್ಲಿಯೇ ಬಿಡಬೇಕೆಂದು ಆಜ್ಞೆ ಮಾಡಿದಾಗ ಪ್ರವಾದಿ ಇಬ್ರಾಹಿಂ ಅಲ್ಲಾನು ಕರುಣಿಸಿದ ಮಗು ನಿನಗೆ ಇರಲಿ ಎಂದು ಒಪ್ಪಿಕೊಳ್ಳುತ್ತಾನೆ.

ಇಷ್ಟಾಗಿಯೂ ಅಲ್ಲಾನು ಇಬ್ರಾಹಿಂ ಮೇಲೆ ಭಕ್ತಿಯನ್ನು ಪರೀಕ್ಷಿಸುವುದಕ್ಕಾಗಿ ಮತ್ತೊಂದು ಆಜ್ಞೆ ಮಾಡುತ್ತಾನೆ ಏನೆಂದರೆ ನಿನ್ನ ಮಗ ಇಸ್ಮಾಯಿಲ್ಲನನ್ನು ಬಲಿ ಕೊಡಬೇಕು ಎಂದು ಅಲ್ಲಾನು ಇಬ್ರಾಹಿಂಗೆ ಹೇಳಿದಾಗ ಇಬ್ರಾಹಿಂನು ಆಯಿತು ಎಂದು ಒಪ್ಪಿಕೊಳ್ಳುತ್ತಾನೆ. ನಂತರ ತಂದೆಯಿಂದಲೇ ಮಗನ ಶಿರಶ್ಚೇಧ ಆಗಬೇಕು ಎಂದು ಅಲ್ಲಾನು ಆಜ್ಞೆ ಮಾಡುತ್ತಾನೆ ಆಗ ಪ್ರವಾದಿ ಇಬ್ರಾಹಿಂ ಕತ್ತಿ ತೆಗೆದುಕೊಂಡು ಬಂದು ಇಸ್ಮಾಯಿಲ್ಲನ ಕುತ್ತಿಗೆ ಕೊಯ್ಯಲು ಹೋದಾಗ ಆತನು ಹಿಡಿದ ಕತ್ತಿಗೆ ಇಸ್ಮಾಯಿಲ್ಲನ ಕುತ್ತಿಗೆ ಕೊಯ್ಯುವುದಿಲ್ಲ ಆಗ ಇಸ್ಮಾಯಿಲ್ಲನು ತಂದೆಗೆ ಹೇಳುತ್ತಾನೆ ನಿನಗೆ ಪುತ್ರ ವಾತ್ಸಲ್ಯಕ್ಕಾಗಿ ನನ್ನ ಕುತ್ತಿಗೆ ಕಡೆಯಲಿಕ್ಕೆ ಆಗುತ್ತಿಲ್ಲ ಹಾಗಾಗಿ ಕಣ್ಣಿಗೆ ಬಟ್ಟೆ ಕಟ್ಟಿಕೊಂಡು ನನ್ನ ಕುತ್ತಿಗೆ ಕೊಯ್ಯಿ ಎಂದು ಹೇಳಿದನು. ಮಗನ ಆಜ್ಞೆ ಪಾಲಿಸಲು ತಂದೆ ಮುಂದಾದಾನು ಅವಾಗಲೂ ಮಗನ ಕುತ್ತಿಗೆ ಕೊಯ್ಯುವುದಿಲ್ಲವೋ ಅವಾಗ ಅಲ್ಲಾನು ಪ್ರತ್ಯಕ್ಷನಾಗಿ ನಿನ್ನ ಮಗನನ್ನು ನೀನು ಎಷ್ಟೇ ಕಡದರೂ ಆತನ ಕುತ್ತಿಗೆ ಕೊಯ್ಯುವುದಿಲ್ಲ ಎಂದು ಆಶೀರ್ವದಿಸಿದನು.



ಅಲ್ಲಾನು ನಿನ್ನ ಭಕ್ತಿಯ ಪರೀಕ್ಷೆಗಾಗಿ ನಾನು ಈ ಈ ಪರೀಕ್ಷೆ ಮಾಡಿದೆ ಈಗ ಈ ಆಜ್ಞೆ ಹಿಂದೆ ತೆಗೆದುಕೊಳ್ಳುತ್ತೇನೆ ಇದಕ್ಕೆ ಪರ್ಯಾಯವಾಗಿ ನೀನು ಒಂದು ಕುರಿಮರಿಯನ್ನು ಬಲಿ ಕೊಡಬೇಕು ಎಂದು ಆದೇಶಿಸುತ್ತಾನೆ. ಹಾಗೆ ಕುರಿಮರಿ ಬಲಿ ಕೊಟ್ಟಿದ್ದಕ್ಕಾಗಿ ಬಕ್ರೀದ್ ಹಬ್ಬ ಪ್ರಾರಂಭ ಆಹಿತು ಬಕ್ರೀದ್ ಹಬ್ಬ ತ್ಯಾಗ ಬಲಿದಾನದ ಸಂಕೇತ ಎಂದು ಸೂಚಿಸಲಾಗುತ್ತಿದೆ.

ಬಕ್ಕರ್ ಎಂದರೆ ಆಡು ಈದ ಎಂದರೆ ಹಬ್ಬ ಹೀಗಾಗಿ ಆಡನ್ನು ಬಲಿಕೊಡುವದೇ ಬಕ್ರೀದ್ ಹಬ್ಬ ಎಂದು ಕರೆಯಲಾಗುವುದು.

5,000 ವರ್ಷಗಳ ಹಿಂದೆ ಮಕ್ಕಾದಲ್ಲಿ ನಡೆದ ಈ ಒಂದು ಘಟನೆಗೆ ಸಾಕ್ಷಿ ಎಂಬಂತೆ ಪವಿತ್ರ ಬಕ್ರೀದ್ ಹಬ್ಬ ಆಚರಿಸಲು ಮುಸ್ಲಿಂರು ಮೇಕ್ಕಾ ತೆರಳಲು ಅತ್ಯಂತ ಉತ್ಸುಕರಾಗಿರುತ್ತಾರೆ. ಮೇಕ್ಕಾದಲ್ಲಿ ಬಕ್ರೀದ್ ಹಬ್ಬವನ್ನು ವಿಶಿಷ್ಟ ವಿಶೇಷ ಮತ್ತು ವಿಭಿನ್ನವಾಗಿ ಆಚರಣೆ ಮಾಡುವುದರಿಂದ ಮುಸ್ಲಿಂ ಆಗಿ ಹುಟ್ಟಿದ ಪ್ರತಿಯೊಬ್ಬನೂ ಪವಿತ್ರ ಹಜ್ ಯಾತ್ರೆ ಮೂಲಕ ಮೇಕ್ಕಾಕ್ಕೆ ಜೀವನದಲ್ಲಿ ಒಮ್ಮೆಯಾದರೂ ತೆರಳಬೇಕು ಎನ್ನುವ ಸಂಕಲ್ಪ ಮಾಡಿರುತ್ತಾರೆ. ಇನ್ನೊಂದು ಮುಖ್ಯ ವಿಶೇಷ ಎಂದರೆ ಪ್ರತಿಯೊಬ್ಬರೂ ಒಂದೇ ಮಾದರಿಯ ಬಟ್ಟೆಯನ್ನು ಧರಿಸಿ ನಮಾಜಗೆ ಹೋಗುವುದು ಕಡ್ಡಾಯವಾಗಿದೆ ಅಲ್ಲಾನ ದೃಷ್ಟಿಯಲ್ಲಿ ಶ್ರೀಮಂತರು ಬಡುವರು ಬಿಳಿ ಕರಿಯ ಎನ್ನುವ ಭೇದಭಾವ ಇಲ್ಲದೆ ಎಲ್ಲರೂ ಸಮಾನರು ಎನ್ನುವ ಸಂದೇಶ ಸಾರುವ ಸಲುವಾಗಿ ಅಲ್ಲಾನ ಆಜ್ಞೆಯಂತೆ ಮೇಕ್ಕಾ ಬರುವ ಪ್ರತಿಯೊಬ್ಬರು ಒಂದೇ ತರದ ಬಟ್ಟೆಯನ್ನು ಧರಿಸಬೇಕು ಮತ್ತು ನಮಾಜಿನಲ್ಲಿ ಭಾಗಿಯಾಗುವಾಗ ಎಲ್ಲರ ಧಾರ್ಮಿಕ ಭಾವನೆಗಳು ಒಂದೇ ಒಂದು ತರದ ಬಟ್ಟೆ ಕಡ್ಡಾಯವಾಗಿ ಧರಿಸಬೇಕು ಎಂಬ ನಿಯಮವಿದೆ. ಮೆಕ್ಕಾದ ಹಜ್ ನಿಯಮಕ್ಕೆಯಾರು ಭಂಗ ಬರದಂತೆ ಮುಸ್ಲಿಂರ ನಡೆದುಕೊಳ್ಳುತ್ತಿದ್ದು ಅಲ್ಲಾನ ವಿಷಯ ಬಂದಾಗ ಎಲ್ಲ ಮುಸ್ಲಿಮರು ಸಮಾನತೆ ಏಕತೆ ಕಂಡು ಅಲ್ಲಾನ ಕೃಪೆಗೆ ಪಾತ್ರರಾಗುತ್ತಾರೆ.

ಭಾರತೀಯ ಮುಸ್ಲಿಂರು ಬಕ್ರೀದ್ ಹಬ್ಬವನ್ನು ಅದ್ದೂರಿಯಾಗಿ ಆಚರಣೆ ಮಾಡುತ್ತಾ ಬಂದಿದ್ದು ಪ್ರತಿಯೊಬ್ಬ ಮುಸ್ಲಿಂರು ಹೊಸ ಬಟ್ಟೆ ಧರಿಸಿ ಸೂರ್ಯೋದಯ ಆದ ಕೆಲವು ಹೊತ್ತಿನ ನಂತರ ಎಲ್ಲರೂ ತಮ್ಮ ತಮ್ಮ ಮಸೀದಿಗೆ ಧಾರ್ಮಿಕ ಸ್ಥಳಗಳಿಗೆ ತೆರಳಿ ಅಲ್ಲಾನ ನಮಾಜ್ ಮಾಡಿ ಅಲ್ಲಲ್ಲಿ ಹಮ್ಮಿಕೊಂಡಿರುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಎಲ್ಲಾ ಪುರುಷ ಮುಸ್ಲಿಂರು ಒಂದೆಡೆ ಸೇರಿ ಅಲ್ಲಾನ ಜ್ಞಾನದಲ್ಲಿ ಮಗ್ನರಾದರೆ.

ಇತ್ತ ಮಹಿಳೆಯರು ಮನೆಯಲ್ಲಿರುವ ಪುರುಷರು ನಮಾಜಿಗೆ ಹೋಗಿ ಬರುವಷ್ಟರಲ್ಲಿ ವಿಶೇಷ ಮತ್ತು ಕುರಿಮರಿಯ ಮಟನ್ ಮತ್ತು ಸುರಕುರ್ಮವನ್ನು ತಯಾರು ಮಾಡುವುದರಲ್ಲಿ ಬಿಜಿಯಾಗಿರುತ್ತಾರೆ, ನಮಾಜ್ ಮುಗಿಸಿ ನಂತರ ಮನೆಗೆ ಬಂದ ನಂತರ ಒಬ್ಬರಿಗೊಬ್ಬರು ಕೈ ಕುಲುಕಿ ಹಬ್ಬದ ಶುಭಾಶಯಗಳು ವಿನಿಮಯ ಮಾಡಿಕೊಳ್ಳುತ್ತಾರೆ

ನಮಾಜ್ ಮತ್ತು ಧಾರ್ಮಿಕ ಕಾರ್ಯ ಮುಗಿದ ತಕ್ಷಣ ಎಲ್ಲರೂ ತಮ್ಮ ತಮ್ಮ ಆತ್ಮೀಯರ ಮನೆಗೆ ಆಗಮಿಸಿ ಬಕ್ರೀದ್ ಹಬ್ಬದ ದಿವಸ ನಾವಷ್ಟೇ ಖುಷಿಯಿಂದ ಇರುವುದಲ್ಲ ಎಲ್ಲರನ್ನೂ ಖುಷಿಯಿಂದ ಇರುವಂತೆ ನೋಡಿಕೊಳ್ಳಬೇಕು ಎನ್ನುವ ಮಮ್ಮದ್ ಪೈಗಂಬರ ಪತ್ನಿ ಆಯುಷ್ ನ ಇಚ್ಛೆಯಂತೆ ನಮ್ಮ ಮನೆಯ ಅಕ್ಕ ಪಕ್ಕ ಇರುವ ಯಾವುದೇ ಧರ್ಮೀಯರಾಗಿದ್ದರು ಅವರಿಗೆ ಮುಸ್ಲಿಂರು ತಮ್ಮ ಮನೆಯಲ್ಲಿ ಮಾಡಿರುವ ವಿಶೇಷ ಆಹಾರ ಪದಾರ್ಥಗಳನ್ನು ನೆರೆಯವರ ಜೊತೆ ಹಂಚಿಕೊಂಡು ತಿನ್ನುವ ಹಾಗೂ ತಮ್ಮ ತಮ್ಮ ಸಂಬಂಧಿಕರಗಳ ಮನೆಗೆ ಹೋಗಿ ತಮ್ಮ ತಮ್ಮ ಮನೆಯಲ್ಲಿ ಮಾಡಿರುವ ವಿಶೇಷ ಅಡುಗೆ ಪದಾರ್ಥಗಳನ್ನು ವಿನಿಮಯ ಮಾಡಿಕೊಳ್ಳುವ ರೂಡಿ ಮತ್ತು ಪದ್ಧತಿಯನ್ನು ಬಕ್ರೀದ್ ಹಬ್ಬ ಕಲಿಸುತ್ತದೆ ಎಂದು ಅನುಭವಿ ಮುಸ್ಲಿಂರು ಹೇಳುತ್ತಾರೆ ಬಕ್ರೀದ್ ಹಬ್ಬದ ದಿವಸ ನಾವು ಸಂತೋಷದಿಂದಿದ್ದು ನಮ್ಮ ಸುತ್ತ ಮುತ್ತ ಇರುವ ಎಲ್ಲರನ್ನೂ ಸಂತೋಷ ಆನಂದದಿಂದ ನೋಡಿಕೊಳ್ಳುವ ಪದ್ಧತಿಯನ್ನು ನಮಗೆ ಬಕ್ರೀದ್ ಹಬ್ಬ ಕಲಿಸುತ್ತದೆ ಎಂದು ಮುಸ್ಲಿಂ ಅನುಭಾವ ವ್ಯಕ್ತಪಡಿಸುತ್ತಾರೆ.

ಐತಿಹಾಸಿಕ ಇತಿಹಾಸ ಹಿನ್ನೆಲೆ ಇರುವ ಬಕ್ರೀದ್ ಹಬ್ಬಕ್ಕೆ ಪ್ರತಿಯೊಬ್ಬ ಮುಸ್ಲಿಂ ಗೌರವ ಸೂಚಿಸುವುದರ ಮೂಲಕ ಅನ್ಯ ಧರ್ಮೀಯರಿಗೆ ತ್ಯಾಗದ ಬಲಿದಾನದ ಸಂಕೇತದ ಸೂಚಕವಾಗಿ ಬಕ್ರೀದ್ ಹಬ್ಬದ ಸಂಭ್ರಮಾಚರಣೆಗೆ ತಯಾರಿಸಿದ ಎಲ್ಲಾ ತರಹದ ವಿಶೇಷ ಆಹಾರಗಳನ್ನು ಹಂಚಿ ತಿನ್ನುವುದನ್ನು ಬಕ್ರೀದ್ ಹಬ್ಬ ಕಲಿಸುತ್ತದೆ.

ಮಹಮ್ಮದ್ ಪೈಗಂಬರ ಮತ್ತು ಕುರಾನದ ಪ್ರಕಾರ ಮುಸ್ಲಿಮರು ದುಡಿದ ಸ್ವಲ್ಪ ಆದಾಯದಲ್ಲಿ ದಾನ ಮಾಡಬೇಕು ಎನ್ನುವ ನಿಟ್ಟಿನಲ್ಲಿ ಬಕ್ರೀದ್ ಹಬ್ಬದ ಸಂಭ್ರಮದಲ್ಲಿ ಭಾಗಿಯಾಗುವ ಮುಸ್ಲಿಂರು ತಮ್ಮ ಪಕ್ಕದಲ್ಲಿರುವ ಅನ್ಯ ಧರ್ಮೀಯರಿಗೂ ತಾವು ತಯಾರಿಸಿದ ವಿಶೇಷ ಆಹಾರ ಎಲ್ಲರಿಗೆ ಹಂಚಿ ನಾವೆಲ್ಲರೂ ಒಂದು ಎನ್ನುವ ಭಾವನೆಯ ಸಂದೇಶ ಸಾರುತ್ತಿದ್ದರು.

ಪ್ರಾಚೀನ ಕಾಲದಲ್ಲಿ ಹಿಂದೂ ಮುಸ್ಲಿಮರು ಯಾವುದೇ ಭೇದ ಭಾವವನ್ನು ಮಾಡದೆ ನಾವೆಲ್ಲರೂ ಒಂದೇ ಎನ್ನುವ ಭಾವನೆಯೊಂದಿಗೆ ಈ ಹಬ್ಬ ಅತಿ ಸಂತೋಷದಿಂದ ಆಚರಿಸುತ್ತಿದ್ದರೂ ಎಂದು ಕೆಲವು ಅನುಭವಸ್ಥರು ಹೇಳುತ್ತಾರೆ ಪ್ರಾಚೀನ ಕಾಲದಂತೆ ಇವಾಗಲು ಹಿಂದೂ ಮುಸ್ಲಿಂ ನಾವೆಲ್ಲರೂ ಅಣ್ಣ-ತಮ್ಮಂದಿರಂತೆ ಬಾಳಿ ಬದುಕಬಹುದು ಎನ್ನುವ ಸಾರಾಂಶವನ್ನು ಸುಮಾರು 5000 ವರ್ಷಗಳ ಹಿಂದಿನ ಬಕ್ರೀದ್ ಹಬ್ಬದ ಇತಿಹಾಸ ತಿಳಿಸುತ್ತದೆ. ಬಕ್ರೀದ್ ಎಂದರೆ ಕುರಾನ್ ಅನ್ನು ಪರಿಪಾಲಿಸುವ ಪ್ರತಿಯೊಬ್ಬನೂ ತನ್ನ ಅಲ್ಲಾನಿಗಾಗಿ ಏನು ಬೇಕಾದರೂ ತ್ಯಾಗ ಮತ್ತು ಬಲಿದಾನ ಮಾಡಲು ಸಿದ್ಧವಿದ್ದೇವೆ ಎನ್ನುವುದನ್ನು ಪ್ರವಾದಿ ಇಬ್ರಾಹಿಂ ಅವರು ಸಾವಿರಾರು ವರ್ಷಗಳ ಹಿಂದೆಯೇ ತೋರಿಸಿಕೊಟ್ಟಿರುತ್ತಾರೆ ಅವರ ಮಾರ್ಗದರ್ಶನ ಹಾಕಿಕೊಟ್ಟ ದಾರಿಯಲ್ಲಿ ಮುಸ್ಲಿಂ ಧರ್ಮ ಪರಿಪಾಲಿಸುತ್ತಾ ಬಂದಿದ್ದೇವೆ ಎನ್ನುವುದು ಅಷ್ಟೇ ಸತ್ಯವಾಗಿದೆ ಹಾಗಾಗಿ ನಾವೆಲ್ಲರೂ ಅಣ್ಣ-ತಮ್ಮಂದಿರಂತೆ ಬದುಕಬೇಕು ಎನ್ನುವ ಭಾವನೆ ಬೇರೂರಿಸಿಕೊಂಡು ಬಕ್ರೀದ್ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸುವ ಶಕ್ತಿಯನ್ನು ಅಲ್ಲಾ ದೇವರು ನಮಗೆ ನೀಡಿದ್ದಾನೆ ಎನ್ನುವ ನಂಬಿಕೆ ಮುಸ್ಲಿಮಂನ ಸಮಸ್ತ ನಾಗರಿಕರಲ್ಲಿ ಇದೆ ಎಂದು ಸಾಬೀತು ಮಾಡಿ ತೋರಿಸುತ್ತಿದೆ.....

ಇಬ್ರಾಹಿಂ ಅಲ್ಲಾನ ಭಕ್ತಿ ಗಾಗಿ ತನ್ನ ಮಗನನ್ನೇ ಬಲಿದಾನ ಮಾಡಲು ಮುಂದಾಗಿದ್ದನು ಆದರೆ ಅಲ್ಲಾನ ಉದ್ದೇಶ ಇಬ್ರಾಹಿಂ ನನ್ನು ಪರೀಕ್ಷಿಸುವುದು ಆಗಿರುವುದರಿಂದ ಮಗನ ಬದಲು ಆಡನ್ನು ಬಲಿಕೊಡು ಎಂದು ಆದೇಶಿಸಿದಾಗ ಇಬ್ರಾಹಿಂ ಎಲ್ಲಾ ಅಲ್ಲಾನ ಇಚ್ಛೆಯಂತೆ ನಡೆ-ಯಲಿ ಎಂದು ಆಡನ್ನು ಬಲಿ ಕೊಟ್ಟಿದ್ದರ ಪ್ರತಿಕವೇ ನಾವೆಲ್ಲರೂ 5000 ವರ್ಷಗಳಿಂದ ತ್ಯಾಗ ಫಲಿತಾಂಶದ ಸೂಚಕವಾಗಿ ಬಕ್ರೀದ್ ಹಬ್ಬವನ್ನು ಆಚರಿಸುತ್ತಾ ಬಂದಿರುವುದು ಪ್ರತಿತಿಯಾಗಿದ್ದು ಅಲ್ಲಾನ ಆಜ್ಞೆಯಂತೆಯೇ ಇವತ್ತಿಗೂ ಎಲ್ಲ ಮಸೀದಿಗಳಲ್ಲಿ ನಮಾಜ್ ಕಾರ್ಯಕ್ರಮದ ನಂತರ ಬಲಿದಾನದ ತ್ಯಾಗದ ಪ್ರತಿರೂಪವಾಗಿ ಪ್ರಸಾದ ಊಟ ಮಾಡಿಕೊಂಡು ತಮ್ಮ ಪರಂಪರೆ ಮುಂದುವರೆಸಿಕೊಂಡು ಹೋಗುತ್ತಿರುವ ಮುಸ್ಲಿಂರು ಬಕ್ರೀದ್ ಹಬ್ಬವನ್ನು ಪ್ರಾಚೀನ ಕಾಲದಿಂದಲೂ ಕಾಯ ವಾಚ ಮನಸ್ಸಾ ಪರಿಶುದ್ಧವಾಗಿ ಆಚರಣೆ ಮಾಡಿಕೊಂಡು ಬಂದಿದ್ದಾರೆ...

ಇದಕ್ಕೆ ಸಾಕ್ಷಿ ಎಂಬಂತೆ ಇತ್ತೀಚೆಗೆ ಕರ್ನಾಟಕದಲ್ಲಿ ಹಲವಾರು ಸ್ವಾಮೀಜಿಗಳು ಬಕ್ರೀದ್ ಹಬ್ಬಕ್ಕೆ ಮುಸ್ಲಿಂರ ಕೆಲವು ಮಸೀದಿ ಮನೆಗೆ ಭೇಟಿ ನೀಡಿ ಮುಸ್ಲಿಂರೊಂದಿಗೆ ಪರಸ್ಪರ ವಿನಿಯೋಗ ಮಾಡಿಕೊಂಡು ಹಬ್ಬದ ಶುಭಾಶಯಗಳು ತಿಳಿಸಿ ಬರುತ್ತಿದ್ದಾರೆ ಇದರಿಂದಾಗಿ ಹಲವಾರು ಮಠಾಧೀಶರು ಧರ್ಮ ಜಾತಿ ಯಾವುದನ್ನು ಬೇದ ಭಾವ ಮಾಡದೆ ನಾವೆಲ್ಲರೂ ಒಂದಾಗಿರೋಣ ಎನ್ನುವ ಸಂದೇಶವನ್ನು ಜನರಿಗೆ ಮುಟ್ಟಿಸುವ ಸಲುವಾಗಿ ಸ್ವಾಮೀಜಿಗಳು ಮುಸ್ಲಿಂರ ಪವಿತ್ರ ಹಬ್ಬಗಳ ಸಂದರ್ಭದಲ್ಲಿ ಅವರ ಮಸೀದಿ ಮನೆಗೆ ತೆರಳಿ ಪೂಜ್ಯರಿಗಾಗಿಯೇ ತಯಾರಿಸಿದ ವಿಶೇಷ ಪ್ರಸಾದ ಸ್ವೀಕರಿಸುತ್ತಾರೆ ಹಾಗೂ ಮುಸ್ಲಿಂ ಪ್ರಮುಖ ಹಬ್ಬವಾದ ಬಕ್ರೀದ್ ಹಬ್ಬ ತ್ಯಾಗ ಬಲಿದಾನದ ಸಂಕೇತವಾಗಿ ಆಚರಿಸಿ ಸಂಭ್ರಮ ಪಡಿಸುವ ಸಂದರ್ಭದಲ್ಲಿ ನಾವು ಅವರೊಂದಿಗೆ ಇರೋಣ ಎನ್ನುವ ಸಂದೇಶ ಸಾರುತ್ತ ಬಕ್ರೀದ್ ಹಬ್ಬ ಇನ್ನು ಹೆಚ್ಚೆತ್ತು ವಿಶೇಷವಾಗಿ ಆಚರಿಸುವಂತ ಶಕ್ತಿ ಮತ್ತು ಬಲವನ್ನು ತುಂಬುವ ಕೆಲಸ ನಮ್ಮೆಲ್ಲರಿಂದ ಆಗಬೇಕೆನ್ನುವ ಆಸೆ ವ್ಯಕ್ತಪಡಿಸುತ್ತಿದ್ದಾರೆ.. ಹೀಗಾಗಿ ಇತ್ತೀಚೆಗೆ ಕರ್ನಾಟಕದಲ್ಲಿ ಬಕ್ರೀದ್ ಹಬ್ಬವನ್ನು ಎಲ್ಲಾ ಮುಸಲ್ಮಾನ್ ಬಾಂಧವರು ತಮ್ಮ ನಮಾಜ್ ಮುಗಿದ ನಂತರ ಎಲ್ಲಾ ಧರ್ಮೀಯ ಜನಾಂಗದವರೊಂದಿಗೆ ಹಬ್ಬವನ್ನು ಆಚರಿಸಿ ಸಂಭ್ರಮ ಪಡುತ್ತಾರೆ......



ಜಗದೀಶ.ಎಸ್.ಗಿರಡ್ಡಿ
ಲೇಖಕರು. ಗೊರಬಾಳ
9902470856

## ಶಾಂತಿ ಯಿಂದ ಬಕ್ರೀದ್ ಹಬ್ಬ ಆಚರಿಸಿ : ಡಿ.ಸಿ ಸುಶೀಲಾ.ಬಿ

## ಹಿಂದೂ-ಮುಸ್ಲಿಂ ಸಮುದಾಯಗಳ ಮುಖಂಡರ ಸೌಹಾರ್ದ ಸಭೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂನ್ 6-ಯಾವುದೇ ಧರ್ಮದ ಹಬ್ಬವು ಸಮಾಜಕ್ಕೆ ಒಳ್ಳೆಯ ಸಂದೇಶ ಕೊಡಬೇಕು. ಈ ದಿಸೆಯಲ್ಲಿ ಮುಸ್ಲಿಂ ಹಾಗೂ ಹಿಂದು ಬಾಂಧವರು ಒಗ್ಗಟ್ಟಾಗಿ ಯಾವುದೇ ರೀತಿಯ ಅಹಿತಕರ ಘಟನೆ ಆಗದಂತೆ ಶಾಂತತೆ ಯಿಂದ ಬಕ್ರೀದ್ ಹಬ್ಬವನ್ನು ಆಚರಣೆ ಮಾಡಬೇಕೆಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೇಳಿದರು. ಯಾದಗಿರಿ ನಗರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಜೂ.6ರ ಶುಕ್ರವಾರ ರಂದು ಬಕ್ರೀದ್ ಹಬ್ಬದ ಪ್ರಯುಕ್ತ ಹಿಂದು ಹಾಗೂ ಮುಸ್ಲಿಂ ಸಮುದಾಯಗಳ ಮುಖಂಡರ ಸೌಹಾರ್ದ ಸಭೆ ನಡೆಸಿ ಅವರು ಮಾತನಾಡಿದರು. ಯಾದಗಿರಿಬ್ರಕೀದ್ ಹಬ್ಬದ ಅಂಗವಾಗಿ ಸೌಹಾರ್ದ ಸಭೆಯಲ್ಲಿ ತ್ಯಾಗ ಸೌಹಾರ್ದದ ಸಂಕೇತದ ಹಬ್ಬ ಬಕ್ರೀದ್ ಆಗಿದ್ದು, ಪ್ರೀತಿ ಸಹೋದರತ್ವ ಸಾರಲು ಈ ಹಬ್ಬ ಆಚರಿಸಲಾಗುತ್ತದೆ. ಈ ಸಮಯದಲ್ಲಿ ಗೋವುಗಳ ಅಕ್ರಮ ಸಾಗಾಟ ಕಂಡುಬಂದರೆ ಪೊಲೀಸ್ ಗಮನಕ್ಕೆ ತರಬೇಕು. ಗೋಹತ್ಯೆ ಕಾಯ್ದೆ ಉಲ್ಲಂಘನೆಮಾಡಿದರೆ ಅಂತವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಹಾಗೂ ಸಾಮಾಜಿಕ ಜಾಲತಾಣದ ಮೇಲೆ ನಿಗಾ ಇಡಲಾಗಿದ್ದು,ಪ್ರಚೋದನಕಾರಿ ಪೋಸ್ಟರ್‌ಗಳು, ದ್ವೇಷ ಭಾಷಣ ಮಾಡಿ ಸಮಾಜದ ಸ್ವಾಸ್ಥ ಹಾಳು ಮಾಡುವವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೊಳ, ಸಹಾಯಕ ಆಯುಕ್ತರು ಹಂಪಣ್ಣ ಸಜ್ಜನ್, ಯಾದಗಿರಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪ ನಿರ್ದೇಶಕರು ರಾಜುದೇಶಮುಖ, ಶಹಾಪೂರ ತಹಸೀಲ್ದಾರ ಉಮಾಕಾಂತ ಹಳ್ಳಿ, ವಡಗೇರಾ ತಹಸೀಲ್ದಾರ ಮಂಗಳಾ.ಎಮ್, ಜಿಲ್ಲಾ ಮಟ್ಟದ ಅಧಿಕಾರಿಗಳು, ಮುಖಂಡರುಗಳು ವಿಶ್ವನಾಥ ಸಿರವಾರ, ಶರಣಪ್ಪ ಗೊಳಗಿ, ಜಹಿರೇದ್ದಿನ ಸವೇರಾ, ಜಿವಾನಿಸಾಬ ಆಫಗಾನಿ, ಅಬ್ದುಲ ಕರೀಮ್, ಗೋಪಾಲ ಕೆಳಗೇರಿ, ಭೀಮಣ್ಣ ಹೊಸಮನಿ, ಇನ್ನಿತರರು ಉಪಸ್ಥಿತರಿದ್ದರು.

## ಜೂ.12 ರಂದು ಪಿಂಚಣಿ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 6 : ಯಾದಗಿರಿ ವಿಭಾಗ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ವಿಭಾಗ ಮಟ್ಟದ ಪಿಂಚಣಿ ಅದಾಲತ್ 2025ರ ಜೂನ್ 12 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಅಂಚೆ ಅಧೀಕ್ಷಕರು ಬಿ.ನಾರಾಯಣರಾವು ಅವರು ತಿಳಿಸಿದ್ದಾರೆ.

ಅದಾಲತ್‌ನಲ್ಲಿ ಕುಂದುಕೊರತೆಗಳನ್ನು ಸಾಮಾನ್ಯ ಅಂಚೆ, ನೋಂದಾಯಿತ ಪೋಸ್ಟ್, ಸ್ಪೀಡ್ ಪೋಸ್ಟ್ ಮೂಲಕ ಕಳಿಸಬಹುದು, ಅಂಚೆ ಲಕೋಟೆ ಮೇಲೆ, ಪಿಂಚಣಿ ಅದಾಲತ್ ಎಂದು ಬರೆದು 2025ರ ಜೂನ್ 10ರ ಒಳಗೆ ಸಲ್ಲಿಸಬೇಕು. ಅಂಚೆ ಸೇವೆಯಿಂದ ನಿವೃತ್ತರಾದ ನೌಕರರ ಪಿಂಚಣಿ ಸೌಲಭ್ಯಗಳ ಹಾಗೂ ಕುಟುಂಬ ಪಿಂಚಣಿ ಸೌಲಭ್ಯಗಳ ವಿಳಂಬ, ಇತ್ಯರ್ಥಕ್ಕೆ ಸಂಬಂಧಿಸಿದ ಕುಂದುಕೊರತೆಗಳು, ಗ್ರಾಮೀಣ ಅಂಚೆ ಸೇವಕರನ್ನು ಹೊರತು ಪಡಿಸಿ, ಅಂಚೆ ಇಲಾಖೆಯ ನಿವೃತ್ತ ನೌಕರರ ಪಿಂಚಣಿ ಸ್ವೀಕರಿಸು ಅಹವಾಲುಗಳನ್ನು ಇಲಾಖೆ ಆಲಿಸಲಿದೆ.

ಈಗಾಗಲೇ ವಿಭಾಗಗಳು ಕೈಗೆತ್ತಿಕೊಂಡಿರುವ ಪ್ರಕರಣಗಳು ಮತ್ತು ಪಿಂಚಣಿದಾರರು ವಿಭಾಗೀಯ ಮಟ್ಟದಿಂದ ಬಂದ ಪ್ರತಿಕ್ರಿಯೆಯಿಂದ ತೃಪ್ತರಾಗದ ಪ್ರಕರಣಗಳನ್ನು ಮಾತ್ರ ಪಿಂಚಣಿ ಅದಾಲತ್‌ಗೆ ತರಬಹುದು, ಪಿಂಚಣಿ ಅದಾಲತ್‌ಗೆ ನೇರವಾಗಿ ಕಳುಹಿಸಲಾಗದ ಹೊಸ ಪ್ರಕರಣಗಳನ್ನು ಅಹವಾಲಿಸಲು ಅವಕಾಶವಿರುವುದಿಲ್ಲ.

ಅಹವಾಲುಗಳು, ಕುಂದುಕೊರತೆಗಳನ್ನು ಅಂಚೆ ಅಧೀಕ್ಷಕರು, ಯಾದಗಿರಿ ವಿಭಾಗ, ಯಾದಗಿರಿ 585201 ಇಲ್ಲಿಗೆ ಸಲ್ಲಿಸಬೇಕು, ಪಿಂಚಣಿದಾರರು ತಮ್ಮ ಸ್ವಂತ ವೆಚ್ಚದೊಂದಿಗೆ 2025ರ ಜೂನ್ 12 ರಂದು ಬೆಳಿಗ್ಗೆ 11 ಗಂಟೆಗೆ ಅಂಬೇಡ್ಕರ್ ಚೌಕ್ ಹತ್ತಿರ, ಬಿ.ಎಸ್.ಎನ್.ಎಲ್ ಕಚೇರಿ ಹಿಂದುಗಡೆ, ಅಂಚೆ ಅಧೀಕ್ಷಕರ ಕಚೇರಿ, ಯಾದಗಿರಿ ವಿಭಾಗ, ಯಾದಗಿರಿ 585201ಗೆ ಪಿಂಚಣಿ ಅದಾಲತ್‌ಗೆ ಹಾಜರಾಗಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ತಂಬಾಕು ರಹಿತ ದಿನಾಚರಣೆ

### ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಬೇಕು




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 6 : ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿದು ತಮ್ಮ ಕಛೇರಿಯಲ್ಲಿ ಯಾರಾದರು ತಂಬಾಕು ಸೇವನೆ ಮಾಡುತ್ತಿದ್ದರೆ ಅವರ ಎನ್.ಆರ್.ಟಿ. ಚಿಕಿತ್ಸೆ ಮೂಲಕ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಬೇಕು ಎಂದು ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಧರಣೇಶ ಎಸ್.ಪಿ ಅವರು ಹೇಳಿದರು.

ಯಾದಗಿರಿ ನಗರದಲ್ಲಿ ಇತ್ತೀಚಿನ ನಡೆದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ ವಿಶ್ವ ತಂಬಾಕು ರಹಿತ ದಿನದ ಪ್ರಯುಕ್ತ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಆರೋಗ್ಯ ತಪಾಸಣೆ ಶಿಬಿರ, ತಂಬಾಕು ಕುರಿತು ಅರಿವು ಮೂಡಿಸು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು, ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿದು ತಮ್ಮ ಕಛೇರಿಯಲ್ಲಿ ಯಾರಾದರು ತಂಬಾಕು ಸೇವನೆ ಮಾಡುತ್ತಿದ್ದರೆ ಅವರ ಎನ್.ಆರ್.ಟಿ. ಚಿಕಿತ್ಸೆ ಮೂಲಕ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಲು ತಮ್ಮ ಕಛೇರಿಯನ್ನು ಮುಂದಿನ ದಿನಗಳಲ್ಲಿ ತಂಬಾಕು ಮುಕ್ತ ಕಛೇರಿಯೆಂದು ಘೋಷಿಸಲಾಗುವುದು ಎಂದು ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ಡಾ.ಸೌಮ್ಯ ಭಾವಿ ಅವರು ಮಾತನಾಡಿ, ತಂಬಾಕು ಸೇವನೆಯಿಂದ ಕ್ಯಾನ್ಸರ್, ಗ್ಯಾಂಗ್ರೀನ್, ಬಿಪಿ, ಸುಗರ್, ಟಿ.ಬಿ. ತಲೆ ಕೂದಲು ಉದುರುವಿಕೆ, ಅವಧಿ ಪೂರ್ವ ಮಗುವಿನ ಜನನ ಮುಂತಾದ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಹೇಳಿದರು. ಜಿಲ್ಲಾ ಸಲಹೆಗಾರರಾದ ಶ್ರೀಮತಿ ಮಹಾಲಕ್ಷ್ಮೀ ಸಜ್ಜನ್ ಅವರು ಮಾತನಾಡಿ, ಧ್ಯೇಯ ವಾಕ್ಯ ಆಕರ್ಷಕ ಉತ್ಪನ್ನಗಳು, ಕರಾಳ ಉದ್ದೇಶಗಳು, ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ಆಕರ್ಷಣೆಯನ್ನು ಬಹಿರಂಗ ಪಡಿಸುವುದರ ಕುರಿತು ತಿಳಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದಡಿಯಲ್ಲಿ ಇರುವ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಸಿಗುವ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಮತ್ತು ನಿಕೋಟಿನ್ ಮಾತ್ರೆಗಳನ್ನು ಉಚಿತವಾಗಿ ಸಿಗುವ ಕುರಿತು ಮಾಹಿತಿ ನೀಡಿದರು.


ಈ ಸಂದರ್ಭದಲ್ಲಿ ಮುಖ್ಯ ಸಂಪನ್ಮೂಲ ವ್ಯಕ್ತಿಗಳಾಗಿ ಡಿ.ಎಸ್.ಪಿ. ಭರತ ತಲ್ವಾರ್, ಡಾ.ಸೌಮ್ಯಭಾವಿ, ಡಾ.ನಾಗರಾಜ ಗೌಳಿ, ಡಾ.ನಿಕಿತ ಗೋವಿಂದ, ಯಾದಗಿರಿ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ, ಸಮಾಜ ಕಾರ್ಯಕರ್ತರಾದ ಶ್ರೀ ವಿಜಯ ಕುಮಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## 2025ರ ಪರಿಸರ ಸಂಭ್ರಮದ ಕಾರ್ಯಕ್ರಮದ ಆಚರಣೆ

ಮಲ್ಲಮ್ಮ ನುಡಿ ವಾರ್ತೆ


ಕೊಪ್ಪಳ : ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸಮುದಾಯ ಕುಕುನೂರ್ ಪರಿಸರ ಸಂಭ್ರಮ ಆಚರಿಸಲಾಯಿತು

ದಿನಾಂಕ್ 06.06.2025 ರಂದು ಸಮುದಾಯ ಆರೋಗ್ಯ ಕೇಂದ್ರ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿಯನ್ನು ನಡುವ ಮೂಲಕ 2025ರ ಪರಿಸರ ಸಂಭ್ರಮದ ಕಾರ್ಯಕ್ರಮ ಜರಗಿದ ಸಂದರ್ಭದಲ್ಲಿ *ಡಾ. ಮಂಜುನಾಥ್ ವಕ್ಕಳದ ಚಿಕ್ಕ ಮಕ್ಕಳ ತಜ್ಞರು* ಸಸಿ ನೆಡುವುದರ ಮೂಲಕ ಕಾರ್ಯಕ್ರಮದ ಉದ್ದೇಶ ಸಿಬ್ಬಂದಿ ವರ್ಗದವರಿಗೆ ಮತ್ತು ಸಾರ್ವಜನಿಕರ ಕುರಿತು ಪ್ರತಿಯೊಬ್ಬ ಸಿಬ್ಬಂದಿಗಳು ತಮ್ಮ ಮನೆಯ ಸುತ್ತಮುತ್ತಲಿನ ಸ್ಥಳಗಳಲ್ಲಿ ಸಸಿಗಳನ್ನು ನೆಟ್ಟು ಪರಿಸರ ನೈಸರ್ಗಿಕ ಬೆಳವಣಿಗೆಗೆ ಪಾತ್ರ ಬಹುಮುಖ್ಯವಾಗಿರುತ್ತದೆ ಎಂದು ಇವತ್ತಿನ ದಿನಮಾನಗಳಲ್ಲಿ ಹಲವಾರು ದುಷ್ಪರಿಣಾಮಗಳು ಚಟಗಳಿಗೆ ಮತ್ತು ಪರಿಣಾಮಗಳು ಮಾನವನ ಅನಾರೋಗ್ಯದ ದೃಷ್ಟಿಯಿಂದ ನಾವು ಕಾಣುತ್ತಿದ್ದು ನಾವು ನಮ್ಮ ಪರಿಸರವನ್ನು ಕಾಪಾಡಿಕೊಂಡರೆ ನಮಗೆ ನಮ್ಮ ಆರೋಗ್ಯವನ್ನು ಕಾಣಬಹುದು ಅಷ್ಟೇ ಅಲ್ಲದೇ ಪರಿಸರದಿಂದ ಆಮ್ಲಜನಕದ ಮೂಲಕ ದೊರೆಯುವಂತೆ ಮಾಡುತ್ತವೆ ಪ್ರತಿಯೊಂದು ತಮ್ಮ ಹೊಲದ ಮತ್ತು ತಮ್ಮ ಮನೆಯ ವಾತಾವರಣದಲ್ಲಿ ಸಸಿಗಳನ್ನು ನೆಟ್ಟು ಉತ್ತಮ ಪರಿಸರವನ್ನ ಕಾಪಾಡಿಕೊಳ್ಳಬೇಕೆಂದು ಈ ಮೂಲಕ ತಿಳಿಸಿದರು . ಸದರಿ ಕಾರ್ಯಕ್ರಮದ ಡಾ. ಸುಷ್ಮಾ ದಂತ ವೈದ್ಯಾಧಿಕಾರಿಗಳು ಮಾತನಾಡಿ ಸಸಿಗೆ ನೀರಿರೆಯುವ ಮೂಲಕ ಪರಿಸರದಿಂದ ಲಾಭದ ಮಾಹಿತಿಯನ್ನು ತಿಳಿಸುತಾ.



ಮಾನವನ ದುರಾಸೆಯಿಂದ ಪರಿಸರ ಹಾಳಾಗುತ್ತಿದ್ದು ಅದು ಮಾನವನಿಂದಲೇ ಸರಿಯಾಗಬೇಕಿದೆ ನಾವು ಬದುಕುವ ಪರಿಸರವನ್ನು ಕಾಪಾಡಿಕೊಳ್ಳಬೇಕು. ನಮ್ಮ ಸುತ್ತಮುತ್ತ ಸಸಿಗಳನ್ನು ಜವಾಬ್ದಾರಿಯಿಂದ ಗಿಡಮರಗಳನ್ನು ನೆಟ್ಟು ಪರಿಸರವನ್ನ ಪ್ರತಿಯೊಬ್ಬರ ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ತಿಳಿಸಿದರು. ಡಾ ಮಮತಾ ಆಯುಷ್ಯ ವೈದ್ಯಾದಿಕಾರಗಳು ಇವತ್ತಿನ ದಿನದಲ್ಲಿ ಪ್ಲಾಸ್ಟಿಕನ್ನು ಬಳಸುವುದರಿಂದ ಮಾಲಿನ್ಯವನ್ನು ಕೊನೆಗೊಳಿಸುವ ಹೇಗೆ ಎಂದು ಪರಿಸರದಿಂದ ವಿಶ್ವ ಪರಿಸರದ ದಿನದ ಘೋಷವಾಕ್ಯವಾಗಿದೆ ಪ್ಲಾಸ್ಟಿಕ್ ತ್ಯಾಜ್ಯದಿಂದ ಪರಿಸರ ಹಾಳಾಗುತ್ತದೆ ಮತ್ತು ಆರೋಗ್ಯದ ಮೇಲೆ ಹೆಚ್ಚು ದುಷ್ಪರಿಣಾಮಗಳು ಆಗುತ್ತಿರುವುದರಿಂದ ಹಲವಾರು ದೊಡ್ಡ ದೊಡ್ಡ ಕಾಯಿಲೆಗಳು ಮಾನವನಲ್ಲಿ ತಿಳಿದು ಬರುತಾಯಿದೆ ಪ್ಲಾಸ್ಟಿಕಗಳನ್ನು ಬಳಸುವುದರಿಂದ ಕ್ಯಾನ್ಸರ್ ಅಂತ ಕಾಯಿಲೆಗಳು ಹರಡುವುದು ತುಂಬಾ ಕಾಣುತ್ತಿದ್ದು ಇಂತಹ ಒಂದು ಪರಿಸರವನ್ನ ಕಾಪಾಡಿದರೆ ಮಾನವನ ಆರೋಗ್ಯ ಮನುಷ್ಯನ ಜೀವನದ ಅತ್ಯಮೂಲ್ಯವಾದ ನೈಸರ್ಗಿಕ ವಾತಾವರಣವನ್ನು ಸುತ್ತಮುತ್ತಲಿನ ಸುಂದರವಾಗಿ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಸಾರ್ವಜನಿಕರು ಮತ್ತು ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿಗಳಾದ ಕಾಳಪ್ಪ ಕುಂಬಾರ್, ಗೋವಿಂದ್ ರಾವ್ ಆರೋಗ್ಯ ಮಿತ್ರ, ಕಳಕಪ್ಪ ಬಂಡಿ, ಸಿದ್ದು, ಪ್ರವೀಣ್, ಮಾದೇವಪ್ಪ ಜ್ಯೋತಿ ಮತ್ತು ಪ್ರೀತಿ,ಮಂಜು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.



ಬಸವಕಲ್ಯಾಣ :- ನಗರದಲ್ಲಿ 2025ನೇ ಸಾಲಿನಲ್ಲಿ ಜರುಗಲಿರುವ ಶ್ರೀಮದ್ ರಂಭಾಪುರಿ ಜಗದ್ಗುರುಗಳ ಶರ ನವರಾತ್ರಿ ದಸರಾ ದರ್ಬಾರ ಕಾರ್ಯಕ್ರಮದ ಕಾರ್ಯಾಲಯವನ್ನು ಶುಕ್ರವಾರ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ದೀಪ ಬೆಳಗಿಸಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ತಿಪುರಾಂತಿನ ಪೂಜ್ಯಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಮಲ್ಲಯ್ಯ ಸ್ವಾಮಿ ಹಿರೇಮಠ, ಸೋಮಶೇಖರ ವಸ್ತ್ರದ, ಸುನೀಲ ಪಾಟೀಲ್, ಚಂದ್ರಶೇಖರ ಪಾಟೀಲ್, ವಿ. ಜಿ ಪಾಟೀಲ, ಎಂ. ಕೆ. ನಂದಿ, ವೀರಣ್ಣ ಶೀಲವಂತ, ಸೂರ್ಯಕಾಂತ ಶೀಲವಂತ, ಬಸವಂತಪ್ಪ ಲಾವರೆ, ದಯಾನಂದ ಶೀಲವಂತ, ಸೂರ್ಯಕಾಂತ ಮಠ, ಸಿದ್ರಾಮ ಕವಳೆ, ಗೋವಿಂದ ರೆಡ್ಡಿ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಜೂ.10 ತೋಟಗಾರಿಕೆ ವಿವಿಯ ಘಟಿಕೋತ್ಸವ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6-ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ14ನೇಘಟಿಕೋತ್ಸವ ಸಮಾರಂಭವನ್ನು ಜೂನ್ 10 ರಂದು ಹಮ್ಮಿಕೊಳ್ಳಲಾಗಿದೆ ಎಂದು ತೋಟಗಾರಿಕೆ ವಿಶ್ವವಿದ್ಯಾಲಯ ಕುಲಪತಿಡಾ.ವಿಷ್ಣುವರ್ಧನಹೇಳಿದರು. ತೋಟಗಾರಿಕೆ ವಿವಿಯ ವಿಸ್ತರಣಾ ನಿರ್ದೇಶನಾಲಯದಸಭಾಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತೆ-ೂಟಗಾರಿಕೆ ವಿವಿಯ ಉದ್ಯಾಗಿ-ರಿಯ ಸಭಾಂಗಣದಲ್ಲಿ ಜರುಗುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಹಿಸಲಿದ್ದು, ತೆ-ೂಟಗಾರಿಕೆ, ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಉಪಸ್ಥಿತರಿವರು. ಹೈದರಾಬಾದ್‌ನ ಅರೆ-ಶುಷ್ಕ ಉಷ್ಣವಲಯದ ಅಂತರರಾಷ್ಟ್ರೀಯ ಬೆಳೆಗಳ ಸಂಶೋಧನಾ ಸಂಸ್ಥೆಯ ಮಹಾನಿರ್ದೇಶಕ ಡಾ.ಹಿಮಾಂಶು ಪಾಠಕ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಘಟಿಕೋತ್ಸವ ಭಾಷಣ ಮಾಡಲಿದ್ದಾರೆಂದು ಕುಲಪತಿ ತಿಳಿಸಿದರು.

ಘಟಿಕೋತ್ಸವದಲ್ಲಿ 508 ಬಿ.ಎಸ್ಸಿ ತೋಟಗಾರಿಕೆ ಮತ್ತು ಬಿಟೆಕ್ ವಿದ್ಯಾರ್ಥಿಗಳು, ಎಂಎಸ್ಸಿ ಪದವಿ 10 ವಿಭಾಗಗಳಲ್ಲಿ ಉತ್ತೀರ್ಣರಾದ 144 ಸ್ನಾತ-ಕೋತ್ತರ ವಿದ್ಯಾರ್ಥಿಗಳಿಗೆ ಹಾಗೂ ಪಿಎಚ್‌ಡಿಯ 9 ವಿಭಾಗಗಳಲ್ಲಿ 42 ಪಿಎಚ್‌ಡಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುತ್ತಿದೆ. ಸ್ನಾತಕೋತ್ತರ ಪದವಿಯಲ್ಲಿ ಆಯಾ ವಿಷಯಗಳಲ್ಲಿ ಹೆಚ್ಚಿನ ಅಂಕಗಳನ್ನುಪಡೆದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದ 25 ಹಾಗೂ ದಾನಿಗಳಿಂದ 70 ಚಿನ್ನದ ಪದಕಗಳು ಸೇರಿ ಒಟ್ಟು 95 ಚಿನ್ನದ ಪದಕಗಳನ್ನು ಪ್ರದಾನ ಮಾಡಲಾಗುವುದು ಎಂದು ಡಾ.ವಿಷ್ಣುವರ್ಧನ ತಿಳಿಸಿದರು.

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಬಿ.ಎಸ್ಸಿ ತೋಟಗಾರಿಕೆ ಪದವಿಯಲ್ಲಿ 2302, ಬಿ.ಟೆಕ್ ಪದವಿಯಲ್ಲಿ 123, ಎಂ.ಎಸ್ಸಿ ಪದವಿಯಲ್ಲಿ 266, ಪಿಎಚ್‌ಡಿಯಲ್ಲಿ 75 ಹಾಗೂ ಡಿಪ್ಲೋಮಾದಲ್ಲಿ 33 ಸೇರಿ ಒಟ್ಟು 2799 ವಿದ್ಯಾರ್ಥಿಗಳು 10 ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಜನೆ ಮಾಡುತ್ತಿದ್ದಾರೆ. ಇದರಲ್ಲಿ ಶೇ.53.63 ರಷ್ಟು ವಿದ್ಯಾರ್ಥಿನಿಯರು ಇದ್ದಾರೆ. ಕಳೆದ ಸಾಲಿನಿಂದ ಹೊಸದಾಗಿ ವಿಜಯಪುರ ಜಿಲ್ಲೆ ಆಲಮೇಲದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಸ್ಥಾಪನೆಗೊಂಡಿದ್ದು, ಒಟ್ಟಾರೆಯಾಗಿ 315 ಶಿಕ್ಷಕ ಮತ್ತು 433 ಶಿಕ್ಷಕೇತರ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆಂದು ಅವರು ಹೇಳಿದರು. ಪತ್ರಿಕಾ ಗೋಷ್ಠಿಯಲ್ಲಿ ತೋಟಗಾರಿಕೆ ವಿವಿಯ ವಿಸ್ತರಣಾ ನಿರ್ದೇಶಕ ಮಹಾದೇವ ಮುರಗಿ, ಶಿಕ್ಷಣ ನಿರ್ದೇಶಕ ಡಾ.ಎನ್.ಕೆ.ಹೆಗಡೆ, ಸಂಶೋಧನ ನಿರ್ದೇಶಕ ಡಾ.ಬಿ.ಪಕೃದ್ದಿನ್, ವಿಸ್ತರಣಾ ನಿರ್ದೇಶಕಡಾ.ವೆಂಕಟೇಶಲುಸೇರಿದಂತೆ ಇತರರು ಉಪಸ್ಥಿತರಿದ್ದರು.


### ಬಿಲ್‌ಕೆರೂರಿನಲ್ಲಿ ಜೂ.9-10 ಲಿಂ.ರುದ್ರಮುನಿ ಶ್ರೀಗಳ ಪುಣ್ಯಸ್ಮರಣೋತ್ಸವ

# ನೂತನ ರಥ ಲೋಕಾರ್ಪಣೆ-ಹೆಲಿಕಾಪ್ಟರ್ ಮೂಲಕ ಪುಷ್ಪವೃಷ್ಟಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6-ತಾಲೂಕಿನ ಬಿಲ್‌ಕೆರೂರ ಗ್ರಾಮದ ಬಿಲ್ವಾಶ್ರಮ ಹಿರೇಮಠದ ಮಹಾತಪಸ್ವಿ ಲಿಂ.ರುದ್ರಮುನಿ ಶಿವಾಚಾರ್ಯರ 44 ನೆಯ ಪುಣ್ಯಸ್ಮರಣೋತ್ಸವದ ಅಂಗವಾಗಿ ಜೂ.9 ಹಾಗೂ 10 ರಂದು ನೂತನ ರಥದ ಲೋಕಾರ್ಪಣೆ, ಪೀಠಾಧಿಪತಿ ಸಿದ್ಧಲಿಂಗ ಶಿವಾಚಾರ್ಯರ ಜನ್ಮ ಸುವರ್ಣ ಮಹೋತ್ಸವ, ಗುರು ಪಟ್ಟಾಧಿಕಾರದ ರಜತ ಮಹೋತ್ಸವ, ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಜರುಗಲಿವೆ.

ಸೋಮವಾರ ಬೆಳಿಗ್ಗೆ 6 ಗಂಟೆಗೆ ಲಿಂ.ರುದ್ರಮುನಿ ಶಿವಾಚಾರ್ಯರ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ರಥದ ಪೂಜೆ, ಹೋಮ-ಹವನ, ಅಯ್ಯಾಚಾರ, ಶಿವದೀಕ್ಷೆ ಪೂಜಾ ಕಾರ್ಯಕ್ರಮಗಳು ಜರುಗಲಿದ್ದು, 9 ಗಂಟೆಗೆ ಅನೇಕ ಜನ ಪೂಜ್ಯರು ದಿವ್ಯ ಸಾನಿಧ್ಯ ಹಾಗೂ ಗಣ್ಯರ ಉಪಸ್ಥಿತಿಯಲ್ಲಿ ಧರ್ಮ ಧ್ವಜಾರೋಹಣ ಸಮಾರಂಭ ನಡೆಯಲಿದೆ. ಸಾಯಂಕಾಲ 4 ಗಂಟೆಗೆ ಬಾಗವ್ವ ಬಸಪ್ಪ ರಡ್ಡೇರ ಕುಟುಂಬದವರು ಕೊಡಮಾಡಿರುವ ಬೆಳ್ಳಿ ಉತ್ಸವ ಮೂರ್ತಿಯನ್ನು ಶ್ರೀಮಠಕ್ಕೆ ಸಮರ್ಪಿಸಲಾಗುವುದು.



ಸಂಜೆ 7 ಗಂಟೆಗೆ ಲಿಂ.ರುದ್ರಮುನಿ ಶಿವಾಚಾರ್ಯರ ಪುರಾಣ ಮಹಾಮಂಗಲ ಕಾರ್ಯಕ್ರಮ ಉಜ್ಜೈನಿಯ ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು, ಕಾಶಿ ಪೀಠದ ಡಾ.ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರ ದಿವ್ಯ ಸಾನಿಧ್ಯದಲ್ಲಿ ನಡೆಯಲಿದೆ. ನಿಡಗುಂದಿ, ಕಮತಗಿ, ಅಮೀನಗಡ, ಬೀಳಗಿ, ಕುಂದರಗಿ, ಬಾಗೇವಾಡಿ ಶ್ರೀಗಳು ಉಪಸ್ಥಿತಿಯಲ್ಲಿ ಮಾಜಿ ಶಾಸಕ ವೀರಣ್ಣ ಚರಂತಿಮಠ ಕಾರ್ಯಕ್ರಮ ಉದ್ಘಾಟಿಸುವರು. ಜನಪ್ರತಿನಿಧಿಗಳು, ವಿವಿಧ ಸಂಘ-ಸಂಸ್ಥೆಗಳ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜೂ.10 ಮಂಗಳವಾರ ಮುಂಜಾನೆ 10-30 ಗಂಟೆಗೆ ಸಿದ್ಧಲಿಂಗ ಶಿವಾಚಾರ್ಯರ ಜನ್ಮ ಸುವರ್ಣ ಮಹೋತ್ಸವ, ಗುರು ಪಟ್ಟಾಧಿಕಾರದ ರಜತ ಮಹೋತ್ಸವ ಹಾಗೂ ಸರ್ವಧರ್ಮ ಸಾಮೂಹಿಕ ವಿವಾಹ ಸಮಾರಂಭ ಜರುಗಲಿದೆ. ಉಜ್ಜೈನಿ, ಕಾಶೀ ಶ್ರೀಗಳು ಸಾನಿಧ್ಯ ವಹಿಸಲಿದ್ದು, ಮುಕ್ತಿಮಂದಿರದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಅಧ್ಯಕ್ಷತೆ ವಹಿಸುವರು. ಗಿರಿಸಾಗರ, ಶಿವಗಂಗೆ, ಎಮ್ಮಿಗನೂರ ಶ್ರೀಗಳು ಉಪಸ್ಥಿತರಿರಲಿದ್ದು, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಬಾಗಲಕೋಟೆ ಶಾಸಕ ಎಚ್.ವಾಯ್.ಮೇಟಿ ಕಾರ್ಯಕ್ರಮ ಉದ್ಘಾಟಿಸುವರು. ಸಂಸದರು, ಶಾಸಕರು, ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಸಾಯಂಕಾಲ 4 ಗಂಟೆಗೆ ನೂತನರಥದ ಲೋಕಾರ್ಪಣೆಯನ್ನು ಉಜ್ಜೈನಿ ಹಾಗೂ ಕಾಶೀ ಶ್ರೀಗಳು ಮಾಡಲಿದ್ದು, ನಂತರ ಸಕಲ ವಾದ್ಯ ವೈಭವಗಳೊಂದಿಗೆ ರಥೋತ್ಸವ ಜರುಗಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿ ತಿಳಿಸಿದೆ.

> “ನೂತನವಾಗಿ ನಿರ್ಮಿಸಲಾದ ರಥದ ಲೋಕಾರ್ಪಣೆ ಸಂದರ್ಭದಲ್ಲಿ ಶಾಸಕ ವಿಜಯಾನಂದ ಕಾಶಪ್ಪನವರ ಭಕ್ತಿ ಸೇವೆಯಿಂದ ರಥಕ್ಕೆ ಹೆಲಿಕಾಪ್ಟರ್ ಮುಖಾಂತರ ಪುಷ್ಪ ವೃಷ್ಠಿಯಾಗಲಿದೆ ಎಂದು ಶ್ರೀಮಠದ ಪೀಠಾಧಿಪತಿ ಸಿದ್ಧಲಿಂಗ ಶಿವಾಚಾರ್ಯರು ತಿಳಿಸಿದ್ದಾರೆ.

### ವಸತಿ ನಿಲಯಗಳ ಮಕ್ಕಳ ಬಯೋಮ್ಯಾಟ್ರಿಕ್ ಹಾಜರಾತಿ ಕಡ್ಡಾಯ

# ವಸತಿ ಶಾಲೆಗಳ ಫಲಿತಾಂಶ ಸುಧಾರಣೆಗೆ ಕುರೇರ್ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6-ಜಿಲ್ಲೆಯಲ್ಲಿ ವಿವಿಧ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳ ಫಲಿತಾಂಶ ಸುಧಾರಣೆಗೆ ಕ್ರಮಕೈಗೊಳ್ಳುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶುಕ್ರವಾರ ಜರುಗಿದ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಿವಿಧ ವಸತಿ ನಿಲಯಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಫಲಿತಾಂಶಗಳ ವಿಮರ್ಶೆ ಮಾಡಿಕೊಂಡು ಕಡಿಮೆ ಫಲಿತಾಂಶ ಪಡೆದಿರುವ ಮಕ್ಕಳಿಗೆ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಹಾಗೂ ಚಟುವಟಿಕೆಗಳನ್ನುಕೈಗೊಂಡುಫಲಿತಾಂಶ ಸುಧಾರಣೆಗೆ ಕ್ರಮವಹಿಸಬೇಕು. ಮಕ್ಕಳ ವಿಚಾರದಲ್ಲಿ ನಿರ್ಲಕ್ಷ ಸಲ್ಲದು ಎಂದರು.

ವಸತಿ ನಿಲಯಗಳಿಗೆ ಎಲ್ಲರೀತಿಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಆದರೂ ಸಹ ಫಲಿತಾಂಶದಲ್ಲಿ ಮಾತ್ರ ಕಡಿಮೆಯಾಗುತ್ತಿದೆ. ಮುಂದಿನ ಶೈಕ್ಷಣಿಕ ವರ್ಷದಲ್ಲಿ ನೂರಕ್ಕೆ ನೂರರಷ್ಟು ಫಲಿತಾಂಶವಾಗಬೇಕು. ಈ ನಿಟ್ಟಿನಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ವಸತಿ ನಿಲಯದ ಮೇಲ್ವಿಚಾರಕರು ಸಹ ತಮ್ಮ ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಪ್ರಾಮಾಣಿಕತೆಯಿಂದ ಕೆಲಸನಿರ್ವಹಿಸುವಂತೆ ತಿಳಿಸಿದ ಸಿಇಓ ಫಲಿತಾಂಶ ಸುಧಾರಣೆ ಆಗದಿದ್ದರೆ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಎಚ್ಚರಿಕೆ ನೀಡಿದರು.

ಪ್ರತಿಯೊಂದು ವಸತಿ ಶಾಲೆಯಲ್ಲಿ ಮಕ್ಕಳ ಬಯೋಮ್ಯಾಟ್ರಿಕ್ ಹಾಜರಾತಿ ಕಡ್ಡಾಯವಾಗಿ ಮಾಡುವ ಮೂಲಕ ನಿಲಯಗಳಲ್ಲಿ ಸದ್ಯ ಇರುವ ಮೂಲಭೂತ ಸೌಲಭ್ಯಗಳನ್ನೇ ಸರಿಪಡಿಸಿಕೊಂಡು ಸರಿಯಾಗಿ ನಿರ್ವಹಣೆಯಾಗುವಂತೆ ನೋಡಿಕೊಳ್ಳಬೇಕು. ಸ್ವಚ್ಛತೆಗೆ ಹೆಚ್ಚಿನ ಗಮನಹರಿಸಿ ಉತ್ತಮವಾದ ಶೈಕ್ಷಣಿಕ ವಾತಾವರಣ ಸೃಷ್ಠಿಸುವ ಕಾರ್ಯವಾಗಬೇಕು. ಅಂದಾಗ ಮಾತ್ರ ಮಕ್ಕಳ ಬೆಳವಣಿಗೆ ಕಾಣಬಹುದಾಗಿದೆ. ಮೇಲ್ವಿಚಾರಕರು ಶಾಲೆಗಳಿಗೆ ಭೇಟಿ ನೀಡಿ ಶಿಕ್ಷಕರ ಜೊತೆ ಶೈಕ್ಷಣಿಕ ಚಟುವಟಿಕೆ ಬಗ್ಗೆ ಚರ್ಚಿಸಿ ಫಲಿತಾಂಶ ಸುಧಾರಣೆ ಕ್ರಮವಹಿಸಲು ತಿಳಿಸಿದರು.


ಮೆನುವಿನ ಪ್ರಕಾರ ಮಕ್ಕಳಿಗೆ ಗುಣಮಟ್ಟದ ಶುಚಿಯಾದ ಆಹಾರವನ್ನು ಪೂರೈಸಬೇಕು. ವಸತಿ ನಿಲಯಗಳಲ್ಲಿ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ನಿರ್ಬಂಧಿಸುವದರ ಜೊತೆಗೆ ನಿಲಯದ ಮಕ್ಕಳನ್ನು ತಮ್ಮ ಮಕ್ಕಳಂತೆ ನೋಡಿ-ಕೊಂಡು ಅವರ ಶೈಕ್ಷಣಿಕ ಬೆಳವಣಿಗೆಗೆ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು. ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ ತೋರಿದಲ್ಲಿ ಶಿಸ್ತುಕ್ರಮಕ್ಕೆ ಮುಂದಾಗುವುದಾಗಿ ಸಿಇಓ ಕುರೇರ ಸೂಚನೆ ನೀಡಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಈರಣ್ಣ ಆಶಾಪೂರ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ವಸತಿ ನಿಲಯಗಳ ಮೇಲ್ವಿಚಾರಕರು ಉಪಸ್ಥಿತರಿದ್ದರು.

# ಹಿಂದೂ ಕಾಯ್ದೆ ಕಾನೂನು ಪ್ರಮಾಣಕ್ಕೆ ಯಾಜ್ಞವಲ್ಕ್ಯ ಸ್ಮøತಿ ಶ್ರೇಷ್ಠ ಗ್ರಂಥ: ವೆಂಕಟೇಶ ಗ್ರಾಮ ಪುರೋಹಿತ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಭಾರತದಲ್ಲಿ ಹಿಂದೂ ಕಾಯ್ದೆ, ಕಾನೂನು ಪುರಾಣ ಅರ್ಹವಾದ ಗ್ರಂಥ ಯಾಜ್ಞವಲ್ಕ್ಯ ಸ್ಮøತಿಯ ಆಧಾರದಿಂದಲೇ ರಚಿತವಾಗಿದ್ದು, ಯೋಗೀಶ್ವರ ಯಾಜ್ಞವಲ್ಕ್ಯರು ವೈದಿಕ ಋಷಿಮುನಿಗಳಲ್ಲಿ ಅಗ್ರಗಣ್ಯರು ಎಂದು ವೆಂಕಟೇಶ.ಪಿ.ಗ್ರಾಮ ಪುರೋಹಿತ ತಾಳಿಕೋಟೆ ತಿಳಿಸಿದರು.




ನಗರದ ಹಳೆಪೇಟೆಯ ಪರಿಮಳ ಪ್ರಸಾದ ಕಲ್ಯಾಣ ಮಂಟಪದಲ್ಲಿ ಜರುಗಿದ, ಶ್ರೀಮದ್ ಯೋಗೇಶ್ವರ ಯಾಜ್ಞವಲ್ಕ್ಯ ಮಹರ್ಷಿಗಳ ಜಯಂತ್ಯೋತ್ಸವ ಕಾರ್ಯಕ್ರಮ, ಯಾಜ್ಞವಲ್ಕ್ಯ ಸಮಿತಿಯ ನೇತೃತ್ವದಲ್ಲಿ ಸರ್ವರ ಸಹಕಾರದೊಂದಿಗೆ ಜರುಗಿದ ಸಂದರ್ಭದಲ್ಲಿ ಶ್ರೀ ಯಾಜ್ಞವಲ್ಕ್ಯರ ಕುರಿತು ಪ್ರವಚನ ನೀಡಿದ ಅವರು, ಕಣ್ಣಿಗೆ ಕಾಣುವ ಜಗತ್ತು ಮಿಥ್ಯ ಬ್ರಹ್ಮನು ಮಾತ್ರ ಸತ್ಯ ಎಂದು ಈಶೋಪನಿಷತ್ತು ಸಾರಿ ಹೇಳಿದ್ದು, ಇವರು ರಚಿಸಿದ ಶುಕ್ಲಯಜುರ್ವೇದ 19 ಉಪನಿಷತ್ತುಗಳು ಹೊಂದಿದೆ, ತಂದೆಯ ಆಜ್ಞೆಯಂತೆ ಯಾಜ್ಞವಲ್ಕ್ಯರು ಸೂರ್ಯದೇವನ ಅನುಸಂಧಾನ ಮುಂದುವರೆಸಿ, ದಿವ್ಯ ತೇಜವನ್ನು ಪಡೆದರು, ಅವರ ತತ್ವ ಸರ್ವರಿಗೂ ಪ್ರೇರಣದಾಯಕವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸಿದ ವಿಪ್ರಸಮುದಾಯದ ವಿದ್ಯಾರ್ಥಿಗಳಿಗೆ ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು, ಹಾಗೂ ಹಿರಿಯರಿಗೆ ಗೌರವಿಸಲಾಯಿತು. ಬೆಳಗ್ಗೆ ಯಾಜ್ಞವಲ್ಕ್ಯ ಋಷಿಗಳ ಅಷ್ಟೋತ್ತರ, ಪಠಿಸಲಾಯಿತು. ಸತ್ಯನಾರಾಯಣ ಪೂಜೆ, ವಿಶೇಷವಾಗಿ ಖ್ಯಾತ ಗಾಯಕ ಅನಂತರಾಜ ಮಿಸ್ತ್ರಿ ಮತ್ತು ತಂಡದವರಿಂದ ಗಾನಸುಧೆ, ದಾಸವಾಣಿ ಪ್ರೇರಣೆಯಾಯಿತು. ಋಷಿ.ಹೆಚ್.ಜೋಶಿ ಭರತನಾಟ್ಯ, ವಿಶೇಷ ಪೂಜಾ ಕಾರ್ಯಕ್ರಮ ಜರುಗಿದವು. ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ದರ್ಶನ ಪಡೆದು ಪುನೀತರಾದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ಭೀಮಸೇನಾಚಾರ್ಯ ವನದುರ್ಗ, ಶ್ರೀಕಾಂತ ಸರ್ಕಿಲ, ಜೀವನರಾವ ಕುಲ್ಕರ್ಣಿ, ಜಯರಾವ ಕುಲ್ಕರ್ಣಿ, ಶ್ರೀಪಾದ ಭಟ್ ಅರ್ಚಕರು, ರಾಘವೇಂದ್ರರಾವ್ ಕುಲ್ಕರ್ಣಿ, ಜಿ.ಪ್ರಾಣೇಶ್ವರ, ತಿರುಮಲಾಚಾರ್ಯ ಭಕ್ರಿ, ನರಸಿಂಹಾಚಾರ್ಯ ರೊಟ್ಟಿ, ಪ್ರದೀಪ ಕುಲಕರ್ಣಿ, ಕಿರಣ್ ಭಟ್ ಜೋಶಿ, ರಾಘವೇಂದ್ರ ಸರ್ನಾಡ, ವಾಸುದೇವಾಚಾರ್ಯ ಮಲ್ಹಾರಾವ ಕುಲ್ಕರ್ಣಿ, ಭಗವಂತ್ರಾಯ ತಂಗಡಿಗಿ, ಬಲಭೀಮರಾವ ಕುಲ್ಕರ್ಣಿ, ಪ್ರಭಾಕರ ಗೌಡೂರು, ರಾಘವೇಂದ್ರ ಸೇರಿದಂತೆ ಯುವಕರು, ಹಿರಿಯರು, ಪಾಲ್ಗೊಂಡಿದ್ದರು, ಮಾರುತಿ ಕುಲ್ಕರ್ಣಿ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.

# ಜೂ.21 ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಆಯುಷ ಇಲಾಖೆ ಸಹಯೋಗದಲ್ಲಿ ಜೂನ್ 21 ಅಂತರರಾಷ್ಟ್ರೀಯ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 6 ರಿಂದ 8.30 ಗಂಟೆವರೆಗೆ ಕಾರ್ಯಕ್ರಮ ಜರುಗಲಿದೆ. ಸೇವಾದಳದ ಮಹೇಶ ಪತ್ತಾರ ಯೋಗ ತರಬೇತಿ ನೀಡಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಯೋಗನಿರತ ಸಂಘ ಸಂಸ್ಥೆಗಳು, ಎನ್‌ಸಿಸಿ ಕೆಡೆಟ್, ಹೋಮ್‌ಗಾರ್ಡ್ಸ್, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಎನ್‌ವಾಯ್.ಕೆ, ಸೇವಾದಳದವರು ಪಾಲ್ಗೊಳ್ಳಲಿದ್ದಾರೆ. ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿ, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಜಿಲ್ಲಾ ಕ್ರೀಡಾಂಗಣ ವ್ಯಾಪ್ತಿಯಲ್ಲಿ ಬರುವ ಶಾಲೆಯ ಮಕ್ಕಳನ್ನು ಈ ಯೋಗ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮಾಡಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ತಿಳಿಸಲಾಯಿತು. ನವನಗರದ ವ್ಯಾಪ್ತಿಯ ವಿವಿಧ ಇಲಾಖೆಯಡಿಯಲ್ಲಿರುವ ವಸತಿ ಶಾಲೆಗಳ ಮಕ್ಕಳೂ ಸಹ ಯೋಗ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು. ಆಶಾ, ಅಂಗನವಾಡಿ ಕಾರ್ಯಕರ್ತೆ-ಯರು ಪಾಲ್ಗೊಳ್ಳುವಂತೆ ಮಾಡಲು ತಿಳಿಸಿದರು.

ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಪ್ರೋಟೋಕಾಲ್ ಪ್ರಕಾರ ಆಮಂತ್ರಣ ಪತ್ರಿಕೆ ಮುದ್ರಣ ಮಾಡಲು ತಿಳಿಸಲಾಯಿತು. ಜಿಲ್ಲಾ ಕ್ರೀಡಾಂಗಣವನ್ನು ಸ್ವಚ್ಛವಾಗಿಡುವಂತೆ ನಗರಸಭೆ ಆಯುಕ್ತರಿಗೆ ತಿಳಿಸಿದರು. ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸುವ ಎಲ್ಲರೂ ಯೋಗ ಮಾಡಲು ಸಡಿಲು ಬಿಳಿ ಬಣ್ಣದ ಬಟ್ಟೆ, ಟ್ರ್ಯಾಕ್‌ಶೂಟ್ ಹಾಗೂ ಹಾಸಿಗೆ ತರುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಶೇಖರಯ್ಯ ಮಠ ಕಾರ್ಯಕ್ರಮದ ರೂಪು-ರೇಶೆಗಳ ಬಗ್ಗೆ ವಿವರಿಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಪಂಚಾಯತ ಸಹಾಯಕ ನಿರ್ದೇಶಕ ಕಾಂಬಳೆ, ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಂಡಲೀಕ ಕಾಂಬಳೆ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ, ಆಯುಷ ಇಲಾಖೆಯ ಹಿರಿಯ ವೈದ್ಯಾಧಿಕಾರಿ ಅಕ್ಕಮಹಾದೇವಿ ಗಾಣಿಗೇರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಆಲಮಟ್ಟಿ-ಒಳ ಹರಿವು ಹೆಚ್ಚಳ ಎಚ್ಚರ ವಹಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6-ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆಯು ವ್ಯಾಪಕವಾಗಿ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಆಲಮಟ್ಟಿ ಜಲಾಶಯಕ್ಕೆ ಒಳ ಹರಿವಿನ ಪ್ರಮಾಣ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ, ಯಾವುದೇ ಕ್ಷಣದಲ್ಲಾದರೂ ಜಲಾಶಯದಿಂದ ನೀರನ್ನು ಹೊರ ಬಿಡುವ ಸಾಧ್ಯತೆ ಇರುವುದರಿಂದ ಕೆಳಭಾಗದ ಹಳ್ಳಿಗಳು ಹಾಗೂ ಪಟ್ಟಣಗಳ ಜನರು ಎಚ್ಚರಿಕೆಯಿಂದ ಇರಬೇಕೆಂದು ಮುನ್ಸೂಚನೆ ನೀಡಲಾಗಿದೆ.

ಜಾನುವಾರು, ಜನ ಹಾಗೂ ಆಸ್ತಿ-ಪಾಸ್ತಿಯನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಿಕೊಳ್ಳುವಂತೆ ಕೃಷ್ಣಾಭಾಗ್ಯ ಜಲ ನಿಗಮ ಮನವಿ ಮಾಡಿದೆ. ಪ್ರವಾಹದ ಕುರಿತು ನಿಗಾವಹಿಸಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರವಿ ಚಂದ್ರಗಿರಿವರ ವಾಚಪ್ಪ (9480450297) ಹಾಗೂ ಇಂಜಿನಿಯರ್ ಕುಮಾರೇಶ ಹಂಚಿನಾಳ (9986788799) ಅವರನ್ನು ನಿಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಇವರನ್ನು ಸಂಪರ್ಕಿಸಬಹುದು ಎಂದು ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೈಕಲ್ ಸವಾರಿಯಿಂದ ಉತ್ತಮ ಆರೋಗ್ಯದ ಜೊತೆಗೆ ವಾಯುಮಾಲಿನ್ಯ ತಡೆಗಟ್ಟಬಹುದು-ಬಿ.ಎನ್.ಹೊರಪೇಟಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಇತ್ತೀಚಿಗೆ ಭಾಗ್ಯನಗರದ ಬಾಸ್ ಟೂಷನ್ ಸೆಂಟರ್ ಹತ್ತಿರದ ಮುಖ್ಯ ರಸ್ತೆಯಲ್ಲಿ ಮಹಿಳಾ ಧ್ವನಿ ಸಂಸ್ಥೆ, ಯುವ ಧ್ವನಿ ಸಂಸ್ಥೆ, ಮೇರಾ ಯುವ ಭಾರತ್ ಕೇಂದ್ರ ಕೊಪ್ಪಳ ಇವರುಗಳ ಸಹಯೋಗದೊಂದಿಗೆ ಬೈಸಿಕಲ್ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.




ಸೈಕಲ್ ಜಾಥಾ ಕಾರ್ಯಕ್ರಮಕ್ಕೆ ಸಾಹಿತಿಗಳಾದ ಬಿ.ಎನ್.ಹೊರಪೇಟಿ ಚಾಲನೆ ನೀಡಿದರು. ಇದೇ ವೇಳೆ ಮಾತನಾಡಿದ ಅವರು ದಿನದಿಂದ ದಿನಕ್ಕೆ ವಾಹನಗಳ ಸಂಚಾರ ದಟ್ಟನೆ ಹೆಚ್ಚಾಗುತ್ತಿದ್ದು ಇದರಿಂದ ವಾಯುಮಾಲಿನ್ಯ ಉಂಟಾಗಿ ಆರೋಗ್ಯದ ಮೇಲೆ ಪರರಿಣಾಮ ಬೀರುತ್ತದೆ. ಇಂಧನ ಉಳಿತಾಯದ ಜೊತೆಗೆ ವಾತಾವರಣವನ್ನು ಕೂಡ ಶುದ್ಧವಾಗಿಟ್ಟುಕೊಳ್ಳಲು ಅಗತ್ಯ ಓಡಾಟಕ್ಕೆ ಸೈಕಲ್ ಬಳಕೆ ಉತ್ತಮ. ಬೈಸಿಕಲ್ ಬಳಕೆಯಿಂದ ನಮ್ಮಲ್ಲಿ ಉತ್ತಮ ಆರೋಗ್ಯ ವೃದ್ಧಿಸುತ್ತಿದೆ ನಮ್ಮ ಸುತ್ತಮುತ್ತಲಿನ ಪರಿಸರ ಶುಚಿಯಾಗಿಡುವುದರ ಜೊತೆಗೆ ಸಸಿಗಳನ್ನು ನೆಟ್ಟು ಪರಿಸರ ಕಾಳಜಿವಹಿಸಬೇಕಿದೆ ಎಂದರು.

ಇದೇ ವೇಳೆ ಸೈಕಲ್ ಜಾಥಾ ಕಾರ್ಯಕ್ರಮ ನಡೆಯಿತು. ಪರಿಸರ ಸಂರಕ್ಷಣಾ ಘೋಷಣೆ ಮೊಳಗಿತು. ಬೈಸಿಕಲ್ ಜಾಥಾದಲ್ಲಿ ಪಾಲ್ಗೊಂಡವರಿಗೆ ಸಸಿ ವಿತರಿಸಲಾಯಿತು. ಬಾಸ್ ಟ್ಯೂಷನ್ ಆವರಣದಲ್ಲಿ ಸಸಿನೆಟ್ಟು ಪರಿಸರ ದಿನಾಚರಣೆ ಆಚರಿಸಲಾಯಿತು. ಪರಿಸರ ಕುರಿತು ಪ್ರಬಂಧ ಬರೆದ ವಿದ್ಯಾರ್ಥಿಗಳಿಗೆ ನೋಟಬುಕ್ ಪೆನ್ನು ವಿತರಿಸಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಿಯದರ್ಶಿನಿ, ಪೂಜಾ, ಬಸವರಾಜ ಬೆಲ್ಲದ, ರಾವುಲ್ ಹಾಗೂ ಅನೇಕ ಯುವಕರು ಉಪಸ್ಥಿತಿ ಇದ್ದರು.



ತಾಳಿಕೋಟಿ ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕ ಬಿ.ಆರ್.ಸಮಗಾರ ಇವರನ್ನು ದಂಪತಿ ಸಮೇತ ಬೊಮ್ಮನಹಳ್ಳಿ ಗ್ರಾಮದ ಶಾಲಾ ಅವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು. ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಬಿಇಓ ಬಿ.ಎಸ್.ಸಾವಳಗಿ, ಇಸಿಓ ಸುರೇಶ ಎಸ್.ಹಿರೇಮಠ, ಇಲಿಯಾಸ್ ಬಾಗವಾನ, ಮು.ಗು.ಎ.ಡಿ.ಗೋನಾಳ, ಸಿ.ಆರ್.ಸಿ.ಎಲ್.ಜಿ. ಬಾಗೇವಾಡಿ, ಶಿಕ್ಷಕ ಜಿ.ಕೆ.ಪತ್ತಾರ, ಶಿಕ್ಷಕಿ ಕಮಲಾಕ್ಷಿ ಎನ್.ಬಿ. ಗ್ರಾಪಂ ಸದಸ್ಯ ಯಮನಪ್ಪ ಮಸರಕಲ್ಲ, ಜೆಡಿಎಸ್ ಯುವ ಮುಖಂಡ ಜಗನ್ನಾಥ ಮಸರಕಲ್ಲ ಇದ್ದರು.

# ಪರಿಸರ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6-ಪರಿಸರ ರಕ್ಷಣೆಗೆ ವಿದ್ಯಾರ್ಥಿಗಳು ಮುಂದಾಗುವುದರ ಜೊತೆಗೆ ತಮ್ಮ ಊರುಗಳಲ್ಲಿ ಇದರ ಬಗ್ಗೆ ಜಾಗೃತಿಯನ್ನುಂಟು ಮಾಡಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್.ಘಟಕ 1 ಮತ್ತು 2 ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗಿಡ-ಮರಗಳ ಪೋಷಣೆ ಹಾಗೂ ರಕ್ಷಣೆಯನ್ನು ಮಾಡುವದು ಎಲ್ಲರ ಜವಾಬ್ದಾರಿ. ಅವುಗಳನ್ನು ನಾವು ರಕ್ಷಿಸಿದರೆ, ಉತ್ತಮ ಪರಿಸರವನ್ನು ನೀಡುವದರ ಮೂಲಕ ಅವುಗಳು ನಮ್ಮನ್ನು ರಕ್ಷಿಸುತ್ತವೆ. ಉತ್ತಮ ಪರಿಸರದಿಂದ ಒಳ್ಳೆಯ ಆರೋಗ್ಯವನ್ನು ಪಡೆದುಕೊಳ್ಳಲು ಸಾಧ್ಯ ಎಂದು ನರಗುಂದ ಹೇಳಿದರು. ಜಾಗತಿಕ ತಾಪಮಾನ, ಹವಾಮಾನ ಬದಲಾವಣೆ, ಅರಣ್ಯನಾಶ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ಜನರಲ್ಲಿ ಅರಿವು ಮೂಡಿಸುವದರ ಸಲುವಾಗಿ ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತಿದೆ. ಮನುಷ್ಯನಿಗೆ ಬೇಕಾಗುವ ಎಲ್ಲ ಸಂಪನ್ಮೂಲಗಳನ್ನು ಉದಾರವಾಗಿ ನೀಡುವ ಭೂಮಿತಾಯಿಯನ್ನು ರಕ್ಷಿಸುವ ಜವಾಬ್ದಾರಿ ನಮ್ಮದು. ವಿದ್ಯಾರ್ಥಿಗಳು ಪರಿಸರದ ಬಗ್ಗೆ ಕಾಳಜಿ ವಹಿಸಬೇಕು. ಪರಿಸರವನ್ನು ಉಳಿಸಿ-ಬೆಳೆಸುವಲ್ಲಿ ಮಹತ್ವದ ಪಾತ್ರವನ್ನು ನಿರ್ವಹಿಸಬೇಕು. ಎಂದರು. ಎನ್.ಎಸ್.ಅಧಿಕಾರಿ ಎಸ್.ವಾಯ್.ಬೊಮ್ಮಣ್ಣವರ ಸ್ವಾಗತಿಸಿದರು. ಎನ್.ಎಸ್. ಅಧಿಕಾರಿ ಎಸ್.ಎಂ.ಹಡಪದ ವಂದಿಸಿದರು. ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಪಾಲ್ಗೊಂಡಿದ್ದರು.

# ಬಳ್ಳಾರಿ ಗ್ರಾಮೀಣ ಜೆಸ್ಕಾಂ:

## 220ಕೆ.ವಿ ಸೋಮಸಮುದ್ರ ಸ್ವೀಕರಣಾ ಕೇಂದ್ರದಿಂದ ಮೂರು ನೂತನ ಫೀಡರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯಲ್ಲಿ ನೂತನ 220ಕೆ.ವಿ ಸೋಮಸಮುದ್ರ ಸ್ವೀಕರಣಾ ಕೇಂದ್ರದಿಂದ ಜೂ.08 ರಿಂದ ಮೂರು ಹೊಸ 11ಕೆವಿ ಫೀಡರ್/ಮಾರ್ಗಗಳನ್ನು ಚಾಲನೆಗೊಳಿಸಲಾಗುವುದು ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ನೂತನ ಫೀಡರ್: ಎಫ್-4 ಎನ್.ಜೆ.ವೈ ಮಾರ್ಗಗಳ ವ್ಯಾಪ್ತಿಗೆ ಬರುವ ಗ್ರಾಮಗಳು- ಕೃಷ್ಣನಗರ ಕ್ಯಾಂಪ್, ಮಾರುತಿ ಕ್ಯಾಂಪ್, ರ್ರಂಗಳಿ, ಸಿದ್ದಮ್ಮನಹಳ್ಳಿ ಗ್ರಾಮ.

ಎಫ್-5 ಎನ್.ಜೆ.ವೈ ಮಾರ್ಗಗಳ ವ್ಯಾಪ್ತಿಗೆ ಬರುವ ಗ್ರಾಮಗಳು-ಕೊಳಗಲ್ಲು, ಶಾಂತಿನಗರ ಗ್ರಾಮಗಳು.

ಎಫ್-6 ಐಪಿ ಮಾರ್ಗಗಳ ವ್ಯಾಪ್ತಿಗೆ ಬರುವ ಗ್ರಾಮಗಳು- ಕೊಳಗಲ್ಲು ಗ್ರಾಮ ಮತ್ತು ಕೃಷಿ ಪ್ರದೇಶಗಳು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ದೇವರಾಜ ಅರಸು ಅವರು ರಾಜ್ಯ ಕಂಡಂತಹ ಮುತ್ಸದ್ದಿ ರಾಜಕಾರಣಿ :ಮುಖ್ಯಮಂತ್ರಿ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜೂ.06: ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರು ರಾಜ್ಯ ಕಂಡಂತಹ ಮುತ್ಸದ್ದಿ ರಾಜಕಾರಣಿಗಳಲ್ಲಿ ಒಬ್ಬರು. ಬಡವರು, ಅನ್ಯಾಯ, ತುಳಿತಕ್ಕೊಳಗಾದವರಿಗೆ, ಅವಕಾಶಗಳಿಂದ ವಂಚಿತರಾದವರ ಬಗ್ಗೆ ಅಪಾರ ಕಾಳಜಿ ಹೊಂದಿದ್ದವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಬೆಂಗಳೂರಿನ ವಿಧಾನಸೌಧದ ಪಶ್ಚಿಮ ದ್ವಾರದ ಮುಂಭಾಗ ಇರುವ ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸುರವರ 43ನೇ ಪುಣ್ಯ ಸ್ಮರಣೆ ಅಂಗವಾಗಿ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ನಂತರ ಮಾತನಾಡಿದ ಅವರು ದಿ.ದೇವರಾಜು ಅರಸುರವರು ರಾಜಕೀಯದಲ್ಲಿ ಅವಕಾಶ ಸಿಗದ ಜನಾಂಗದವರಿಗೆ ಪ್ರಾತಿನಿಧ್ಯ ದೊರಕಿಸಿಕೊಟ್ಟರು. ಅವರಿಂದಾಗಿ



ಬಡತನ ನಿರ್ಮೂಲನಾ ಕಾರ್ಯಕ್ರಮ ಕರ್ನಾಟಕದಲ್ಲಿ ಅಚ್ಚುಕಟ್ಟಾಗಿ ನೆರವೇರಿತು. ಹಾವನೂರು ಆಯೋಗವನ್ನು ರಚನೆ ಮಾಡಿ, ಅದರ ವರದಿ ಪಡೆದು ಜಾರಿ ಮಾಡಿ ಉದ್ಯೋಗದಲ್ಲಿ ಮೀಸಲಾತಿ ಕೊಟ್ಟರು ಎಂದು ಸ್ಮರಿಸಿದರು. ಸಾಮಾಜಿಕ ನ್ಯಾಯದಲ್ಲಿ ಬಲವಾದ ನಂಬಿಕೆ ಇಟ್ಟ ದೇವರಾಜ ಅರಸು ಅವರು ನಿರ್ಗತಿಕರು, ಭೂ ರಹಿತರಿಗೆ ನ್ಯಾಯ ಕೊಡಿಸುವ ಕೆಲಸ ಮಾಡಿದರು. ಉಳುವವನೇ ಭೂಮಿಯ ಒಡೆಯ ಕಾನೂನು ಜಾರಿ ಮಾಡಿ ಭೂರಹಿತರನ್ನು ಭೂ ಒಡೆಯರಾಗಿಸಿದರು. ಜೀತ ಪದ್ಧತಿಯನ್ನು ರದ್ದು ಮಾಡಿ, ಮಲ ಹೊರುವ ಪದ್ಧತಿಯನ್ನು ನಿಲ್ಲಿಸಿದರು ಎಂದರು. ಸಾಮಾಜಿಕ ನ್ಯಾಯದ ಪರವಾಗಿ ಬದ್ಧತೆಯಿದ್ದ ರಾಜಕಾರಣಿ ಮೈಸೂರು ರಾಜ್ಯಕ್ಕೆ 1973 ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದ ಮುತ್ಸದ್ದಿ. ಜನಪರವಾದ ಕಾಳಜಿ, ಸಾಮಾಜಿಕ ನ್ಯಾಯದ ಪರವಾಗಿ ಬದ್ಧತೆಯಿರುವ ರಾಜಕಾರಣಿಯನ್ನು ಸರ್ಕಾರ ಸ್ಮರಿಸಿದೆ. ಅವರು ಮಾಡಿರುವ ಕೆಲಸಗಳು ನಮಗೆ ಸ್ಫೂರ್ತಿ ಮತ್ತು ಪ್ರೇರಣೆ. ನಮ್ಮ ಸರ್ಕಾರ ಅವರಿಂದ ಸ್ಪೂರ್ತಿ ಪಡೆದು ಸಾಮಾಜಿಕ ನ್ಯಾಯದೆಡೆಗೆ ದೃಢವಾದ ಹೆಜ್ಜೆಗಳನ್ನು ಇರಿಸಿದ್ದೇವೆ. ಅದೇ ನಾವು ಅವರಿಗೆ ಸಲ್ಲಿಸುವ ಗೌರವ ಎಂದರು. ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ಎಸ್. ತಂಗಡಗಿ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಡಿ.ದೇವರಾಜ ಅರಸುರವರ ಕುಟುಂಬದ ಸದಸ್ಯರು ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

# ಶಾಂತಿಯುತವಾಗಿ ಬಕ್ರಿದ ಹಬ್ಬ ಆಚರಣೆ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.6: ತಾಲೂಕಿನ ವಿವಿಧ ಹೋಬಳಿ ಕೇಂದ್ರದ ಸುತ್ತಲಿನ ಗ್ರಾಮದಲ್ಲಿ ಬಕ್ರೀದ ಹಬ್ಬವನ್ನು ಶಾಂತಿಯುತ ಆಚರಿಸಿ ಪೊಲೀಸ್ ಸಿಬ್ಬಂಧಿಗಳಿಗೆ ಸಹಕಾರ ನೀಡಿ ಎಂದು ಅವರು ಎಲ್ಲ ಸಮುದಾಯ ಮುಖಂಡರಿಗೆ ಸಿ. ಪಿ. ಐ ಅಡೆಪ್ಪ ಬನ್ನಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಇತ್ತೀಚಿಗೆ ನಡೆದ ಶಾಂತಿಯಲ್ಲಿ ಅವರು ಮಾತನಾಡಿ, ತ್ಯಾಗ ಮತ್ತು ಬಲಿದಾನ ಸಂಕೇತವಾಗಿರುವ ಬಕ್ರೀದ ಹಬ್ಬ ವನ್ನು ಪಟ್ಟಣದಲ್ಲಿ ಸೌಹಾರ್ದತೆಯಿಂದ ಆಚರಿಸಬೇಕು. ಕಾನೂನು ಸುವಸ್ಥೆಗೆ ಧಕ್ಕೆ ಯಾಗದಂತೆ ಎಚ್ಚರಕೆಯಿಂದ ಆಚರಣೆಗೆ ಮುಂದಾಗಬೇಕು ಎಂದು ಹೇಳಿದರು.

ಕಮಲನಗರ ತಾಲೂಕಿನ ಒಟ್ಟು18 ಗ್ರಾಮ ಪಂಚಾಯತ ವ್ಯಪ್ತಿಗೆ ಬರುವ ಹೋಬಳಿ ಕೇಂದ್ರದ ಠಾಣಾಕುಶನೂರ, ದಾಬಕಾ ಮತ್ತು ಕಮಲನಗರ ಸುತ್ತಲಿನ ಗ್ರಾಮದ ಯುವಕರು, ಮುಖಂಡರು ಸೇರಿ ಬಕ್ರೀದ ಹಬ್ಬವನ್ನು ಆಚರಿಸಿ ಸಮಾಜದಲ್ಲಿ ಶಾಂತಿ ಸೌಹಾರ್ದತೆ ಕಾಪಾಡುವ ಎಲ್ಲರ ಜಿಮ್ಮೆದಾರಿ ಇದೆ ತಿಳಿಳಿಸಿದರು.

ಪಿ. ಎಸ. ಐ ಚಂದ್ರಶೇಖರ ಮಾತನಾಡಿ, ಹಬ್ಬಗಳು ಎಲ್ಲಾರನ್ನು ಪ್ರೀತಿ ಪ್ರೇಮದಿಂದ ಬೆಸೆಯಬೇಕು. ಎಲ್ಲರೂ ಸಂತೋಷ ಮತ್ತು ಸಂಭ್ರಮದಿಂದ ಹಬ್ಬ ಆಚರಿಸಿದಾಗ ಮಾತ್ರ ಹಬ್ಬಗಳು ಅರ್ಥಪೂರ್ಣ ಎಂದು ಹೇಳಿದರು.

ಅಮೂಲ ಸೂರ್ಯವಂತೆ ಮಾತನಾಡಿದರು. ಗ್ರಾಮ ಪಂಚಾಯತ ಸದಸ್ಯ ಬಾಲಾಜಿ ತೆಲಂಗ, ಮಹೇಶ ಸಜ್ಜನ, ಶಾಯಿನಾಥ ಕಾಂಬಳೆ, ಗೋವಿಂದರಾವ ತಾಂದಳೆ, ರಾಜಕುಮಾರ ಗಾಯಕವಾಡ, ವಿರೇಶ ತೋರಣೆಕರ, ಶಾಲಿವಾನ ಡೋಂಗರೆ, ಶಬ್ಬಿರ ಕುರೈಸಿ, ಹಮೀದ ಕುರೈಸಿ ಮತ್ತು ವಿವಿಧ ಬಡಾಣೆಯ. ಮುಖಂಡರು ಇದ್ದರು.

# ಶಾಸಕ ಜನಾರ್ಧನ್ ರೆಡ್ಡಿ ಅವರ ಧರ್ಮಪತ್ನಿಯಿಂದ ವಿವಿಧ ದೇವರುಗಳ ಮೊರೆ, ಹೋಮ ವಿಶೇಷ ಪೂಜೆ ಸಲ್ಲಿಕೆ

ವೀರಯ್ಯ ವಿ ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜೂ.6: ಕರ್ನಾಟಕದ ಮಾಜಿ ಸಚಿವ ಹಾಲಿ ಗಂಗಾವತಿ ಶಾಸಕರಾದ ಜನಾರ್ದನ್ ರೆಡ್ಡಿ ಅವರ ಧರ್ಮಪತ್ನಿಯಾದ ಶ್ರೀಮತಿ ಲಕ್ಷ್ಮಿ ಅರುಣಾ ರೆಡ್ಡಿ ಅವರು ಕಳೆದ ನಾಲ್ಕು ದಿನಗಳಿಂದ ಕರ್ನಾಟಕ ರಾಜ್ಯದ ಪ್ರಮುಖ ವಿವಿಧ ದೇವಸ್ಥಾನಗಳಿಗೆ ಭೇಟಿ ನೀಡಿ, ವಿಶೇಷ ಪೂಜೆ ಹೋಮ ಹವನಗಳನ್ನು ಸಲ್ಲಿಸುತ್ತಿರುವುದು ವಿಶೇಷ. ಈಗಾಗಲೇ ಎಲ್ಲರಿಗೂ ಗೊತ್ತಿರುವಂತೆ ಅಕ್ರಮ ಗಣಿಗಾರಿಕೆ ವಿಷಯದಲ್ಲಿ ಆಂಧ್ರಪ್ರದೇಶದ ನಾಂಪಲ್ಲಿ ಸಿಬಿಐ ವಿಶೇಷ ನ್ಯಾಯಲಯ ಜನಾರ್ಧನ್ ರೆಡ್ಡಿ ಅವರನ್ನು ದೋಷಿ ಎಂದು ಪರಿಗಣಿಸಿ, ಏಳು ವರ್ಷಗಳ ಶಿಕ್ಷೆಯನ್ನು ನೀಡಿದ ಪ್ರಕರಣದಲ್ಲಿ ಹೈದರಾಬಾದಿನ ಚಂಚಲಗುಡ ಜೈಲಿನಲ್ಲಿರುವ ಜನಾರ್ಧನ್ ರೆಡ್ಡಿ ಅವರು ಕಳೆದ ಐದು ದಿನಗಳ ಹಿಂದೆ ಬೆಂಗಳೂರಿನ ಕೆಲವು ಪ್ರಕರಣಗಳಿಗೆ ಸಂಬಂಧಿಸಿದಂತೆ ಇಲ್ಲಿನ ನ್ಯಾಯಾಲಯದ ಆದೇಶದ ಮೇರೆಗೆ ಬೆಂಗಳೂರಿಗೆ ಆಗಮಿಸಿರುವುದು ಎಲ್ಲರಿಗೂ ಗೊತ್ತಿರುವ ವಿಷಯ.

ಸಿಬಿಐ ನ್ಯಾಯಾಲಯ ನೀಡಿರುವ ತೀರ್ಪನ್ನು ಪ್ರಶ್ನಿಸಿ ಜನಾರ್ಧನ್ ರೆಡ್ಡಿ ಅವರ ವಕೀಲರು ಉಚ್ಚ ನ್ಯಾಯಾಲಯದ ಮೊರೆ ಹೋಗಿದ್ದು, ಒಂದು ತಿಂಗಳ ಕಾಲ ರಜೆ ಇರುವ ಕಾರಣ, ಪೂರ್ಣ ಪ್ರಮಾಣದ ಉಚ್ಚ ನ್ಯಾಯಾಲಯದ ಪೀಠ ಇಲ್ಲದೇ ಇರುವ ಹಿನ್ನೆಲೆಯಲ್ಲಿ ಪ್ರಕರಣ ಮುಂದೂಡುತ್ತಲೆ ಬಂದಿದ್ದು, ಇದೇ



ತಿಂಗಳು 10 ನೇ ತಾರೀಕು ಪ್ರಕರಣ ವಿಚಾರಣೆಗೆ ಬರಲಿದ್ದು, ಜನಾರ್ಧನ್ ರೆಡ್ಡಿ ಅವರ ಬಿಡುಗಡೆಗಾಗಿ ಮತ್ತು ಜನತೆಗೆ ಒಳ್ಳೆಯದಕ್ಕಾಗಿ ಶ್ರೀಮತಿ ಲಕ್ಷ್ಮಿ ಅರುಣಾ ಜನಾರ್ಧನ್ ರೆಡ್ಡಿ ಅವರು ರಾಜ್ಯದ ಪ್ರಮುಖ ದೇವಸ್ಥಾನಗಳಿಗೆ ಭೇಟಿ ನೀಡಿ ವಿಶೇಷ ಹೋಮ ಹವನ ಪೂಜೆಗಳನ್ನು ಸಲ್ಲಿಸುತ್ತಿದ್ದಾರೆ.

ಆಂಜನೇಯನ ಜನ್ಮಸ್ಥಳವಾದ ಶ್ರೀ ಅಂಜನಾದ್ರಿಯಲ್ಲಿ ವಿಶೇಷ ಪೂಜೆಯನ್ನು ಸಲ್ಲಿಸಿ ತದನಂತರ ಪಟ್ಟಾಭಿರಾಮ ದೇವಸ್ಥಾನದಲ್ಲಿ ವಿಶೇಷ ಪೂಜೆಯನ್ನು ಸಲ್ಲಿಸಿ ಸುಂದರಕಾಂಡ ರಾಮಾಯಣದ ಕೋಟಿ ಬರಹಕ್ಕೆ ಸಂಕಲ್ಪವನ್ನು ಮಾಡಿರುತ್ತಾರೆ. ತದನಂತರ ಉಡುಪಿಯ ಶ್ರೀ ಕೃಷ್ಣನ ದರ್ಶನವನ್ನು ಪಡೆದು, ಪುತ್ತಿಗೆ ಶ್ರೀಗಳ ಆಶೀರ್ವಾದವನ್ನು ಪಡೆದು,ನಂತರ ನಂತರ ಶ್ರೀ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದಲ್ಲಿ ವಿಶೇಷ ಪೂಜೆ ಹೋಮ ಹವನಗಳನ್ನು ಸಲ್ಲಿಸಿ, ಶತ್ರು ನಿವಾರಣೆ ಹಾಗೂ ಸಂಕಷ್ಟಗಳ ನಿವಾರಣೆಗಾಗಿ, ಸುಖ ಶಾಂತಿ ನೆಮ್ಮದಿಗಾಗಿ ವಿಶೇಷ ಪೂಜೆ ಸಲ್ಲಿಸಿದರು. ನಂತರ ಬ್ರಹ್ಮಲಿಂಗೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ಆಶೀರ್ವಾದ ಪಡೆದರು. ಇಂದು ಅಸ್ಸಾಂ ರಾಜ್ಯದ ಪ್ರಮುಖ ದೇವಸ್ಥಾನವಾದ ಕಾಮಾಖೀನಿ ದೇವಿಯ ದರ್ಶನ ಪಡೆದು ವಿಶೇಷ ಪೂಜೆಯನ್ನು ಸಲ್ಲಿಸಿದರು. ಈ ಎಲ್ಲಾ ಬೆಳವಣಿಗೆಗಳನ್ನು ನೋಡಿದರೆ ಕಳೆದ ಒಂದು ವಾರದಿಂದ ಶ್ರೀ ಲಕ್ಷ್ಮಿ ಅರುಣಾ ಜನಾರ್ದನ್ ರೆಡ್ಡಿ ಅವರು ವಿವಿಧ ದೇವಸ್ಥಾನಗಳಲ್ಲಿ ಪೂಜೆ ಹೋಮ ಹವನ ಮಾಡುವುದರ ಮೂಲಕ ತಮ್ಮ ಪತಿಗೆ ಒಳ್ಳೆಯದಾಗಲಿ ಮತ್ತು 10ನೇ ತಾರೀಕು ನಡೆಯುವ ವಿಚಾರಣೆಯಲ್ಲಿ ನ್ಯಾಯ ದೇವತೆ ಆಶೀರ್ವಾದ ಮಾಡಲಿ ಎಂಬ ದೃಷ್ಟಿಯಿಂದ ರಾಜ್ಯದ ಅನೇಕ ಧರ್ಮ ಕ್ಷೇತ್ರಗಳಿಗೆ ಭೇಟಿ ನೀಡುತ್ತಿದ್ದಾರೆ.

ಇದೇ ಸಂದರ್ಭದಲ್ಲಿ ಶ್ರೀ ಲಕ್ಷ್ಮಿ ಅರುಣಾ ಜನಾರ್ದನ್ ರೆಡ್ಡಿ ಅವರು ಕಳೆದ ಬಾರಿ ಮಾತ್ರ ಚುನಾವಣೆಗೆ ಸ್ಪರ್ಧೆ ಮಾಡಿದ್ದು, ಈ ಹಿಂದೆ 1999ರಿಂದ ಬಿಜೆಪಿ ಹಿರಿಯ ನಾಯಕಿ ದಿವಂಗತ ಶ್ರೀ ಸುಷ್ಮಾ ಸ್ವರಾಜ್ ಅವರು ಬಳ್ಳಾರಿಗೆ ಆಗಮಿಸಿದ ಸಂದರ್ಭದಲ್ಲಿ ಕೂಡ, ಯಾವುದೇ ರಾಜಕೀಯದ ಬಗ್ಗೆ ತಲೆಕೆಡಿಸಿಕೊಳ್ಳದ ಶ್ರೀಮತಿ ಲಕ್ಷ್ಮಿ ಅರುಣಾ ಜನಾರ್ದನ್ ರೆಡ್ಡಿ ಅವರು, ಜನಾರ್ದನ ರೆಡ್ಡಿ ಅವರು ತೆಗೆದುಕೊಳ್ಳುವಂತಹ ನಿರ್ಧಾರದ ಬಗ್ಗೆ ಎಂದು ಕೂಡ ಚಕಾರವನ್ನು ಎತ್ತದೆ ಅದಕ್ಕೆ ಪೂರ್ಣವಾಗಿ ಬೆಂಬಲಿಸುತ್ತಾ ಬಂದರು. 1999 ರಲ್ಲಿ ನಡೆದ ಚುನಾವಣೆಯಲ್ಲಿ ಶ್ರೀಮತಿ ಸುಷ್ಮಾ ಸ್ವರಾಜ್ ಅವರ ಸೋಲಿನ ನಂತರ, 2001 ರಿಂದ ಬಳ್ಳಾರಿಯ ನಗರಸಭೆ ವಿಜಯದ ಪತಾಕೆಯಿಂದ ಆರಂಭಗೊಂಡಿರುವ, ಅಲ್ಲಿನ ಬಿಜೆಪಿಯಲ್ಲಿನ ಸಂಘಟನೆ ಹಾಗೂ ಬಿಜೆಪಿಯನ್ನು ಬಲಿಷ್ಠವಾಗಿ ಬೆಳೆಸಿದರಲ್ಲಿ ಜನಾರ್ದನ್ ರೆಡ್ಡಿ ಅವರ ಪಾತ್ರ ಬಹುಮುಖ್ಯ ಎಂಬುದು ಎಲ್ಲರಿಗೂ ಗೊತ್ತಿರುವ ವಿಷಯ. ಆ ಸಂದರ್ಭದಲ್ಲಿ ಜನಾರ್ದನ್ ರೆಡ್ಡಿ ಮತ್ತು ಶ್ರೀರಾಮುಲು ಬಿಜೆಪಿ ಪಕ್ಷವನ್ನು ಒಂದಾಗಿ ಕಟ್ಟಿಕೊಂಡು ಬಂದರು. ಆದರೆ ಎಂದು ಕೂಡ ಶ್ರೀಮತಿ ಲಕ್ಷ್ಮಿ ಅರುಣಾ ಜನಾರ್ದನ್ ರೆಡ್ಡಿ ಅವರು ಪಕ್ಷದ ಸಂಘಟನೆಗಾಗಿ, ಹಾಗೂ ಅನೇಕ ಶಾಸಕರು ಮತ್ತು ಸಂಸದರುಗಳನ್ನು ಚುನಾವಣೆಯಲ್ಲಿ ಗೆಲ್ಲಿಸುತ್ತಿರುವ ಜನಾರ್ದನ್ ರೆಡ್ಡಿ ಅವರ ಯಾವುದೇ ವಿಷಯದಲ್ಲಿ ಚಕಾರ ಎತ್ತದೆ ಲಕ್ಷ್ಮಿ ಜನಾರ್ದನ್ ರೆಡ್ಡಿ ಅವರು ಜನಾರ್ದನ್ ರೆಡ್ಡಿ ಅವರನ್ನು ಬೆಂಬಲಿಸುತ್ತದೆ ಬಂದರು.

ತದನಂತರದಲ್ಲಿ ಜನಾರ್ದನ್ ರೆಡ್ಡಿ ಅವರು ಸಿಬಿಐ ಬಂದನಕ್ಕೆ ಒಳಗಾದ ನಂತರ ನಡೆದಿರುವಂತಹ ಹಲವಾರು ವಿದ್ಯಮಾನಗಳನ್ನು ಎಲ್ಲವನ್ನು ನೋಡಿದಾಗ ಕುಟುಂಬದ ಸದಸ್ಯರು ಮತ್ತು ಆತ್ಮೀಯ ಸ್ನೇಹಿತರು ಅಂತರವನ್ನು ಕಾಯ್ದುಕೊಂಡಿರುವ ಸಂದರ್ಭ ಬಂದಾಗ ಅನಿವಾರ್ಯವಾಗಿ ಕಳೆದ ಬಾರಿ ವಿಧಾನಸಭೆ ಚುನಾವಣೆಯಲ್ಲಿ ಶ್ರೀಮತಿ ಲಕ್ಷ್ಮಿ ಅರುಣ ಜನಾರ್ದನ್ ರೆಡ್ಡಿ ಅವರು ಚುನಾವಣೆಗೆ ಸ್ಪರ್ಧೆಯನ್ನು ಮಾಡಿದ್ದು ಮತ್ತು ಸಕ್ರಿಯವಾಗಿ ಪತಿ ಜನಾರ್ಧನ್ ರೆಡ್ಡಿ ಅವರಿಂದ ಎಲ್ಲರೂ ದೂರವಾಗುತ್ತಿರುವ ಹಿನ್ನೆಲೆಯಲ್ಲಿ ತಾವೇ ಖುದ್ದಾಗಿ ಹೋರಾಟಕ್ಕೆ ಇಳಿಯಬೇಕು ಎಂಬ ಯೋಚನೆಯಿಂದ ಚಿತ್ರದುರ್ಗದ ಒನಕೆ ಓಬವ್ವ, ಕಿತ್ತೂರ ರಾಣಿ ಚೆನ್ನಮ್ಮ ಅವರ ಹೋರಾಟವನ್ನು ನೆನಪಿಸಿಕೊಂಡು ಅವರ ಹಾದಿಯಲ್ಲಿ ಮುಂದುವರೆಯಲು ನಿರ್ಧಾರವನ್ನು ತೆಗೆದುಕೊಂಡು ಪತಿಯ ಹಾದಿಯಲ್ಲಿ ಸಾರ್ವಜನಿಕ ಜೀವನದಲ್ಲಿ ಗುರುತಿಸಿಕೊಂಡು, ಪತಿಗೆ ಸಹಕರಿಸಲು ನಿರ್ಧರಿಸಿಕೊಂಡಿದ್ದಾರೆ.

ಇದೇ ಸಂದರ್ಭದಲ್ಲಿ ವಿಚಿತ್ರ ಮತ್ತು ಆಶ್ಚರ್ಯದ ಸಂಗತಿ ಎಂದರೆ ತಮ್ಮ ಸಂಬಂಧಿಕರು ಆತ್ಮೀಯ ಗೆಳೆಯರು ಕೂಡ ಪೂರ್ಣಪ್ರಮಾಣದಲ್ಲಿ ಅಂತರ ಕಾಯ್ದುಕೊಂಡಿದ್ದಕ್ಕಾಗಿ ಇನ್ನು ತಮಗೆ ದೇವರೇ ಗತಿಯೆಂದು ನಂಬಿಕೊಂಡು ತಮ್ಮ ಪತಿಗೆ ಒಳ್ಳೆಯದಾಗಲಿ ಎಂದು ನೆನೆಯುತ್ತಾ ಪ್ರತಿಷ್ಠಿತ ದೇವಸ್ಥಾನಗಳ ಭೇಟಿ ನೀಡಿ ಪೂಜೆ ಪುನಸ್ಕಾರ ಹೋಮ ಹವನಗಳನ್ನು ನಡೆಸುತ್ತಿರುವುದು ವಿಶೇಷ.

# ನಗರಸಭೆ ಸಾಮಾನ್ಯ ಸಭೆ ಸದಸ್ಯರಿಗೆ ಅಗೌರವ-ಪೌರಾಯುಕ್ತರ ವಿರುದ್ಧ ಗರಂ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.6–ನಗರದ ನಗರಸಭೆಯಲ್ಲಿ ಶುಕ್ರವಾರ ಜರುಗಿದ ಸಾಮಾನ್ಯ ಸಭೆಯಲ್ಲಿ ಮಹಿಳಾ ಸದಸ್ಯೆ ಸ್ಮಿತಾ ಪವಾರ ಪೌರಾಯುಕ್ತರ ವಿರುದ್ಧ ಗುಡುಗಿ, ಕಚೇರಿಗೆ ಬರುವ ಸದಸ್ಯರನ್ನು ಅವಮಾನಿಸುವ ಚಾಳಿಯನ್ನು ಬಿಡಬೇಕು ಎಂದು ಹರಿಹಾಯ್ದರು.



ಬೆಳಿಗ್ಗೆ ಸಭೆ ಆರಂಭಗೊಳ್ಳುತ್ತಿದ್ದಂತೆ ಪೌರಾಯುಕ್ತ ಆರ್.ವಾಸಣ್ಣ ವಿರುದ್ಧ ವಾಗ್ದಾಳಿ ಆರಂಭಿಸಿದ ಸದಸ್ಯೆ ಪವಾರ, ಸದಸ್ಯರು ವಾರ್ಡ ಜನರ ಸಮಸ್ಯೆ ಪರಿಹಾರಕ್ಕೆ ತಮ್ಮ ಬಳಿ ಬಂದರೆ ನಮ್ಮನ್ನು ಅಗೌರವದಿಂದ ಕಾಣುವುದಲ್ಲದೇ ಜನರ ಮುಂದೆ ಅವಮಾನಿಸುತ್ತೀರಿ ಇದು ಸರಿಯೇ ಎಂದು ಪ್ರಶ್ನಿಸಿದರು.

ಆಗ ಮಧ್ಯ ಪ್ರವೇಶಿಸಿ ಉತ್ತರಿಸಿದ ಪೌರಾಯುಕ್ತ ವಾಸಣ್ಣ, ನೀವು ಯಾವಗಲೋ ನಡೆದ ಘಟನೆಯನ್ನು ಈಗ ಹೇಳುತ್ತಿದ್ದೀರಿ, ನಾನೇನು ಆ ರೀತಿ ನಡೆದುಕೊಂಡಿಲ್ಲ ಎಂದು ಸಮರ್ಥನೆ ಮಾಡಿಕೊಂಡರು. ಈ ಮಾತಿಗೆ ಕೆರಳಿದ ಸದಸ್ಯೆ ಪವಾರ, ಅವಮಾನ ಮಾಡಿದ್ದರೂ ಇಲ್ಲವೆನ್ನುವ ನಿಮ್ಮ ಸಮರ್ಥನೆಗೆ ಏನೆನ್ನಬೇಕು. ನಮ್ಮೂರಿನ ಜನ ನಿಮಗೆ ಸರಿಯೆನಿಸಿದರೆ, ನೌಕರಿ ಮಾಡುವುದಾದರೆ ಮಾಡಿ, ಇಲ್ಲದಿದ್ದರೆ ಬೇರೆ ಊರಿಗೆ ಹೋಗಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸ್ಮಿತಾ ಪವಾರ ಅವರ ಬೆಂಬಲಕ್ಕೆ ನಿಂತ ಇನ್ನೋರ್ವ ಮಹಿಳಾ ಸದಸ್ಯೆ ಶಶಿಕಲಾ ಮಜ್ಜಗಿ, ಪೌರಾಯುಕ್ತರೇ ನೀವು ಸದಸ್ಯರೊಂದಿಗೆ ಅಗೌರವದಿಂದ ನಡೆದುಕೊಂಡಿದ್ದು ಸತ್ಯ. ಅದನ್ನು ಒಪ್ಪಿಕೊಳ್ಳಿ ಎಂದರು. ಆಗ ಮತ್ತೆ ಪವಾರ ಅವಮಾನದ ಮಾತು ಮುಂದುವರೆಸಿದಾಗ, ನಿಮ್ಮ ಆರೋಪ ಸರಿಯಲ್ಲ, ನೀವು ಹೇಳಿದ ಟೆಂಡರ ರದ್ದು ಮಾಡಲಿಲ್ಲ ಎಂಬ ಕಾರಣಕ್ಕೆ ನನ್ನ ವಿರುದ್ಧ ಮಾತನಾಡುತ್ತೀರಿ ಎಂದು ಏರು ಧ್ವನಿಯಲ್ಲಿ ಹೇಳಿದರು. ಇದಕ್ಕೂ ಜಗ್ಗದ ಸದಸ್ಯರು ನಿಮ್ಮ ತಪ್ಪನ್ನು ಒಪ್ಪಿಕೊಳ್ಳಿ ಎಂದು ಪೌರಾಯುಕ್ತರನ್ನು ಒತ್ತಾಯಿಸಿದರು.

ಪೌರಾಯುಕ್ತರು ಹಾಗೂ ಸದಸ್ಯೆಯ ಮಧ್ಯೆ ಇಷ್ಟೆಲ್ಲ ವಾಗ್ವಾದ ನಡೆಯುತ್ತಿದ್ದರೂ ನಗರಸಭೆ ಅಧ್ಯಕ್ಷ–ಉಪಾಧ್ಯಕ್ಷರು ಸೇರಿ ಆಡಳಿತಾರೂಢ ಬಿಜೆಪಿ ಸದಸ್ಯರೇ ಸದಸ್ಯೆ ಸ್ಮಿತಾ ಪವಾರ ಬೆಂಬಲಕ್ಕೆ ನಿಲ್ಲದಿರುವುದು ಇವರೆಲ್ಲರೂ ಪೌರಾಯುಕ್ತರನ್ನು ಬೆಂಬಲಕ್ಕೆ ನಿಂತರೇ ಎಂಬ ಮಾತುಗಳು ಕೇಳಿ ಬರುತ್ತಿವೆ.

# ಸೇನಾ ಆಯ್ಕೆ ಪೂರ್ವ ತರಬೇತಿಗೆ ವಿದ್ಯುಕ್ತ ಚಾಲನೆ: ಸೇನಾ ಶಾಲೆಯ ಮೂಲಸೌರ್ಕಕ್ಕೆ ಬದ್ಧ, ಸೈನಿಕರಾಗಿ ಆಯ್ಕೆಯಾಗುವಂತೆ ಮಕ್ಕಳಿಗೆ ತರಬೇತಿ ಕೊಡಿ :ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.6

ಕಲಬುರಗಿಯ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಯಲ್ಲಿ ಮಕ್ಕಳಿಗೆ ಅಗತ್ಯವಿರುವ ಎಲ್ಲಾ ರೀತಿಯ ಮೂಲಸೌಕರ್ಯ ಒದಗಿಸಲಾಗುವುದು. ನಮ್ಮ ಭಾಗದ ಮಕ್ಕಳು ದೇಶ ಸೇವೆಗೈಯಲು ಸೈನಿಕರಾಗಿ ಆಯ್ಕೆಯಾಗುವಂತೆ ತರಬೇತಿ ಕೊಡಬೇಕು ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಗುಲಬರ್ಗಾ ವಿ.ವಿ. ಆವರಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ ಆವರಣದಲ್ಲಿ ಎರಡನೇ ತಂಡದ ತರಬೇತಿಗೆ ವಿದ್ಯುಕ್ತ ಚಾಲನೆ ನೀಡಿ ಮಾತನಾಡಿದ ಅವರು, ಪ್ರಸ್ತುತ 100 ಸಂಖ್ಯೆ ಮಕ್ಕಳಿಗೆ ತರಬೇತಿ ನೀಡುವ ಸಾಮರ್ಥ್ಯ




ಇದ್ದು, ಇದನ್ನು ಅಗತ್ಯವಿದ್ದಲ್ಲಿ 500 ಸಂಖ್ಯೆಗೆ ಹೆಚ್ಚಿಸಲು ಸಹ ಪ್ರಸ್ತಾವನೆ ಕೊಡಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಭಾರತದೇಶ ಇಂದು ಆರ್ಥಿಕವಾಗಿ ಬಲಿಷ್ಠರಾಷ್ಟ್ರವಾಗುವತ್ತ ದಾಪುಗಾಲು ಇಟ್ಟಿದೆ. ಇದಕ್ಕೆ ಪ್ರಜಾಪ್ರಭುತ್ವದ ವ್ಯವಸ್ಥೆ ಕಾರಣವಾದರೆ, ಪ್ರಜಾಪ್ರಭುತ್ವ ಉಳಿವಿಗೆ ಸೇನೆ ಪಾತ್ರ ಹೆಚ್ಚು. ದೇಶ ಸೇವೆಗೆ ತಾವೆಲ್ಲ ಮನೆ–ಮಠ ಬಿಟ್ಟು ಬಂದಿದ್ದೀರಿ. ಕಠಿಣ ಸೇವೆಯ ತರಬೇತಿಗೆ ತಾವೆಲ್ಲ ಅಣಿಯಾಗಿರುವುದು ತಮಗೆ ಸಂತೋಷ ತಂದಿದೆ ಎಂದ ಅವರು, ಕಾಲೇಜು ಮಟ್ಟದಲ್ಲಿ ಯುವಜನತೆಗೆ ಶಿಸ್ತಿನ ಅಭ್ಯಾಸ ಅತ್ಯಗತ್ಯವಾಗಿದೆ ಎಂದು ಪ್ರತಿಪಾದಿಸಿದರು. ಅಮ್ಮ ಒಪ್ಪಿಗೆ ಇಲ್ಲದಕ್ಕಾಗಿ ತರಬೇತಿ ಮೊಟಕುಗೊಳಿಸಬೇಕೈತು:

ನಾನು ಪ್ರೌಢ ಶಾಲೆಯಲ್ಲಿದ್ದಾಗ ಎನ್.ಸಿ.ಸಿ. ತರಬೇತಿ ಪಡೆದುಕೊಂಡಿರುವೆ. ಮುಂದೆ ಏರ್ ಫೋರ್ಸ್‌ನಲ್ಲಿ ತರಬೇತಿ ಪಡೆಯಲು ಹೋಗಿದ್ದೆ. ಕೆಲವು ದಿನ ತರಬೇತಿ ಸಹ ಪಡೆದಿದ್ದೆ. ಆದರೆ ತರಬೇತಿಗೆ ತಂದೆ–ತಾಯಿಯ ಸಹಿ ಕಡ್ಡಾಯವಾಗಿತ್ತು. ತಂದೆಯವರ ಸಹಿ ಮಾಡಿಸಿಕೊಂಡಿದೆ, ಅಮ್ಮ ಸಹಿ ಮಾಡಲು ನಿರಾಕರಿಸಿದರು. ಹೀಗಾಗಿ ಏರ್ ಫೋರ್ಸ್ ಮೂಲಕ ದೇಶ ಸೇವೆ ಮಾಡಬೇಕೆನ್ನುವ ಆಸೆ ಈಡೇರಿಲಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಮ್ಮ ಬಾಲ್ಯದ ಘಟನೆಯ ಮೆಲುಕು ಹಾಕಿದರು.

ಇದೇ ಸಂದರ್ಭದಲ್ಲಿ ತರಬೇತಿ ಪಡೆಯುತ್ತಿರುವ ಮಕ್ಕಳು ತರಬೇತಿಯ ಪ್ರದರ್ಶನ ಮಾಡಿದಲ್ಲದೆ ಭಯೋತ್ಪಾದಕರು ದೇಶಕ್ಕೆ ನುಗ್ಗಿ ಬಂಕರ್‌ನಲ್ಲಿ ಅಡಗಿ–ಕೊಂಡಾಗ ಅವರನ್ನು ಹೊಡೆದು ಬಂಕರ್ ಸರ್ವನಾಶ ಮಾಡುವ ಬಂಕರ್ ಡ್ರಿಲ್ ಮಕ್ಕಳಿಂದ ಪ್ರದರ್ಶನವಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್

ಆಲಂ ಖಾನ್, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಹಿಂದುಳಿದ ವರ್ಗಗಳ

ಕಲ್ಯಾಣಾಧಿಕಾರಿ ಸೋಮಶೇಖರ್ ವೈ. ಇದ್ದರು.

ಕರ್ನಾಟಕ ಸರ್ಕಾರ

**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ.**
**ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.**

ನಂ: ಇಇ/ಎಂಐಡಿ/ಬೀದರ/ತಾ.ಶಾ–1/ಟೆಂಡರ್/2024–25/1029 ದಿನಾಂಕ: 05–06–2025

**ಕೆಪಿಪಿ–ಪ್ರೋಕ್ಯೂರಮೆಂಟ್, ಟೆಂಡರ್ ಪ್ರಕಟಣೆ**

1) ಕಾಮಗಾರಿಗಳ ವಿವರ. KPP -Portal ನಲ್ಲಿ ನಮೂದಿಸಿದಂತೆ. 2) ಕಾಮಗಾರಿಗಳ ಅಂದಾಜು ಮೊತ್ತ. :KPP -Portalನಲ್ಲಿ ನಮೂದಿಸಿದಂತೆ. 3) ಗುತ್ತಿಗೆದಾರರ ಅರ್ಹತೆ ವಿವರ.KPP -Portalನಲ್ಲಿ ನಮೂದಿಸಿದಂತೆ, 4) ಕಾಮಗಾರಿಗಳ ಟೆಂಡರ ಮೊತ್ತದ ವಿವರ.KPP -Portal ನಲ್ಲಿ ನಮೂದಿಸಿದಂತೆ, 5) ಟೆಂಡರ್ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ.KPP -Portalನಲ್ಲಿ ನಮೂದಿಸಿದಂತೆ. 6) ಟೆಂಡರ ಬಗ್ಗೆ ಮಾಹಿತಿ ಹಾಗೂ ಕ್ಲಾರಿಫಿಕೇಶನ್ ಕೊನೆಯ ದಿನಾಂಕ: ಕೆ.ಡಬ್ಲ್ಯೂ –2 ಮಾತ್ರ: 11–06–2025 ರಂದು 17.00 ಗಂಟೆವರೆಗೆ. 8) ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ ಕೆ.ಡಬ್ಲ್ಯೂ –2 ಮಾತ್ರ: 13–06–2025 ರಂದು 16.00 ಗಂಟೆಗೆ ಸಾದ್ಯವಾದಲ್ಲಿ. 9) ಟೆಂಡರ ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಕೆ.ಡಬ್ಲ್ಯೂ –2 ಮಾತ್ರ: 16–06–2025 ರಂದು 11.00 ಗಂಟೆಗೆ ಸಾದ್ಯವಾದಲ್ಲಿ, 10) ಟೆಂಡರ ಆರ್ಥಿಕ ಬಿಡ್ ತೆರೆಯುವ ದಿನಾಂಕ ಕೆ.ಡಬ್ಲ್ಯೂ –2 ಮಾತ್ರ 18–06–2025 ರಂದು 11.00 ಗಂಟೆಗೆ ಸಾದ್ಯವಾದಲ್ಲಿ, 11) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ.:ಕಾರ್ಯನಿರ್ವಾಹಕ ಇಂಜಿನೀಯರರು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ.ವಿಭಾಗ, ಬೀದರ. ದೂರವಾಣಿ ಸಂ: 08482 232080, 12) ಅಂತರ್ಜಾಲ ತಾಣದ ವಿಳಾಸ.KPP portal https://kppp.karnataka.gov.in

ಸಹಿ/– ಕಾರ್ಯ ನಿರ್ವಾಹಕ ಅಭಿಯಂತರರು, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.

ವಾ.ಸಾ.ಸಂ.ಇ/ಬೀದರ/61/ಕೆ.ಎಸ್.ಎಂ.ಸಿ.&ಎ/2025–26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.